ಸಂಪುಟ: 22, ಸಂಚಿಕೆ: 149, ಪುಟಗಳು: 8, ಭಾನುವಾರ, 9 ಮಾರ್ಚ್ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3




ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com



We Undertake Printing of Newspapers | Tabloids | Magazines


### ಸುಭಾಷಿತ

ಬದುಕಿ ಇತರರನ್ನೂ ಬದುಕಲು ಬಿಡಿ ಎಂಬುದೇ ನಮ್ಮ ಜೀವನದ ಏಕೈಕ ಮಂತ್ರವಾಗಬೇಕು.

-ಮಹಾತ್ಮ ಗಾಂಧೀಜಿ

### ಪಂಚಾಂಗ

(ಭಾನುವಾರ 9, ಮಾರ್ಚ್-2025)

- ಸಂವತ್ಸರ: ಕ್ರೋಧಿನಾಮ
- ಋತು: ಶಿಶಿರ
- ಅಯನ: ಉತ್ತರಾಯಣ
- ಮಾಸ: ಫಾಲ್ಗುಣ, ಪಕ್ಷ: ಶುಕ್ಲ
- ತಿಥಿ: ದಶಮಿ, ನಕ್ಷತ್ರ: ಪುನರ್ವಸು
- ರಾಹುಕಾಲ: 04:59 - 06:29
- ಗುಳಿಕಕಾಲ: 03:29 - 04:59
- ಯಮಗಂಡಕಾಲ: 12:30 - 01:59

## ಸಂಕ್ಷಿಪ್ತ ಸುದ್ದಿ

### ಮಲೆಯ ಒಡೆಯ ಮಹದೇಶ್ವರನ ಬೆಟ್ಟದಲ್ಲಿ 300 ಲೀಟರ್ ಮದ್ಯ ಜಪ್ತಿ



**ಚಾಮರಾಜನಗರ:** ಏಳು ಮಲೆ ಎಪ್ಪತ್ತೇಳು ಮಲೆಯ ಒಡೆಯ, ದಂಡಕಾರಣ್ಯದ ನಡುವೆ ಬೆಟ್ಟದಲ್ಲಿ ನೆಲೆ ನಿಂತಿರುವ ಮಹದೇಶ್ವರ ಬೆಟ್ಟದಲ್ಲಿ ಅಕ್ರಮ ಮದ್ಯದ ಘಾಟು ಹೆಚ್ಚಾಗಿದೆ. ಮದ್ಯ ಹಾಗೂ ತಂಬಾಕು ಮುಕ್ತ ಮಲೆ ಮಹದೇಶ್ವರ ಬೆಟ್ಟದ ಹೊತ್ತಾಸೆಗೆ ಬೆಟ್ಟದಲ್ಲೆ ವಾಸಿಸುವ ಕೆಲ ಕಿಡಿಗೇಡಿಗಳು ಸಂಚಕಾರ ತಂದಿದ್ದಾರೆ. ಪಾವಿತ್ರ್ಯಕ್ಕೆ ತೊಡಕಾಗಿದ್ದಾರೆ. ಮಲೆ ಮಹದೇಶ್ವರ ಬೆಟ್ಟದಲ್ಲಿ ಎಗ್ಗಿಲ್ಲದೆ ಅಕ್ರಮ ಮದ್ಯ ಮಾರಾಟ ಆಗುತ್ತಿದ್ದು, ನಿನ್ನೆ ನಡೆದ ಪೊಲೀಸರ ದಾಳಿ ವೇಳೆ ಬರೋಬ್ಬರಿ 300 ಲೀಟರ್ ಮದ್ಯ ಸಿಕ್ಕಿದೆ.

ಪುಟ 2

### ನೇಣು ಬಿಗಿದುಕೊಂಡು ಆತ್ಮಹತ್ಯೆ




**ಬೆಂಗಳೂರು:** ನೇಣು ಬಿಗಿದುಕೊಂಡು ಯುವಕ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಬೆಂಗಳೂರಿನ ಕೊತ್ತನೂರಿನ ಕೆ.ನಾರಾಯಣಪುರದಲ್ಲಿ ನಡೆದಿದೆ. ಸುನೀಲ್ (28) ಆತ್ಮಹತ್ಯೆ ಮಾಡಿಕೊಂಡ ಯುವಕ. ಮಾ.7ರಂದು ತಡರಾತ್ರಿ ಘಟನೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಯಶವಂತಪುರ ನಿವಾಸಿಯಾಗಿದ್ದ ಸುನೀಲ್‌ಗೆ ಡ್ರಗ್ಸ್ ಜೊತೆಗೆ ಹುಡುಗಿಯರ ಶೋಕಿ ಕೂಡ ಇತ್ತು. ತನ್ನ ಚಟಕ್ಕಾಗಿ ಮನೆಯಲ್ಲಿಯೇ ಚಿನ್ನ, ಹಣ ಕಳ್ಳತನ ಮಾಡುತ್ತಿದ್ದ. ಇದನ್ನು ಮನೆಯವರು ಪ್ರಶ್ನಿಸಿದರೇ ಸಾಯೋದಾಗಿ ಹೇಳುತ್ತಿದ್ದ. ನಂತರ ಮನೆಬಿಟ್ಟು ಕೊತ್ತನೂರು ಪಿಜಿ ಸೇರಿದ್ದ ಸುನೀಲ್, ಗ್ಯಾರೇಜ್‌ನಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದ. ಮಾ.7ರಂದು ರಾತ್ರಿ ಮಾಲೀಕನಿಗೆ ಸಾಯೋದಾಗಿ ಮೆಸೇಜ್

ಪುಟ 2

ಬ್ರ್ಯಾಂಡ್ ಬೆಂಗಳೂರು: ಒಳಚರಂಡಿ ನೀರಿನ ಸಂಸ್ಕರಣೆಗೆ

## ಸರ್ಕಾರದಿಂದ ಹೊಸ ಪ್ಲಾನ್?



**ಬೆಂಗಳೂರು:** ಚಪ್ರತಿ ಬಾರಿ ಮಳೆಗಾಲದಲ್ಲಿ ಎದುರಾಗುವ ಪ್ರವಾಹದ ಸ್ಥಿತಿ, ಇತ್ತ ಬೇಸಿಗೆಗೆ ಸುಡು ಬಿಸಿಲಿನ ತಾಪಕ್ಕೆ ನೀರಿನ ಅಭಾವ, ಪದೇ ಪದೇ ಬದಲಾಗುವ ಹವಾಮಾನಕ್ಕೆ ತಕ್ಕಂತೆ ಬ್ರ್ಯಾಂಡ್ ಬೆಂಗಳೂರನ್ನು ಸಜ್ಜುಗೊಳಿಸಲು ಸರ್ಕಾರ ಹೊಸದೊಂದು ಪ್ಲಾನ್‌ಗೆ ಸಜ್ಜಾಗಿದೆ. ಬೆಂಗಳೂರಿನ ಚರಂಡಿಗಳ ನಿರ್ವಹಣೆ ನೀರಿನ ವ್ಯವಸ್ಥೆಯನ್ನು ಬಲಗೊಳಿಸಲು ಹೊಸ ಯೋಜನೆ ರೂಪಿಸಲು ಜಲಮಂಡಳಿ, ಬಿಬಿಎಂಪಿಯ ಮೂಲಕ ಹೊಸ ಹೊಸ ಪ್ರಯೋಗ ಮಾಡಲು ತಯಾರಿ ನಡೆದಿದೆ. ಸದ್ಯ ವರ್ಲ್ಡ್ ಬ್ಯಾಂಕ್‌ನಲ್ಲಿ ಸಾಲ ಪಡೆಯಲು ಹೊರಟಿರುವ ಸರ್ಕಾರ ಬರೋಬ್ಬರಿ 5 ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಬ್ರ್ಯಾಂಡ್ ಬೆಂಗಳೂರಿಗೆ ಹೊಸ ಟಚ್ ಕೊಡಲು ಮುಂದಾಗಿದೆ.

ಪುಟ 2

ಏ.4ರಿಂದ 14ರವರೆಗೆ ಬೆಂಗಳೂರು ಕರಗ

## 20 ಲಕ್ಷ ಜನ ಭಾಗಿ ನಿರೀಕ್ಷೆ



**ಬೆಂಗಳೂರು:** ಏ.4ರಿಂದ ಏ.14ರವರೆಗೆ ಬೆಂಗಳೂರಿನ ಐತಿಹಾಸಿಕ ಕರಗ ಮಹೋತ್ಸವ ನಡೆಯಲಿದೆ. ಏಪ್ರಿಲ್ 12ರ ಚೈತ್ರ ಪೌರ್ಣಮಿಯಂದು ಕರಗ ಶಕ್ತ್ಯೋತ್ಸವ ನಡೆಯಲಿದ್ದು, ಈ ಬಾರಿಯೂ ಕರಗದ ಪೂಜಾರಿ ಎ.ಜ್ಞಾನೇಂದ್ರ, ಕರಗ ಹೊರಲಿದ್ದಾರೆ.

ಸತತ 14 ವರ್ಷಗಳಿಂದ ಬೆಂಗಳೂರು ಕರಗ ಹೊರುತ್ತಿರುವ ಎ.ಜ್ಞಾನೇಂದ್ರ, ಈ ಸಲ 15ನೇ ಬಾರಿಗೆ ಕರಗ ಹೊರಲಿದ್ದಾರೆ. ಈ ಬಾರಿ ಕರಗದಲ್ಲಿ 20 ಲಕ್ಷ ಜನ ಭಾಗಿಯಾಗುವ ನಿರೀಕ್ಷೆಯಿದೆ.

ಪುಟ 2

# ಕೆಎಸ್‌ಆರ್‌ಟಿಸಿಯಲ್ಲಿ ಮಹಿಳಾ ದಿನಾಚರಣೆ

## ಮಹಿಳಾ ಸಿಬ್ಬಂದಿಗೆ ಅಭಿನಂದಿಸಿದ ಸಚಿವ ರಾಮಲಿಂಗಾರೆಡ್ಡಿ

**ಬೆಂಗಳೂರು:** ಎಲ್ಲ ರಂಗಗಳಲ್ಲಿಯೂ ಮಹಿಳೆಯರು ಪುರುಷರಿಗೆ ಸಮಾನವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ನಮ್ಮ ನಿಗಮದ ತಾಂತ್ರಿಕ ಸಿಬ್ಬಂದಿಗಳು ಪುರುಷ ಸಿಬ್ಬಂದಿಗಳಷ್ಟೇ ಮಹಿಳೆಯರು ಹೆಚ್ಚಿನ ಕಾರ್ಯಕ್ಷಮತೆಯಿಂದ ಕಾರ್ಯನಿರ್ವಹಿಸಿ, ವಾಹನಗಳ ಪುನಃಶ್ಚೇತನ ಕಾರ್ಯದಲ್ಲಿ ಮುಂಚೂಣಿಯಲ್ಲಿರುವುದು ಅಭಿನಂದನೀಯ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಕೆಎಸ್ ಆರ್ ಟಿಸಿ ನಿಗಮದ ಕೇಂದ್ರ ಕಚೇರಿಯಲ್ಲಿ ಶನಿವಾರ (ಮಾ.08) ರಂದು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪದ್ಮಶ್ರೀ ಪುರಸ್ಕೃತ ಕೊಪ್ಪಳದ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೆಕ್ಯಾತರ ಅವರು ಹಾಡು ಹಾಡುವ ಮೂಲಕ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಚಿವ ರಾಮಲಿಂಗಾ ರೆಡ್ಡಿ, ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಎಲ್ಲ ರೀತಿಯಿಂದಲೂ ಅನುಕೂಲ ಕಲ್ಪಿಸಲಾಗುತ್ತಿದೆ. ಮಾರ್ಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನಿರ್ವಾಹಕಿಯರಿಗೂ ಕೂಡ ಮಾರ್ಗ ನಿಯೋಜನೆಯಲ್ಲಿ ಪ್ರಾಶಸ್ತ್ಯ ನೀಡಲಾಗುತ್ತಿದೆ. ಮಹಿಳಾ ಸಮಾನತೆ, ಸಬಲೀಕರಣ ಎಂಬುದನ್ನು ನಮ್ಮಲ್ಲಿ ಅಕ್ಷರಶಃ ಕಾಣಬಹುದಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕೆಎಸ್‌ಆರ್‌ಟಿಸಿ ಉಪಾಧ್ಯಕ್ಷ ಮಾತನಾಡಿ, ಪ್ರತಿಯೊಬ್ಬ ಯಶಸ್ವಿ ಪುರುಷನ ಹಿಂದೆ ಒಬ್ಬ ಮಹಿಳೆ ಇರುತ್ತಾಳೆ. ಪ್ರಸ್ತುತ ಎಲ್ಲ ರಂಗಗಳಲ್ಲಿಯೂ ಮಹಿಳೆಯರು ಅಭಿವೃದ್ಧಿ ಹೊಂದುತ್ತಿರುವುದು ಸ್ವಾಗತಾರ್ಹ ಎಂದು ಎಲ್ಲಾ ಪ್ರತಿಭಾ ಪುರಸ್ಕೃತ 42 ಮಹಿಳಾ ಸಿಬ್ಬಂದಿಗಳನ್ನು ಅಭಿನಂದಿಸಿದರು.




ಭಾಆಸೇ ವ್ಯವಸ್ಥಾಪಕ ನಿರ್ದೇಶಕ ವಿ. ಅನ್ಬುಕುಮಾರ್ ಮಾತನಾಡಿ, ನಿಗಮಕ್ಕೆ ಶಕ್ತಿಯಾಗಿರುವ ಎಲ್ಲ ಮಹಿಳಾ ಸಿಬ್ಬಂದಿಗಳಿಗೆ ಅಭಿನಂದಿಸಿದರು. ನಮ್ಮ ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶಕ್ತಿ ಯೋಜನೆ ಇಡೀ ದೇಶಕ್ಕೆ ಮಾರ್ಗದರ್ಶನವಾಗಿದೆ. ಶಿಕ್ಷಣವೇ ಶಕ್ತಿ, ಪ್ರತಿಯೊಬ್ಬ ಮಹಿಳೆಯರು ಶಿಕ್ಷಣ ಪಡೆಯಬೇಕು. ತಮ್ಮ ತಮ್ಮ ಮಕ್ಕಳಿಗೆ ಉತ್ತಮವಾದ ವಿದ್ಯಾಭ್ಯಾಸವನ್ನು ದೊರಕಿಸಿಕೊಟ್ಟು, ಸಬಲರನ್ನಾಗಿ ಮಾಡಬೇಕು. ಶಿಕ್ಷಣ ಒಂದೇ ಮಹಿಳೆಯರನ್ನು ಮತ್ತಷ್ಟು ಎತ್ತರಕ್ಕೆ ಕೊಂಡ್ಯೊಯಲು ಸಾಧನವಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಹಿಳಾ ತಾಂತ್ರಿಕ ಸಿಬ್ಬಂದಿಗಳೇ ಹೆಚ್ಚಿನ ಸಂಖ್ಯೆ ಕಾರ್ಯನಿರ್ವಹಿಸಿರುವ ನಗರ ಸಾರಿಗೆ ಬಸ್ಸುಗಳ ಪುನಶ್ಚೇತನದ ವಿಡಿಯೋವನ್ನು ಬಿಡುಗಡೆ ಮಾಡಲಾಯಿತು. ಕರಾರಸಾನಿಗಮದಲ್ಲಿ ಒಟ್ಟು 34,000 ಸಿಬ್ಬಂದಿಗಳಿದ್ದು, ವಿವಿಧ ಹುದ್ದೆಗಳಲ್ಲಿ ಒಟ್ಟಾರೆ 3052 ಮಹಿಳಾ ಉದ್ಯೋಗಿಗಳಿರುತ್ತಾರೆ. ಅದರಲ್ಲಿ ಮಹಿಳಾ ಅಧಿಕಾರಿ-80 ನಿರ್ವಾಹಕರು-875, ಚಾಲಕ ಕಂ ನಿರ್ವಾಹಕರು-26, ತಾಂತ್ರಿಕ ಸಿಬ್ಬಂದಿಗಳು-976, ಭದ್ರತಾ ಸಿಬ್ಬಂದಿಗಳು-110 ಕಛೇರಿ ಸಹಾಯಕರು-80 ಹಾಗೂ ಮಹಿಳಾ ಸ್ವಚ್ಚತಾಗಾರರು-135 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಪುಟ 2

## ಕೆಎಸ್‌ಆರ್‌ಟಿಸಿಗೆ 3 ರಾಷ್ಟ್ರಮಟ್ಟದ ಪ್ರಶಸ್ತಿಗಳು

**ಬೆಂಗಳೂರು:** ದೇಶದ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಒಕ್ಕೂಟದ 2023-24ನೇ ಸಾಲಿನ ಒಟ್ಟು ಮೂರು ರಾಷ್ಟ್ರೀಯ ಸಾರ್ವಜನಿಕ ಬಸ್ ಸಾರಿಗೆ ಪ್ರಶಸ್ತಿಗಳು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಲಭಿಸಿವೆ.




ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಒಕ್ಕೂಟದ ವ್ಯಾಪ್ತಿಯಲ್ಲಿ ದೇಶದ 62 ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳು ಸದಸ್ಯತ್ವವನ್ನು ಹೊಂದಿವೆ. ಸದರಿ ಒಕ್ಕೂಟವು 13ನೇ ಆಗಸ್ಟ್ 1965 ರಲ್ಲಿ ಅಸ್ತಿತ್ವಕ್ಕೆ ಬಂದಿದ್ದು ,ಭಾರತ ಸರ್ಕಾರದ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವಾಲಯದ ನಿರ್ದೇಶನದ ಅನುಸಾರ ಕಾರ್ಯನಿರ್ವಹಿಸುತ್ತದೆ.

ಪುಟ 2

## ಮದುವೆ ಮನೆಗಳಲ್ಲಿ ಇನ್ಮುಂದೆ ನೀರಿನ ಪ್ಲಾಸ್ಟಿಕ್ ಬಾಟಲಿ ಬಳಕೆ ಮಾಡುವಂತಿಲ್ಲ

**ಕೇರಳ:** ಮದುವೆ ಮನೆಗಳಲ್ಲಿ ಇನ್ನುಮುಂದೆ ಪ್ಲಾಸ್ಟಿಕ್ ಬಾಟಲಿಗಳನ್ನು ಬಳಕೆ ಮಾಡುವಂತಿಲ್ಲ ಎಂದು ಕೇರಳ ಹೈಕೋರ್ಟ್ ಆದೇಶಿಸಿದೆ. ಪರಿಸರದ ಬಗ್ಗೆ ಕಾಳಜಿ ವ್ಯಕ್ತಪಡಿಸಿರುವ ಕೇರಳ ಹೈಕೋರ್ಟ್ ರಾಜ್ಯದಲ್ಲಿ ಮದುವೆ ಸಮಾರಂಭದಲ್ಲಿ ನೀರಿನ ಪ್ಲಾಸ್ಟಿಕ್ ಬಾಟಲಿಗಳನ್ನು ಬಳಸಬಾರದು ಎಂದು ಹೇಳಿದೆ. ಸಣ್ಣ ಪ್ಲಾಸ್ಟಿಕ್ ಬಾಟಲಿಗಳು ಹಾನಿಯನ್ನುಂಟುಮಾಡುತ್ತಿವೆ ಎಂದು ನ್ಯಾಯಾಲಯ ಹೇಳಿದೆ ಮತ್ತು ಯಾವುದೇ ಕಾರ್ಯಕ್ರಮಗಳಲ್ಲಿ ಪ್ಲಾಸ್ಟಿಕ್ ವಸ್ತುಗಳನ್ನು ಬಳಸಬಾರದು ಎಂದು ಹೇಳಿದೆ.



ಮರುಬಳಕೆ ಮಾಡಲಾಗದ ಪ್ಲಾಸ್ಟಿಕ್ ಅನ್ನು ತೊಡೆದುಹಾಕಲು ಕಠಿಣ ಕ್ರಮಗಳು ಅಗತ್ಯವೆಂದು ನ್ಯಾಯಾಲಯ ಹೇಳಿದೆ. ಪ್ಲಾಸ್ಟಿಕ್ ನೀರಿನ ಬಾಟಲಿಗಳ ಮೇಲಿನ ನಿಷೇಧವನ್ನು ಪ್ರಾಯೋಗಿಕವಾಗಿ ಹೇಗೆ ಜಾರಿಗೆ ತರಬಹುದು ಎಂದು ನ್ಯಾಯಾಲಯ ಪ್ರಶ್ನಿಸಿತು. ಘನತ್ಯಾಜ್ಯ ನಿರ್ವಹಣಾ ನಿಯಮಗಳು, 2016 ಕ್ಕೆ ಸಂಬಂಧಿಸಿದ ವಿಷಯಗಳ ಕುರಿತು ನ್ಯಾಯಾಲಯವು ಸ್ವಯಂಪ್ರೇರಿತ ಪ್ರಕರಣದ ವಿಚಾರಣೆ ನಡೆಸುತ್ತಿತ್ತು. ಗುಡ್ಡಗಾಡು ಪ್ರದೇಶಗಳಲ್ಲಿ ಪ್ಲಾಸ್ಟಿಕ್ ನಿಷೇಧಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ ಎಂದು ಸರ್ಕಾರ ನ್ಯಾಯಾಲಯಕ್ಕೆ ತಿಳಿಸಿದೆ. 100 ಕ್ಕೂ ಹೆಚ್ಚು ಜನರು ಸೇರುವ ಕಾರ್ಯಕ್ರಮಗಳಲ್ಲಿ ಪ್ಲಾಸ್ಟಿಕ್ ಬಳಸಲು ಪರವಾನಗಿ ಅಗತ್ಯ ಎಂದು ಅದು ಹೇಳಿದೆ.

ಪುಟ 2

ಲ್ಯಾಬ್ ವರದಿಯಲ್ಲಿ ಸ್ಫೋಟಕ ಅಂಶ ಪತ್ತೆ

## ಬಟಾಣಿ ಬ್ಯಾನ್ ಆಗುತ್ತಾ?

**ಬೆಂಗಳೂರು:** ಇಡ್ಲಿ ಬೇಯಿಸಲು ಪ್ಲಾಸ್ಟಿಕ್ ಹಾಳೆಗಳನ್ನು ಬಳಸುವುದರಿಂದ ಕ್ಯಾನ್ಸರ್ ಕಾರಕ ಅಂಶ ಬಿಡುಗಡೆಯಾಗುತ್ತದೆ ಎಂದು ಪರೀಕ್ಷೆಯಲ್ಲಿ ದೃಢಪಟ್ಟಿದೆ. ಹೀಗಾಗಿ ಹೊಟೇಲ್, ಉಪಾಹಾರ ಮತ್ತು ತಿನಿಸು ಕೇಂದ್ರಗಳಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗುವುದು ಎಂದು ಆರೋಗ್ಯ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಈಗಾಗಲೇ ಆದೇಶ ಹೊರಡಿಸಿದ್ದಾರೆ. ಇದರ ಬೆನ್ನಲ್ಲೇ ಇದೀಗ ಬಟಾಣಿಯಲ್ಲಿ ಕೃತಕ ಕಲಬೆರಕೆ ಅಂಶ ಪತ್ತೆಯಾಗಿದೆ. ಈಗಾಗಲೇ ಆಹಾರ ಇಲಾಖೆ ಆಯುಕ್ತ ಶ್ರೀನಿವಾಸ್ ಕಲರ್ ಬಳಕೆ ನಿಷೇಧದ ಬಗ್ಗೆ ಶಿಫಾರಸು ಮಾಡಿದ್ದಾರೆ.

ಹೌದು.. ಬಟಾಣಿಯಲ್ಲಿ ಕೃತಕ ಕಲಬೆರಕೆ ಅಂಶ ಪತ್ತೆಯಾಗಿದೆ. ಪ್ರಾಥಮಿಕ ಲ್ಯಾಬ್ ವರದಿಯಲ್ಲಿ ಸ್ಫೋಟಕ



ಅಂಶ ಬಯಲಾಗಿದ್ದು, ಬ್ರಿಲಿಯಂಟ್ ಬ್ಲೂ, ಟೆಟ್ರಾಜಿನ್ ಅಂದ್ರೆ ಹಳದಿ ಬಣ್ಣವಿರುವ ರಾಸಾಯನಿಕ ಇರುವುದು ಪತ್ತೆಯಾಗಿದೆ.

ಪುಟ 2

ಅಪ್ರಾಪ್ತ ವಿದ್ಯಾರ್ಥಿ ದಿಗಂತ್ ನಾಪತ್ತೆ

## ಅಸಲಿ ಕಾರಣ ಏನು ಗೊತ್ತಾ?

**ದಕ್ಷಿಣ ಕನ್ನಡ:** ಕಳೆದ ಕೆಲವು ದಿನಗಳ ಹಿಂದೆ ನಿಗೂಢವಾಗಿ ನಾಪತ್ತೆಯಾಗಿದ್ದ ಅಪ್ರಾಪ್ತ ವಿದ್ಯಾರ್ಥಿ ದಿಗಂತ್ ಕೊನೆಗೂ ಪತ್ತೆಯಾಗಿದ್ದಾನೆ. ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಫರಂಗಿ ಪೇಟೆ ನಿವಾಸಿ ದಿಗಂತ್ ಕಳೆದ ಫೆಬ್ರವರಿ 25ರಂದು ಮನೆಯಿಂದ ಏಕಾಏಕಿ ನಾಪತ್ತೆಯಾಗಿದ್ದನು. ನಿಗೂಢವಾಗಿ ನಾಪತ್ತೆಯಾಗಿದ್ದ ಬಾಲಕನನ್ನು ಪತ್ತೆ ಮಾಡುತ್ತಿಲ್ಲ ಅಂತ ದೊಡ್ಡ ಮಟ್ಟದ ಪ್ರತಿಭಟನೆಯೂ ನಡೆದಿತ್ತು. ಬಳಿಕ ಕೋರ್ಟ್‌ಗೆ ಹೇಬಿಯಸ್ ಕಾರ್ಪಸ್ ಅರ್ಜಿ ಸಲ್ಲಿಸಿದ್ದು, ಬಾಲಕನನ್ನು ಪತ್ತೆ ಹಚ್ಚುವಂತೆ ಕೋರ್ಟ್ ಖಡಕ್ ಆದೇಶ ನೀಡಿತ್ತು. ಇದೀಗ ಸತತ ಕಾರ್ಯಾಚರಣೆ ಬಳಿಕ ಬಾಲಕ ದಿಗಂತ್ ಪತ್ತೆಯಾಗಿದ್ದು, ನಾಪತ್ತೆಯಾಗಲು ಕಾರಣವನ್ನೂ ಬಹಿರಂಗಪಡಿಸಿದ್ದಾನೆ.



ಫರಂಗಿಪೇಟೆಯಲ್ಲಿ ನಡೆದಿದ್ದ ಅಪ್ರಾಪ್ತ ವಿದ್ಯಾರ್ಥಿ ದಿಗಂತ್ ನಾಪತ್ತೆ ಪ್ರಕರಣದ ನಿಜವಾದ ಕಾರಣ ಈಗ ಬೆಳಕಿಗೆ ಬಂದಿದೆ. ದ್ವಿತೀಯ ಪಿಯುಸಿ ಪರೀಕ್ಷೆಗೆ ಹೆದರಿ ದಿಗಂತ್ ಊರು ಬಿಟ್ಟು ಹೋಗಿದ್ದ ಎಂದು ತಿಳಿದುಬಂದಿದೆ. ಪರೀಕ್ಷಾ ಹಾಲ್ ಟಿಕೆಟ್ ಕೈ ಸೇರಿದ ಮೇಲೆ ದಿಗಂತ್ ತನ್ನ ಪ್ಲಾನ್ ಮಾಡಿಕೊಂಡಿದ್ದನಂತೆ. ಕಳೆದ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿದ್ದರಿಂದ ಮನೆಯಲ್ಲಿ ಬೈಸಿಕೊಂಡಿದ್ದ ದಿಗಂತ್, ಫೈನಲ್ ಎಕ್ಸಾಂ ಬಗ್ಗೆ ಭಯದಿಂದಲೇ ಓಡಿ ಹೋಗಿದ್ದನಂತೆ.

ತನ್ನ ತಪ್ಪು ಮುಚ್ಚಿಡಲು ತಾಯಿಗೆ ಯಾರೋ ನನ್ನನ್ನು ಎತ್ತಿಕೊಂಡು ಹೋಗಿದ್ದರು ಎಂದು ಸುಳ್ಳು ಹೇಳಿದ್ದಾನೆ. ತಾನು ಪರಾರಿಯಾಗಲು ಮಾಡಿದ್ದ ಪ್ಲಾನ್ ಬಗ್ಗೆ ದಿಗಂತ್ ಈಗ ಬಾಯ್ಬಿಟ್ಟಿದ್ದಾನೆ. ಫೆಬ್ರವರಿ 25 ರಂದು ನಾಪತ್ತೆಯಾದ ದಿಗಂತ್ ಮೊದಲು ಬಸ್ಸಿನಲ್ಲಿ ಮೈಸೂರಿಗೆ ಹೋಗಿ ಅಲ್ಲಿಂದ ಮತ್ತೆ ಬಸ್ ಹಿಡಿದು ಬೆಂಗಳೂರಿಗೆ ತೆರಳಿದ್ದನು. ಎರಡು ದಿನ ಬೆಂಗಳೂರಿನಲ್ಲಿ ಸುತ್ತಾಡಿದ್ದಾನೆ. ಕೈಯಲ್ಲಿ ಹಣ ಖಾಲಿಯಾದಾಗ ಬೆಂಗಳೂರಿನ ಹೊರವಲಯದಲ್ಲಿರುವ ಒಂದು ರೆಸಾರ್ಟ್‌ನಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದಾನೆ. ಅಲ್ಲಿ ಮೂರು ದಿನ ಕೆಲಸ ಮಾಡಿ ಸಂಬಳ ಪಡೆದು ಮತ್ತೆ ಪರಾರಿಯಾಗಿದ್ದಾನೆ.

ಬೆಂಗಳೂರಿನಿಂದ ಶಿವಮೊಗ್ಗಕ್ಕೆ ಬಸ್ಸಿನಲ್ಲಿ ಹೋಗಿ ಅಲ್ಲಿಂದ ಮತ್ತೆ ಬಸ್ ಹಿಡಿದು ಮೈಸೂರಿಗೆ ಬಂದಿದ್ದಾನೆ. ಶುಕ್ರವಾರ ರಾತ್ರಿ ಮೈಸೂರಿನಿಂದ ಮುರುಡೇಶ್ವರಕ್ಕೆ ಹೋಗುವ ರೈಲಿನಲ್ಲಿ ಕುಳಿತಿದ್ದಾನೆ. ಫರಂಗಿಪೇಟೆಯ ಬಳಿ ರೈಲು ನಿಲ್ದಾಣದ ಬಳಿ ಪೊಲೀಸರು ಗಸ್ತು ತಿರುಗುವುದನ್ನು ಕಂಡ ದಿಗಂತ್, ಉಡುಪಿಯಲ್ಲಿ

ಪುಟ 2

## ಹಿಂದೂ ದೇವಾಲಯದ ಮೇಲೆ ಭಾರತ ವಿರೋಧಿ ಬರಹ, ಧ್ವಂಸ

**ಕ್ಯಾಲಿಫೋರ್ನಿಯಾ:** ಕ್ಯಾಲಿಫೋರ್ನಿಯಾದಲ್ಲಿ ಹಿಂದೂ ದೇವಾಲಯದ ಮೇಲೆ ಭಾರತ ವಿರೋಧಿ ಬರಹ ಬರೆದಿದ್ದಷ್ಟೇ ಅಲ್ಲದೆ ಕಿಡಿಗೇಡಿಗಳು ದೇವಸ್ಥಾನ ಧ್ವಂಸಗೊಳಿಸಿರುವ ಘಟನೆ ನಡೆದಿದೆ. ಕ್ಯಾಲಿಫೋರ್ನಿಯಾದ ಚಿನೋ ಹಿಲ್ಸ್‌ನಲ್ಲಿರುವ ಅತಿದೊಡ್ಡ ಹಿಂದೂ ದೇವಾಲಯಗಳಲ್ಲಿ ಒಂದಾದ ಬಿಎಪಿಎಸ್ ಶ್ರೀ ಸ್ವಾಮಿನಾರಾಯಣ ಮಂದಿರವನ್ನು ಭಾನುವಾರ ಭಾರತ ವಿರೋಧಿ ಸಂದೇಶಗಳಿಂದ ಅಪವಿತ್ರಗೊಳಿಸಲಾಗಿದೆ.

ಬಿಎಪಿಎಸ್ ಈ ಕುರಿತು ಪೋಸ್ಟ್ ಮಾಡಿದ್ದು, ಇದು ಹಿಂದೂ ಸಮುದಾಯದ ವಿರುದ್ಧದ ಮತ್ತೊಂದು ದ್ವೇಷದ ಪ್ರದರ್ಶನವಾಗಿದೆ. ಸಮುದಾಯವು ದ್ವೇಷವನ್ನು ಎಂದಿಗೂ ಬೇರೂರಲು ಬಿಡುವುದಿಲ್ಲ ಮತ್ತು ಶಾಂತಿ ಮತ್ತು ಸಹಾನುಭೂತಿ ಮೇಲುಗೈ ಸಾಧಿಸುತ್ತದೆ ಎಂದು ಅದು ಹೇಳಿದೆ. ಚಿನೋ ಹಿಲ್ಸ್ ಪೊಲೀಸ್ ಇಲಾಖೆ ಈ ಘಟನೆಯ ಬಗ್ಗೆ ಇನ್ನೂ ಅಧಿಕೃತ ಹೇಳಿಕೆ ನೀಡಿಲ್ಲ.

ಉತ್ತರ ಅಮೆರಿಕಾದ ಹಿಂದೂಗಳ ಒಕ್ಕೂಟ ಕೂಡ ಎಕ್ಸ್‌ನಲ್ಲಿ ಘಟನೆಯ ವಿವರಗಳನ್ನು ಹಂಚಿಕೊಂಡಿದ್ದು,




ಕ್ಯಾಲಿಫೋರ್ನಿಯಾದ ಐಕಾನಿಕ್ ಬಿಎಪಿಎಸ್ ದೇವಾಲಯದ ಅಪವಿತ್ರಗೊಳಿಸುವಿಕೆಯು ಲಾಸ್ ಏಂಜಲೀಸ್‌ನಲ್ಲಿ ಖಲಿಸ್ತಾನ್ ಜನಾಭಿಪ್ರಾಯ ಸಂಗ್ರಹಕ್ಕೂ ಮುಂಚಿತವಾಗಿ ನಡೆದಿದೆ ಎಂದು ಹೇಳಿದೆ. ಆ ಪೋಸ್ಟ್‌ನಲ್ಲಿ 2022 ರಿಂದ ದೇವಾಲಯಗಳ ಮೇಲೆ ನಡೆದ ಧ್ವಂಸ ಕೃತ್ಯದ ಇತರ ಇತ್ತೀಚಿನ ಪ್ರಕರಣಗಳನ್ನು ಪಟ್ಟಿ ಮಾಡಲಾಗಿದ್ದು, ಈ ವಿಷಯದ ಬಗ್ಗೆ ತನಿಖೆಗೆ ಕರೆ ನೀಡಲಾಗಿದೆ.

ಪುಟ 2

## ಪ್ರೇಯಸಿ, ಆಕೆಯ ಮಗನನ್ನ ಹತ್ಯೆ ಮಾಡಿದ್ದ ಆರೋಪಿಗೆ ಜೀವಾವಧಿ ಶಿಕ್ಷೆ




**ಬೆಂಗಳೂರು:** ಪ್ರೇಯಸಿ ಮತ್ತು ಆಕೆಯ ಮಗನನ್ನು ಹತ್ಯೆ ಮಾಡಿದ್ದ ಆರೋಪಿಗೆ ಜೀವಾವಧಿ ಶಿಕ್ಷೆ ಹಾಗೂ ದಂಡ ವಿಧಿಸಿ ಕೋರ್ಟ್ ಆದೇಶ ಹೊರಡಿಸಿದೆ.

ಜೋಡಿ ಕೊಲೆ ಆರೋಪಿ ಶೇಖಪ್ಪ ಎಂಬಾತನಿಗೆ ಜೀವಾವಧಿ ಶಿಕ್ಷೆ ಹಾಗೂ 50 ಸಾವಿರ ದಂಡ ವಿಧಿಸಿ ಸಿಸಿಹೆಚ್ ? 51 ರ ನ್ಯಾಯಧೀಶರಾದ ಸಂತೋಷ್ ಆದೇಶ ಹೊರಡಿಸಿದ್ದಾರೆ.

ಪುಟ 2

## ರಾಜ್ಯಾಧ್ಯಕ್ಷರ ಬದಲಾವಣೆ ಯತ್ನಾಳ್ ಹಣೆಯಲ್ಲೂ ಬರೆದಿಲ್ಲ

**ಚಿಕ್ಕಮಗಳೂರು:** ಬಿಜೆಪಿ ರಾಜ್ಯಾಧ್ಯಕ್ಷರ ಸ್ಥಾನದಿಂದ ವಿಜಯೇಂದ್ರ ಅವರನ್ನು ಬದಲಾಯಿಸುವುದು ಯತ್ನಾಳ್ ಅವರ ಹಣೆಯಲ್ಲಿ ಬರೆದಿಲ್ಲ ಎಂದು ಮಾಜಿ ಸಚಿವ ಎಂ.ಪಿ ರೇಣುಕಾಚಾರ್ಯ ವಾಗ್ದಾಳಿ ನಡೆಸಿದ್ದಾರೆ.



ಚಿಕ್ಕಮಗಳೂರಿನಲ್ಲಿ ಮಾಧ್ಯಮದ ಜೊತೆ ಅವರು ಮಾತನಾಡಿದರು. ಈ ವೇಳೆ, ಯತ್ನಾಳ್ ಹೆಸರು ಹೇಳುವುದನ್ನು ನಾನು ಬಯಸುವುದಿಲ್ಲ. ಅವರು ಸವಕಲು ನಾಣ್ಯ, ಸಮುದಾಯಕ್ಕೂ ಬೇಡವಾದ ವ್ಯಕ್ತಿ ಎಂದು ವ್ಯಂಗ್ಯವಾಡಿದ್ದಾರೆ. ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಮುಂದುವರೆಯುವುದು ಸೂರ್ಯ ಚಂದ್ರ ಇರುವಷ್ಟೇ ಸತ್ಯ. ಅವರ ನೇತೃತ್ವದಲ್ಲಿ ಮುಂದಿನ ಚುನಾವಣೆ ಎದುರಿಸುತ್ತೇವೆ. ರಾಜ್ಯಾಧ್ಯಕ್ಷರ ಬದಲಾವಣೆ ಮಾಡ್ತೀವಿ ಎನ್ನುತ್ತಿರುವವರ ಹಣೆಯಲ್ಲೂ ಅದು ಬರೆದಿಲ್ಲ. ತಾಕತ್ತಿದ್ದರೆ ರಾಜ್ಯಾಧ್ಯಕ್ಷ ಬದಲಾವಣೆ ಮಾಡಲಿ ಎಂದು ಸವಾಲು ಹಾಕಿದ್ದಾರೆ. ನಮ್ಮ ಹೈಕಮಾಂಡ್ ವಿಜಯೇಂದ್ರ ಅವರ ಪರವಾಗಿದೆ. ಎಲ್ಲಾ ಸಮುದಾಯದವರು ಅವರ ಜೊತೆಗಿದ್ದಾರೆ. ಯತ್ನಾಳ್ ಪರ ಯಾರಿದ್ದಾರೆ? ಸೊರಬದಲ್ಲಿ ಐದಾರು ಜನ ಇದ್ದಾರೆ. ವಿಜಯೇಂದ್ರ ಅವರು ಸಮರ್ಥ ರಾಜ್ಯಧ್ಯಕ್ಷ ಎಂದು ಅವರು ಹೇಳಿದ್ದಾರೆ.

## ಕವಿ ಸಿದ್ದಲಿಂಗ ಪಟ್ಟಣಶೆಟ್ಟಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಅನುವಾದ ಪ್ರಶಸ್ತಿ

**ನವದೆಹಲಿ:** ಕೇಂದ್ರ ಸಾಹಿತ್ಯ ಅಕಾಡೆಮಿ ನೀಡುವ ಅನುವಾದ ಪ್ರಶಸ್ತಿಗೆ ಹಿರಿಯ ಕವಿ ಸಿದ್ದಲಿಂಗ ಪಟ್ಟಣಶೆಟ್ಟಿ ಅವರ 'ವಿದಿಶಾ ಪ್ರಹಸನ' ಕೃತಿ ಆಯ್ಕೆಯಾಗಿದೆ.



ಈ ಕೃತಿಯು ಕಾಳಿದಾಸನ 'ಮಾಲವಿಕಾಗ್ನಿಮಿತ್ರಮ್'ನ ರಂಗಾನುವಾದ. ಅಕಾಡೆಮಿ ಅಧ್ಯಕ್ಷ ಮಾಧವ ಕೌಶಿಕ್ ನೇತೃತ್ವದ ಕಾರ್ಯಕಾರಿ ಸಮಿತಿಯು ಶುಕ್ರವಾರ ಸಭೆ ಸೇರಿ 2024ನೇ ಸಾಲಿನ ಅನುವಾದ ಪ್ರಶಸ್ತಿ ಪಟ್ಟಿಗೆ ಅನುಮೋದನೆ ನೀಡಿತು. 21 ಭಾಷೆಗಳ ಲೇಖಕರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕನ್ನಡ ವಿಭಾಗದಲ್ಲಿ ಲೇಖಕರಾದ ಡಾ.ಧರಣೇಂದ್ರ ಕುರಕುರಿ, ಹೆಚ್.ಎಲ್.ಪುಷ್ಪಾ ಹಾಗೂ ಡಾ.ನಾ.ದಾಮೋದರ ಶೆಟ್ಟಿ ಜ್ಯೂರಿಗಳಾಗಿದ್ದರು. ಈ ಪ್ರಶಸ್ತಿಯು 50 ಸಾವಿರ ರೂ. ನಗದು ಹಾಗೂ ಪ್ರಶಸ್ತಿ ಪತ್ರ ಒಳಗೊಂಡಿದೆ. ಈ ವರ್ಷಾಂತ್ಯದೊಳಗೆ ನಡೆಯುವ ವಿಶೇಷ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಅಕಾಡೆಮಿ ಪ್ರಕಟಣೆಯಲ್ಲಿ ತಿಳಿಸಿದೆ.

## ಮದ್ವೆ ಆದಾಗ ತೆಳ್ಳಗಿದ್ದೆ, ಈಗ ಡುಮ್ಮಿ

**ಬೆಂಗಳೂರು:** ಮದುವೆ ಆಗುವಾಗ ಸುಂದರವಾಗಿದ್ದೆ, ಈಗ ದಪ್ಪಗಾಗಿದ್ದೀಯಾ ಎಂದು ವ್ಯಕ್ತಿಯೊಬ್ಬ ತನ್ನ ಪತ್ನಿ, ಮಾವ ಹಾಗೂ ಮಗನ ಮೇಲೆ ಖಾರದ ಪುಡಿ ಎರಚಿ ಹಲ್ಲೆ ನಡೆಸಿರುವುದು ನಗರದ ನೆಲಗೆದರನಹಳ್ಳಿಯಲ್ಲಿ ನಡೆದಿದೆ.



» **ಖಾರದಪುಡಿ ಎರಚಿ ಪತ್ನಿ ಮೇಲೆ ಹಲ್ಲೆ ಮಾಡಿದ ಪತಿ!**

ಹಲ್ಲೆ ನಡೆಸಿದ ಪತಿ ಪುಲಿ ಸಾಯಿಕುಮಾರ್ ವಿರುದ್ಧ ಪತ್ನಿ ದೂರು ದಾಖಲಿಸಿದ್ದಾಳೆ. ದೂರಿನಲ್ಲಿ, ಸೌಂದರ್ಯದ ವಿಚಾರಕ್ಕೆ ಪದೇ ಪದೇ ಪತಿ ಗಲಾಟೆ ಮಾಡುತ್ತಿದ್ದ. ಅಲ್ಲದೇ ವರದಕ್ಷಿಣೆ ವಿಚಾರಕ್ಕೂ ಜಗಳ ನಡೆಯುತ್ತಿತ್ತು. ಇದೇ ವಿಚಾರಕ್ಕೆ ನನ್ನ, ಮಗ ಹಾಗೂ ನನ್ನ ತಂದೆಯ ಮೇಲೆ ಶನಿವಾರ ಪತಿ ಹಲ್ಲೆ ಮಾಡಿದ್ದಾನೆ ಎಂದು ಉಲ್ಲೇಖಿಸಿದ್ದಾಳೆ.

ಖಾಸಗಿ ಕಾಲೇಜಿನಲ್ಲಿ ಉಪನ್ಯಾಸಕಿಯಾಗಿದ್ದ ಮಹಿಳೆಗೆ ಖಾಸಗಿ ಬ್ಯಾಂಕ್ ಉದ್ಯೋಗಿಯಾಗಿದ್ದ ಪುಲಿ ಸಾಯಿಕುಮಾರ್ 2021ರಲ್ಲಿ ಮ್ಯಾಟ್ರಿಮೋನಿಯಲ್ಲಿ ಪರಿಚಯನಾಗಿದ್ದ. ಬಳಿಕ ಇಬ್ಬರಿಗೂ ಮದುವೆಯಾಗಿತ್ತು. ಆಗಿನಿಂದಲೂ ವರದಕ್ಷಿಣೆಗಾಗಿ ಪೀಡಿಸುತ್ತಿದ್ದ ಎಂದು ಮಹಿಳೆ ಆರೋಪಿಸಿದ್ದಾಳೆ. ಈ ಹಿಂದೆಯೂ ಪುಲಿ ಸಾಯಿಕುಮಾರ್ ವಿರುದ್ಧ ಆರ್‌ಆರ್ ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಇದೀಗ ಮತ್ತೆ ಗಲಾಟೆ ಮಾಡಿ ಹಲ್ಲೆ ಮಾಡಿದ್ದು, ಪೀಣ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮುಸ್ಲಿಂ ಲೀಗ್ ಬಜೆಟ್.. ಜಿನ್ನಾ ಆತ್ಮವೇ ಸಿದ್ದರಾಮಯ್ಯಗೆ ಪ್ರಚೋದನೆ ಕೊಟ್ಟಿರಬಹುದು

**ಬೆಳಗಾವಿ:** ಇದು ಮುಸ್ಲಿಂ ಲೀಗ್ ಬಜೆಟ್. ಜಿನ್ನಾ ಆತ್ಮವೇ ಸಿದ್ದರಾಮಯ್ಯ ಅವರಿಗೆ ಪ್ರಚೋದನೆ ಕೊಟ್ಟಿರಬಹುದು ಎಂದು ರಾಜ್ಯ ಬಜೆಟ್ ಬಗ್ಗೆ ಎಂಎಲ್‌ಸಿ ಸಿ.ಟಿ.ರವಿ ಅಭಿಪ್ರಾಯಪಟ್ಟಿದ್ದಾರೆ.



ಬೆಳಗಾವಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರು 16ನೇ ದಾಖಲೆ ಬಜೆಟ್ ಮಂಡಿಸಿದ್ದಾರೆ. ಅತೀ ಹೆಚ್ಚು ಸಾಲ ಮಾಡಿದ ಕೀರ್ತಿ ಸಿಎಂ ಸಿದ್ದರಾಮಯ್ಯಗೆ ಸಲ್ಲುತ್ತದೆ. ಈವರೆಗಿನ ಸಿಎಂ ಮಾಡಿದ ಸಾಲಕ್ಕಿಂತಲೂ ಹೆಚ್ಚಿನ ಸಾಲ ಮಾಡಿದ್ದಾರೆ. 4 ಲಕ್ಷ ಕೋಟಿ ಅಷ್ಟು ಬಜೆಟ್ ಮಂಡನೆ ಮಾಡಿದ್ದಾರೆ. ಈ ಬಾರಿ ಸಾಲ 1.27 ಲಕ್ಷ ಕೋಟಿ. ಮೂಲಸೌಕರ್ಯ ಯೋಜನೆಗಳಿಗೆ ಉತ್ತೇಜನ ಕೊಟ್ಟಿದ್ದರೆ ತೆರಿಗೆ ಸಂಗ್ರಹ ಆಗ್ತಿತ್ತು. ಕಳೆದ ವರ್ಷ 3.22 ಲಕ್ಷ ಕೋಟಿ ಖರ್ಚು ಮಾಡ್ತೇವಿ ಅಂತಾ ಹೇಳಿದ್ರು. ಇದುವರೆಗೂ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದ ಶೇ.55 ರಷ್ಟು ಖರ್ಚು ಮಾಡಿದ್ದಾರೆ. ಇನ್ನುಳಿದ 45 ದಿನದಲ್ಲಿ ಉಳಿದ 45 ರಷ್ಟು ಖರ್ಚು ಮಾಡಲು ಸಾಧ್ಯವಾಯ್ತು ಎಂದು ಬೇಸರ ಹೊರಹಾಕಿದ್ದಾರೆ.

ಸರ್ಕಾರದ ಎಲ್ಲದರ ಮೇಲೂ ತೆರಿಗೆ ಹೆಚ್ಚಳ ಮಾಡಿದೆ. ನೀರು, ವಿದ್ಯುತ್, ಪ್ರಾಪರ್ಟಿ, ಬಿತ್ತನೆ, ಬೀಯರ್, ಹಾಲು, ಪೆಟ್ರೋಲ್ ಬೆಲೆ ಹೆಚ್ಚಳ ಮಾಡಿದ್ದಾರೆ. ಸಾಲ ಮಾಡಿ ತುಪ್ಪ ತಿನ್ನುವುದು ಚಾರುವಾಕನ ನೀತಿ ಆಗಿತ್ತು. ನಾನು ಸಿಎಂ ಕೇಳ್ತೀನಿ, ನೀವು ಸಾಲ ಮಾಡಿದ್ದೀರಿ. ತುಪ್ಪ ಯಾರು ತಿನ್ನುತ್ತಿದ್ದಾರೆ? ಜನರ ಮೇಲೆ ಸಾಲ ಹೊರಿಸಿದೀರಿ. ನಿಮ್ಮ ಸರ್ಕಾರದಲ್ಲಿ ತುಪ್ಪ ತಿಂತಿರೋರು ಯಾರು ಎಂದು ಪ್ರಶ್ನಿಸಿದ್ದಾರೆ.

ಈ ಬಜೆಟ್‌ನಲ್ಲಿ ಕೆಲವರಿಗೆ ಖುಷಿಯಾಗಿದೆ. ಇದು ಕಾಂಗ್ರೆಸ್ ಬಜೆಟ್ ಅಥವಾ ಮುಸ್ಲಿಂ ಲೀಗ್ ಬಜೆಟ್. ಜಿನ್ನಾ ಆತ್ಮವೇ ಸಿದ್ದರಾಮಯ್ಯ ಅವರಿಗೆ ಪ್ರಚೋದನೆ ಕೊಟ್ಟಿರಬಹುದು. ಸರ್ಕಾರಿ ಗುತ್ತಿಗೆಯಲ್ಲಿ ಮೀಸಲಾತಿ, ವೋಟ್ ಬ್ಯಾಂಕ್‌ಗಾಗಿ ಮತೀಯ ಆಧಾರದ ಮೇಲೆ ಮೀಸಲಾತಿ ನೀಡಲಾಗಿದೆ. ಕಾಂಗ್ರೆಸ್‌ನ ಕೋಮುವಾದಿ ರಾಜಕಾರಣ ತೋರಿಸುತ್ತದೆ. ಮುಸ್ಲಿಮರ ಸರಳ ಮದುವೆಗೆ ಐವತ್ತು ಸಾವಿರ. ವೋಟ್ ತಗೊಳ್ಳೋವಾಗ ಹಿಂದೂಗಳು ಬೇಕು ನಿಮಗೆ. ಅಧ್ಯಕ್ಷರು ನಾವು ಹಿಂದೂವಾಗಿ ಹುಟ್ಟಿದ್ದೇವೆ ಅಂತಾರೆ. ಮುಸ್ಲಿಮರಿಗೆ ಪಾಕಿಸ್ತಾನ ಕೊಟ್ಟಿದ್ದು ಸಾಕಾಗಿಲ್ವಾ? ಬೇರೆ ಜಾತಿಯಲ್ಲಿ ಬಡವರು ಇಲ್ವಾ? ಅವರಿಗೆ ಯಾಕೆ ಶುಲ್ಕ ಕಡಿತವಿಲ್ಲ? ಮುಸ್ಲಿಂ ಲೀಗ್‌ನ ಪ್ರೇತಾತ್ಮ ಕಾಂಗ್ರೆಸ್‌ನ ಪ್ರವೇಶಿಸಿರಬೇಕು ಎಂದು ಸರ್ಕಾರದ ಕಾಲೆಳೆದಿದ್ದಾರೆ.

ಪೊಲೀಸ್ ಠಾಣೆ ಮೇಲೆ ದಾಳಿ ಮಾಡಿದವರ ಮೇಲಿನ ಕೇಸ್ ವಾಪಸ್ ತೆಗೆಯುತ್ತೀರಿ. ಮುಸ್ಲಿಮರಿಗೆ ಬಜೆಟ್‌ನಲ್ಲಿ ಆದ್ಯತೆ ಕೊಡಲಾಗಿದೆ. ಇದೊಂದು ಕಮ್ಯುನಲ್ ಬಜೆಟ್ ಆಗಿದೆ. ಮುಲ್ಲಾ, ಮುಸ್ಲಿಂ ಗುರುಗಳ ಗೌರವ ಧನ ಹೆಚ್ಚಳ ಮಾಡಿದ್ದಾರೆ. ಕೃಷ್ಣಾ ಮೇಲ್ದಂಡೆ, ತುಂಗಭದ್ರಾ, ಯೋಜನೆಗೆ ಒಂದು ರೂಪಾಯಿ ಕೊಟ್ಟಿಲ್ಲ. ಕಳೆದ ವರ್ಷವೂ ಬಜೆಟ್‌ನಲ್ಲಿ ಹೇಳಿದ್ರು, ಆದ್ರೆ ಏನೂ ಮಾಡಿಲ್ಲ. ಕೇಂದ್ರ ಸರ್ಕಾರ ರಾಜ್ಯಕ್ಕೆ ಹೆಚ್ಚಿನ ಅನುದಾನ ಕೊಟ್ಟರೂ ಇವರು ಆರೋಪ ಮಾಡ್ತಿದ್ದಾರೆ. ಮೇಕೆದಾಟು ಯೋಜನೆ ಬಗ್ಗೆ ಬಜೆಟ್‌ನಲ್ಲಿ ಪ್ರಸ್ತಾಪವಿಲ್ಲ. ಇದು ಕಾಂಗ್ರೆಸ್ ಪಕ್ಷದ ಬಜೆಟ್ ಅಲ್ಲ. ಹುಚ್ಚನಿಗೆ ಹೆಚ್ಚು ತಿನ್ನಿಸಿದ್ರೆ ಆತನ ಹುಚ್ಚು ಬಿಡುವುದಿಲ್ಲ ಎಂದು ಸರ್ಕಾರಕ್ಕೆ ಟಾಂಗ್ ಕೊಟ್ಟಿದ್ದಾರೆ.

## ಮೇಕೆದಾಟು ವರ ಅಂತ ತ.ನಾಡು ಶಾಸಕರೇ ಹೇಳಿದ್ದಾರೆ
## ರಾಜಕೀಯಕ್ಕಾಗಿ ವಿರೋಧ

**ರಾಮನಗರ:** ಮೇಕೆದಾಟು ನಮಗೆ ವರ ಎಂದು ತಮಿಳುನಾಡು ಶಾಸಕರೇ ನನ್ನ ಬಳಿ ಹೇಳಿದ್ದಾರೆ. ಆದರೆ ರಾಜಕೀಯವಾಗಿ ವಿರೋಧ ಮಾಡುತ್ತಿದ್ದಾರೆ ಅಷ್ಟೇ ಎಂದು ನಂಜಾವಧೂತ ಶ್ರೀ ಹೇಳಿಕೆ ನೀಡಿದ್ದಾರೆ.



ಮೇಕೆದಾಟು ಯೋಜನೆ ಕುರಿತು ಮಾಗಡಿಯಲ್ಲಿ ಮಾತನಾಡಿದ ಅವರು, ಮೇಕೆದಾಟು ಯೋಜನೆಗೆ ತಮಿಳುನಾಡು ಸರ್ಕಾರದ ವಿರೋಧ ಇದೆ. ಈ ನಡುವೆ ದೇವೇಗೌಡರು ಕೇಂದ್ರದ ಜೊತೆ ಮಾತನಾಡಿ ಮನವೊಲಿಕೆ ಮಾಡಿದ್ದಾರೆ. ಮೇಕೆದಾಟು ನಮ್ಮ ಹಕ್ಕು ಎಂದು ಡಿಸಿಎಂ ಡಿಕೆಶಿ ಪಾದಯಾತ್ರೆ ಮಾಡಿದ್ದಾರೆ. ಆದರೆ ಅದಕ್ಕೂ ಮೊದಲು ಮೇಕೆದಾಟು ಯೋಜನೆ ಬಗ್ಗೆ ಕುಮಾರಸ್ವಾಮಿ ಮಾತನಾಡಿದ್ದರು. ಪಕ್ಷಾತೀತವಾಗಿ ಮೇಕೆದಾಟು ಯೋಜನೆ ಮಾಡಬೇಕು ಅನ್ನೋ ಹಂಬಲವಿದೆ. ಪಕ್ಷಾತೀತವಾಗಿ ಎಲ್ಲರೂ ಮೇಕೆದಾಟು ಯೋಜನೆಗೆ ಬೆಂಬಲಿಸುತ್ತಾರೆ ಎಂದರು.

ತಮಿಳುನಾಡಿನಲ್ಲಿ ಯಾವ ರೀತಿ ನೀರಿಗೆ ಜಾತಿ, ಪಕ್ಷ ಇಲ್ಲವೋ ಆ ರೀತಿ ಕರ್ನಾಟಕದಲ್ಲೂ ಬೆಂಬಲ ಸಿಗಬೇಕು. ಎಲ್ಲಾ ಜನ ನಮ್ಮವರೇ, ಇಡೀ ನಾಡು ನಮ್ಮದು ಎನ್ನುವ ರೀತಿ ಒಗ್ಗಟ್ಟಾಗಿ ನಿಲ್ಲಬೇಕು. ಪಕ್ಷಾತೀತವಾಗಿ ಹೋರಾಟ ಆಗಿದ್ದೇ ಆದಲ್ಲಿ ಕೆಲವೇ ವರ್ಷಗಳಲ್ಲಿ ಮೇಕೆದಾಟು ಆಗುತ್ತದೆ. 64 ಟಿಎಂಸಿ ನೀರು ಸದ್ಬಳಕೆ ಮಾಡಕೊಳ್ಳಬಹುದಾಗಿದೆ. ತಮಿಳುನಾಡಿನಲ್ಲೂ ಈ ನೀರನ್ನು ಬಳಸಿಕೊಳ್ಳುತ್ತಿಲ್ಲ. ನಾವು ಕೂಡ ಬಳಸಿಕೊಳ್ಳುತ್ತಿಲ್ಲ. ನೂರಾರು ಟಿಎಂಸಿ ನೀರು ಸಮುದ್ರದ ಪಾಲಾಗುತ್ತಿದೆ ಎಂದು ಹೇಳಿದರು.

ಹೊಸೂರಿಗೆ ಹೋಗಿದ್ದ ವೇಳೆ ತಮಿಳುನಾಡಿನ ಶಾಸಕರು ಈ ಬಗ್ಗೆ ನನ್ನ ಬಳಿ ಹೇಳಿಕೊಂಡಿದ್ದಾರೆ. ಮೇಕೆದಾಟು ನಮಗೆ ವರ ಎಂದು ಮೂರ್ನಾಲ್ಕು ಶಾಸಕರು ನಮ್ಮ ಬಳಿ ಮಾತನಾಡಿದ್ದರು. ಆದರೆ ರಾಜಕೀಯವಾಗಿ ಇದನ್ನ ವಿರೋಧ ಮಾಡುತ್ತಿದ್ದಾರೆ ಅಷ್ಟೇ. ಇದು ಯಾರಿಗೂ ಶ್ರೇಯಸ್ಸು ತರುವುದಿಲ್ಲ. ಹೀಗಾಗಿ ಎರಡೂ ರಾಜ್ಯದ ಸರ್ಕಾರಗಳು ಮೇಕೆದಾಟು ಯೋಜನೆ ಮಾಡಿದ್ರೆ ಒಳ್ಳೆಯದಾಗುತ್ತೆ ಎಂದು ತಿಳಿಸಿದರು.

## ಬೆಂಗಳೂರಲ್ಲಿ ಲಾಂಗ್ ಹಿಡಿದು ಬೈಕ್ ರೈಡ್
## ರೌಡಿಶೀಟರ್ ಸಿದ್ದಿಕಿ ಬಂಧನ

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ರೌಡಿಗಳ ಪುಂಡಾಟ ಮುಂದುವರಿದಿದೆ. ಕೈಯಲ್ಲಿ ಲಾಂಗ್ ಹಿಡಿದು ಬೈಕ್‌ನಲ್ಲಿ ಪ್ರಯಾಣಿಸಿದ ರೌಡಿಶೀಟರ್‌ನನ್ನು ಪೊಲೀಸರು ಬಂಧಿಸಿದ್ದಾರೆ.



ಶಿವಾಜಿನಗರ ಪೊಲೀಸರು, ರೌಡಿಶೀಟರ್ ಸಿದ್ದಿಕಿಯನ್ನು ಬಂಧಿಸಿದ್ದಾರೆ. ಶಿವಾಜಿನಗರದ ಬಂಬೂ ಬಜಾರ್‌ನಲ್ಲಿ ಬೈಕ್ ರೈಡ್ ವೇಳೆ ಲಾಂಗ್ ಹಿಡಿದಿದ್ದ ರೌಡಿಶೀಟರ್ ಸಿದ್ದಿಕಿ ಪ್ರಯಾಣಿಸಿದ್ದ. ಲಾಂಗ್ ಹಿಡಿದುಕೊಂಡಿದ್ದ ವೀಡಿಯೋ ಸಾರ್ವಜನಿಕರ ಮೊಬೈಲ್‌ನಲ್ಲಿ ಸೆರೆಯಾಗಿತ್ತು.

ವೀಡಿಯೋ ಆಧಾರದಲ್ಲಿ ಸುಮೋಟೊ ಕೇಸ್ ದಾಖಲಿಸಿಕೊಂಡಿದ್ದರು. ತನಿಖೆ ವೇಳೆ ಆರೋಪಿಯು ರೌಡಿಶೀಟರ್ ಎಂಬ ವಿಚಾರ ಬೆಳಕಿಗೆ ಬಂದಿದೆ. ಶಸ್ತ್ರಾಸ್ತ್ರ ಕಾಯ್ದೆಯಡಿ ರೌಡಿಶೀಟರ್‌ನನ್ನು ಪೊಲೀಸರು ಬಂಧಿಸಿದ್ದಾರೆ.

ತನಿಖೆ ವೇಳೆ ಆರೋಪಿ ಮೇಲೆ 17 ಪ್ರಕರಣ ಇರುವುದು ಪತ್ತೆಯಾಗಿದೆ. ಕೋರ್ಟ್‌ನಿಂದ ಅರೆಸ್ಟ್ ವಾರೆಂಟ್ ಕೂಡ ಜಾರಿಯಾಗಿತ್ತು. ಆರೋಪಿಯನ್ನು ಬಂಧಿಸಿ ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.

## ಜೈಲಿಗಾಗಿ ಹಾಕಿದ ಜಾಮರ್‌ನಿಂದ ಊರಿನ ಜನರಿಗೆ ಶಿಕ್ಷೆ!
## ಸ್ಥಳೀಯರ ಸಮಸ್ಯೆ ಒಂದೇ ಎರಡೇ?

**ಧಾರವಾಡ:** ಜೈಲುಗಳಲ್ಲಿ ಕಾನೂನು ಬಾಹಿರ ಕೃತ್ಯಗಳು ನಡೆಯದಂತೆ ಬಗೆ ಬಗೆಯ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. ಅದರಲ್ಲೂ ಕೇಂದ್ರ ಕಾರಾಗೃಹ ಎಂದರೆ ನಟೋರಿಯಸ್ ಕೈದಿಗಳು ಇರುವುದರಿಂದ ಹೆಚ್ಚಿನ ಕ್ರಮಗಳನ್ನು ತೆಗೆದುಕೊಳ್ಳಲಾಗಿರುತ್ತದೆ. ಇದರಲ್ಲಿ, ಜೈಲಿನೊಳಗೆ ಸಿಗ್ನಲ್ ಜಾಮರ್ ಅಳವಡಿಕೆ ಕೂಡ ಒಂದು. ಆದರೆ ಇಂಥ ವ್ಯವಸ್ಥೆಯಿಂದಾಗಿ ಅಕ್ರಮಗಳು ಕಡಿಮೆಯಾಗುತ್ತಿವೆಯಾದರೂ ಇದರಿಂದಾಗಿ ಸುತ್ತಮುತ್ತಲಿನ ಜನರು ಶಿಕ್ಷೆಗೆ ಒಳಗಾಗುವಂತೆ ಆಗುತ್ತಿದೆ. ಇದಕ್ಕೆ ಉದಾಹರಣೆ ಅಂದರೆ, ಧಾರವಾಡದ ಕೇಂದ್ರ ಕಾರಾಗೃಹದ ಸುತ್ತಮುತ್ತಲಿನ ಬಡಾವಣೆಗಳ ಜನರ ಬದುಕು.




ಧಾರವಾಡ ಕೇಂದ್ರ ಕಾರಾಗೃಹದಲ್ಲಿ ನೂರಾರು ಜನ ಕೈದಿಗಳಿದ್ದಾರೆ. ಅದರಲ್ಲಿ ಅನೇಕರು ನಟೋರಿಯಸ್ ಕೈದಿಗಳು. ಮತ್ತೆ ಕೆಲವರು ಭಯೋತ್ಪಾದನೆ ಪ್ರಕರಣಗಳಲ್ಲಿ ಜೀವಾವಧಿ ಶಿಕ್ಷೆಗೆ ಒಳಗಾದವರು ಕೂಡ ಇದ್ದಾರೆ. ಇಂಥ ಜೈಲಿನಲ್ಲಿ ಅಕ್ರಮ ನಡೆಯದಂತೆ ಮತ್ತು ಮೊಬೈಲ್ ಬಳಕೆಗೆ ಅವಕಾಶವಿಲ್ಲದಂತೆ ಮಾಡಲು ಜಾಮರ್ ಅಳವಡಿಕೆ ಮಾಡಲಾಗಿದೆ. ಆದರೆ, ಇತ್ತೀಚಿಗೆ ಇದು ಸುತ್ತಮುತ್ತಲಿನ ಜನರ ಬದುಕಿಗೆ ತೊಂದರೆ ಮಾಡುತ್ತಿದೆ. ಏಕೆಂದರೆ ಕೆಲ ದಿನಗಳ ಹಿಂದೆ ಜಾಮರ್‌ನ ರೇಡಿಯೇಶನ್ ಹೆಚ್ಚಳ ಮಾಡಿರುವುದರಿಂದ ಈ ಜೈಲಿನ ಸುತ್ತಮುತ್ತಲಿನ ಬಡಾವಣೆಗಳ ಜನರಿಗೆ ಮೊಬೈಲ್ ಸಿಗ್ನಲ್ ಸಿಗುತ್ತಿಲ್ಲ. ಇದರಿಂದಾಗಿ ದಿನನಿತ್ಯದ ಬದುಕಿಗೆ ಸಾಕಷ್ಟು ತೊಂದರೆಯಾಗುತ್ತಿದೆ.

**ವಿದ್ಯಾರ್ಥಿಗಳ ಕಲಿಕೆಗೂ ಸಮಸ್ಯೆ:** ಇನ್ನು ಈ ಬಡಾವಣೆಯಲ್ಲಿರುವ ವಿದ್ಯಾರ್ಥಿಗಳ ಸ್ಥಿತಿಯಂತೂ ಹೇಳತೀರದು. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಮೊಬೈಲ್‌ಗಳ ಮೇಲೆ ಹೆಚ್ಚು ಅವಲಂಬಿತರಾಗಿದ್ದಾರೆ. ಆದರೆ ಈ ಜಾಮರ್‌ನಿಂದಾಗಿ ಮೊಬೈಲ್ ಸಿಗ್ನಲ್ ಸಿಗದೇ ವಿದ್ಯಾಭ್ಯಾಸಕ್ಕೆ ಸಾಕಷ್ಟು ತೊಂದರೆಯಾಗುತ್ತಿದೆ.

**ನರ್ಸಿಂಗ್ ವಿದ್ಯಾರ್ಥಿಗಳು, ರೋಗಿಗಳಿಗೆ ಸಮಸ್ಯೆ:** ಈ ಜೈಲಿಗೆ ಹತ್ತಿರದಲ್ಲೇ ಡಿಮ್ಹಾನ್ಸ್ ಆಸ್ಪತ್ರೆ ಇದೆ. ಇಲ್ಲಿ ನೂರಾರು ನರ್ಸಿಂಗ್ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಅಲ್ಲದೇ, ನಿತ್ಯವೂ ನೂರಾರು ಜನ ರೋಗಿಗಳು ಹಾಗೂ ಅವರ ಸಹವರ್ತಿಗಳು ಇಲ್ಲಿಗೆ ಬರುತ್ತಾರೆ. ಒಂದು ಬಾರಿ ಡಿಮ್ಹಾನ್ಸ್ ಆಸ್ಪತ್ರೆ ಒಳಹೊಕ್ಕರೆ ಸಾಕು, ಅವರ ಮೊಬೈಲ್ ಸಿಗ್ನಲ್ ಬಂದ್ ಆಗಿ ಹೋಗುತ್ತೆ. ಇದರಿಂದಾಗಿ ತಮ್ಮವರ ಸಂಪರ್ಕಕ್ಕೆ ಪರದಾಡುವ ಸ್ಥಿತಿ ನಿರ್ಮಾಣವಾಗುತ್ತಿದೆ. ಒಂದು ಕಾಲಕ್ಕೆ, ಈ ಜೈಲು ನಗರದ ಹೊರಭಾಗದಲ್ಲಿ ಇತ್ತಾದರೂ ಇದೀಗ ನಗರ ಬೆಳೆದಿದ್ದರಿಂದ ನಗರದ ನಡುವೆ ಬಂದಾಗಿದೆ. ಹೀಗಾಗಿ ಇದೀಗ ಈ ಜೈಲನ್ನು ನಗರದಿಂದ ಹೊರಗಡೆಗೆ ಶಿಫ್ಟ್ ಮಾಡಬೇಕು ಎಂಬುದು ಸ್ಥಳೀಯರ ಆಗ್ರಹವಾಗಿದೆ.

ಈ ಬಗ್ಗೆ ಮಾಹಿತಿಗಾಗಿ ಜೈಲಿನ ಅಧಿಕಾರಿಗಳನ್ನು ಸಂಪರ್ಕಿಸಲು ಯತ್ನಿಸಲಾಯಿತಾದರೂ ಅವರು ಸಂಪರ್ಕಕ್ಕೇ ಸಿಗುತ್ತಿಲ್ಲ. ಅದಕ್ಕೂ ಕಾರಣ ಜಾಮರ್! ಈ ಸಮಸ್ಯೆಯಿಂದ ಬಚಾವ್ ಆಗಲು ಜೈಲು ಸಿಬ್ಬಂದಿ ಲ್ಯಾಂಡ್ ಲೈನ್ ಆದರೂ ಬಳಸಬಹುದಿತ್ತು. ಆದರೆ ಇರುವ ಲ್ಯಾಂಡ್ ಲೈನ್ ಫೋನನ್ನೂ ತೆಗೆದು ಹಾಕಲಾಗಿದೆ. ಹೀಗಾಗಿ ಅವರಿಂದ ಈ ಬಗ್ಗೆ ಯಾವುದೇ ಸ್ಪಷ್ಟನೆ ಸಿಗುತ್ತಲೇ ಇಲ್ಲ.

ಒಟ್ಟಿನಲ್ಲಿ, ಜೈಲಿನಲ್ಲಿ ಅಕ್ರಮಗಳನ್ನು ತಡೆಯಲು ಅಳವಡಿಸಲಾಗಿರುವ ಜಾಮರ್ ಸುತ್ತಮುತ್ತಲಿನ ಜನರ ಬದುಕಿನೊಂದಿಗೆ ಆಟವಾಡುತ್ತಿರುವುದು ಮಾತ್ರ ವಿಪರ್ಯಾಸವೇ ಸರಿ.

## ಕಾಂಗ್ರೆಸೇ ಆಗಿರಲಿ, ನಮ್ಮ ಕುಟುಂಬದವರೇ ಆಗಿರಲಿ ಅಂತವರನ್ನ ಕ್ಷಮಿಸಲ್ಲ

**ಹುಬ್ಬಳ್ಳಿ:** ಮಕ್ಕಳು, ಬಾಣಂತಿಯರು ತಿನ್ನುವ ಅನ್ನಕ್ಕೆ ಕಣ್ಣ ಹಾಕಿದವರು ಕಾಂಗ್ರೆಸ್‌ನವರೇ ಆಗಿರಲಿ, ನಮ್ಮಕುಟುಂಬದ ಸದಸ್ಯನೇ ಆಗಿರಲಿ ಅಂತವರನ್ನು ಕ್ಷಮಿಸಲ್ಲ ಎಂದು ಕಾಂಗ್ರೆಸ್ ಶಾಸಕ ಪ್ರಸಾದ್ ಅಬ್ಬಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಕ್ರಮ ಅಹಾರ ಸಂಗ್ರಹ ಕೇಸ್ ವಿಚಾರವಾಗಿ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪಾಪ ಬಿಜೆಪಿಯವರು ಅಬ್ಬಯ್ಯ ಅವರ ಕಾಲ್ ಡಿಟೇಲ್ಸ್ ತೆಗೆಯರಿ ಅರ್ಥ ಆಗತ್ತೆ ಎನ್ನುತ್ತಿದ್ದಾರೆ. ನನ್ನ ಕಾಲ್ ರೆಕಾರ್ಡ್ ಏನು ತೆಗೆಯುತ್ತೀರಿ, ನಿಮ್ಮ ರೆಕಾರ್ಡ್ ಮೊದಲು ನೋಡಿ. ನಿಮಗೆ ನಾಚಿಕೆ ಆಗಬೇಕು. ನನ್ನ ರೆಕಾರ್ಡ್ ಹುಬ್ಬಳ್ಳಿ ಜನರಿಗೆ ಗೊತ್ತಿದೆ ಎಂದು ವಾಗ್ದಾಳಿ ಮಾಡಿದ್ದಾರೆ.





ನಿಮ್ಮ ಹಿಸ್ಟರಿ ಹುಬ್ಬಳ್ಳಿ ಧಾರವಾಡ ಜನರಿಗೆ ಗೊತ್ತಿದೆ. ಪೊಲೀಸ್ ಕಮೀಷನರ್ ಎಲ್ಲೋ ಒಂದು ಕಡೆ ಎಡವಿದಾರೆ. ಕಳ್ಳರು, ಸುಳ್ಳರು ಎಲ್ಲ ಪಕ್ಷದಲ್ಲಿ ಇರುತ್ತಾರೆ. ಅದು ಪಕ್ಷಕ್ಕೆ ಸಂಬಂಧಿಸಿದ್ದಲ್ಲ. ಈಗಾಗಲೇ ವಜಾ ಮಾಡಿದ್ದೇವೆ. ಪ್ರಧಾನಿ ಮೋದಿ ಹಿಡಕೊಂಡು ಜೋಶಿವರೆಗೂ ಬರೀ ಜಾತಿ ಧರ್ಮದ ಮೇಲೆ ಅವರ ಅಸ್ತಿತ್ವ. ಮುಸ್ಲಿಂ ಪಾಕಿಸ್ತಾನ ಬಿಟ್ಟರೇ ಅವರಿಗೆ ಬೇರೆ ಏನೂ ಇಲ್ಲ ಎಂದು ಕಿಡಿಕಾರಿದ್ದಾರೆ.

**ಮುಸ್ಲಿಮರು ಈ ದೇಶದ ಪ್ರಜೆಗಳಲ್ವಾ, ಈ ನೆಲದಲ್ಲಿ ಹುಟ್ಟಿಲ್ವಾ?:** ಮುಸ್ಲಿಂ ಬಜೆಟ್? ಎಂದು ಬಿಜೆಪಿ ನಾಯಕರ ಟೀಕೆ ವಿಚಾರವಾಗಿ ಮಾತನಾಡಿದ ಅವರು, ಮುಸ್ಲಿಮರು ಈ ದೇಶದ ಪ್ರಜೆಗಳಲ್ವಾ, ಈ ನೆಲದಲ್ಲಿ ಹುಟ್ಟಿಲ್ವಾ? ಅವರು ದೇಶಕ್ಕಾಗಿ ಪ್ರಾಣ ತೆತ್ತಿದ್ದಾರೆ ಅಲ್ವಾ. ಮುಖ್ಯಮಂತ್ರಿ ಸಿದ್ದರಾಮಯ್ಯ ಅದ್ಭುತ ಬಜೆಟ್ ಕೊಟ್ಟಿದ್ದಾರೆ. ಬಿಜೆಪಿ ನಾಯಕರು ಬೇಕಾಬಿಟ್ಟಿಯಾಗಿ ಮಾತನಾಡುತ್ತಿದ್ದಾರೆ ಎಂದಿದ್ದಾರೆ.

ಅಲ್ಪಸಂಖ್ಯಾತರು ಅಂದರೆ ಮುಸ್ಲಿಂ ಅಲ್ಲ, ಜೈನ್, ಸಿಖ್ಖರೂ ಬರುತ್ತಾರೆ. ಬಿಜೆಪಿಯವರು ಯಾವ ಕಾರಣಕ್ಕೆ ಹಲಾಲ್ ಬಜೆಟ್ ಅಂತಿದ್ದಾರೆ. ಮುಸ್ಲಿಂ ಸಮುದಾಯಕ್ಕೆ ಕೊಟ್ಟಿದ್ದು ಕೇವಲ ಒಂದು ಪರ್ಸೆಂಟ್. ಬಸವರಾಜ ಬೊಮ್ಮಾಯಿ ಕೂಡ ಒಂದು ಪರ್ಸೆಂಟ್ ಕೊಟ್ಟಿದ್ದರು. ಹಾಗಾದರೆ ಅವರು ಕೊಟ್ಟಿದ್ದು ಹಲಾಲ್ ಬಜೆಟಾ? ಕೇಂದ್ರ ಸರ್ಕಾರ ಬಾಂಗ್ಲಾದೇಶ, ಅಫ್ಘಾನಿಸ್ತಾನಕ್ಕೆ ಹಣ ಕೊಡುತ್ತೆ. ಅದು ಯಾವ ಬಜೆಟ್? ಎಂದು ಪ್ರಸಾದ್ ಅಬ್ಬಯ್ಯ ವಾಗ್ದಾಳಿ ಮಾಡಿದ್ದಾರೆ.

### ಹೊಸ ಪ್ಲಾನ್?

ಸರ್ಕಾರದ ಬ್ರ್ಯಾಂಡ್ ಬೆಂಗಳೂರಿನ ಕನಸಿಗೆ ಕೈಜೋಡಿಸಿರೋ ಜಲಮಂಡಳಿ 148 ಒಐಆ ಸಾಮರ್ಥ್ಯದ 9 ಕೊಳಚೆನೀರು ಶುದ್ಧೀಕರಣ ಘಟಕ ಸ್ಥಾಪನೆಗೆ ಚಿಂತನೆ ನಡೆಸಿದೆ. ಅಲ್ಲದೇ 195 ಕಿಲೋಮೀಟರ್ ಉದ್ದದ ಚರಂಡಿ ನಿರ್ಮಾಣ ಮಾಡುವ ಮೂಲಕ ಮಳೆನೀರು ಸರಾಗವಾಗಿ ಹರಿದು ಪ್ರವಾಹಸ್ಥಿತಿ ಎದುರಾಗದಂತೆ ತಡೆಯಲು ತಯಾರಿ ನಡೆಸಿದೆ.

ಇನ್ನು ಚರಂಡಿಗಳ ನಿರ್ವಹಣೆ, ಸ್ವಯಂಚಾಲಿತ ಒಳಚರಂಡಿ ನೀರು ಸಂಸ್ಕರಣೆ ಘಟಕಗಳನ್ನು ಸ್ಥಾಪಿಸಿ, ನೀರಿನ ಸದ್ಬಳಕೆ, ಅಂತರ್ಜಲ ಹೆಚ್ಚಳದ ಜೊತೆಗೆ ರಾಜಧಾನಿಯಲ್ಲಿ ಎದುರಾಗುವ ಪ್ರವಾಹದ ಸ್ಥಿತಿ ನಿಭಾಯಿಸಲು ಸರ್ಕಾರ ಮುಂದಾಗಿದೆ. ಇನ್ನು 5 ಸಾವಿರ ಕೋಟಿ ವೆಚ್ಚದ ಈ ಪ್ರಾಜೆಕ್ಟ್‌ನಲ್ಲಿ 3,500 ಕೋಟಿ ಹಣವನ್ನು ವರ್ಲ್ಡ್ ಬ್ಯಾಂಕ್ ಸಾಲ ನೀಡಲಿದ್ದು, ಉಳಿದ ಹಣವನ್ನು ಸರ್ಕಾರ ಹಾಗೂ ಬಿಬಿಎಂಪಿ ಹಾಗೂ ಜಲಮಂಡಳಿಯ ಬೊಕ್ಕಸದಿಂದ ಹೊಂದಿಸಲು ತಯಾರಿ ನಡೆದಿದೆ.

ಸದ್ಯ ಬೆಂಗಳೂರಲ್ಲಿ ಪದೇ ಪದೇ ಎದುರಾಗುವ ನೀರಿನ ಸಮಸ್ಯೆ ಹಾಗೂ ಮಳೆ ನೀರಿನಿಂದಾಗುವ ಪ್ರವಾಹ ತಡೆಗೆ ಬ್ರ್ಯಾಂಡ್ ಬೆಂಗಳೂರಿನ ಪರಿಕಲ್ಪನೆಯಲ್ಲಿ ಈ ಯೋಜನೆಗೆ ತಯಾರಿ ನಡೆದಿದ್ದು, ಸದ್ಯ ಈ ಪ್ಲಾನ್ ಎಷ್ಟರಮಟ್ಟಿಗೆ ಫಲ ನೀಡುತ್ತೆ ಎಂಬುವುದನ್ನು ಕಾದುನೋಡಬೇಕಿದೆ.

### ಜನ ಭಾಗಿ ನಿರೀಕ್ಷೆ

ಏ.4ರಂದು ರಥೋತ್ಸವ ಹಾಗೂ ಧ್ವಜಾರೋಹಣ ನಡೆಯಲಿದ್ದು, ಏ.5ರಿಂದ ಏ.8ರ ತನಕ ಪ್ರತಿದಿನ ವಿಶೇಷ ಪೂಜೆ ಮತ್ತು ಮಹಾಮಂಗಳಾರತಿ ನಡೆಯಲಿದೆ.

ಏ.9ರಂದು ಆರತಿ ದೀಪಗಳು, ಏ.10ರ ಗುರುವಾರ ಹಸೀ ಕರಗ, ಏ.11ರಂದು ಹೊಂಗಲು ಸೇವೆ, ಏ.12ರ ಶನಿವಾರದಂದು ಕರಗ ಶಕ್ತ್ಯೋತ್ಸವ ಹಾಗೂ ಧರ್ಮರಾಯಸ್ವಾಮಿ ರಥೋತ್ಸವ, ಏ.13ರಂದು ಪುರಾಣ ಪ್ರವಚನ ಮತ್ತು ದೇವಸ್ಥಾನದಲ್ಲಿ ಗಾವು ಶಾಂತಿ ಮತ್ತು ಏ.14ರ ಸೋಮವಾರ ವಸಂತೋತ್ಸವ ಧ್ವಜಾರೋಹಣ ನೆರವೇರಲಿದೆ.

### ಮಹಿಳಾ ದಿನಾಚರಣೆ

ಕಳೆದ ಎರಡು ವರ್ಷಗಳಿಂದ 79 ಮಹಿಳೆಯರನ್ನು ಅನುಕಂಪದ ಆಧಾರದ ಮೇಲೆ ವಿವಿಧ ಹುದ್ದೆಗಳಿಗೆ ನಿಗಮದಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ. ನಿಗಮವು ಎಲ್ಲಾ ರೀತಿಯಲ್ಲಿಯೂ ಮಹಿಳೆಯರನ್ನು ಗೌರವಿಸಿ, ಪ್ರೋತ್ಸಾಹಿಸುತ್ತಿದ್ದು, ಈ ಕೆಳಕಂಡ ಕಲ್ಯಾಣ ಕಾರ್ಯಕ್ರಮವನ್ನು ರೂಪಿಸಲಾಗಿದೆ.

ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳಾ ನೌಕರರಿಗೆ ಆಗುವ ಲೈಂಗಿಕ ಕಿರುಕುಳವನ್ನು ತಡೆಯಲು Sexual Harassment of Women at Workplace (Prevention, Prohibition & Redressal) Act-2013 ರನ್ವಯ ಮಹಿಳಾ ನೌಕರರ ಆಂತರಿಕ ದೂರು ಸಮಿತಿಯನ್ನು ರಚಿಸಲಾಗಿದೆ, ಲಿಂಗ ಸಂವೇದಿ ಅರಿವು ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ. ಮಹಿಳಾ ನೌಕರರಿಗೆ ರಾಜ್ಯ ಸರ್ಕಾರದ ಮಾದರಿಯಲ್ಲಿ 180 ದಿನಗಳ ಹೆರಿಗೆ ರಜೆಯನ್ನು ನೀಡಲಾಗುತ್ತಿದೆ. ಸರ್ಕಾರದ ಮಾದರಿಯಲ್ಲಿ ಕಿರಿಯ ಮಗುವಿಗೆ 18 ವರ್ಷ ತಲುಪುವವರೆಗೆ ಒಟ್ಟು ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ (180 ದಿನಗಳ) ''ಶಿಶುಪಾಲನಾ ರಜೆ'' ಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಮಗುವಿಗೆ ಮೂರು ವರ್ಷ ತುಂಬುವವರೆಗೆ ರೂ.1250/- ಗಳನ್ನು ಮಾಸಿಕ ಶಿಶು ಪಾಲನಾ ಭತ್ಯೆ ನೀಡಲಾಗುತ್ತಿದ್ದು, ಇದುವರೆವಿಗೂ, ನಿರ್ವಾಹಕರು-17, ತಾಂತ್ರಿಕ-82 ಇತರೆ ಮಹಿಳಾ ಸಿಬ್ಬಂದಿಗಳು-78 ಒಟ್ಟಾರೆ 177 ಮಹಿಳಾ ಸಿಬ್ಬಂದಿಗಳು ಶಿಶುಪಾಲನಾ ಭತ್ಯೆಯನ್ನು ಪಡೆಯುತ್ತಿದ್ದಾರೆ. ಬುದ್ದಿಮಾಂದ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ಮಹಿಳಾ ನೌಕರರಿಗೆ ಒಟ್ಟು 730 ದಿವಸಗಳ ''ಶಿಶು ಪಾಲನಾ ರಜೆ''ಯನ್ನು ವೇತನ ಸಹಿತವಾಗಿ ನೀಡಲಾಗುತ್ತಿದೆ.. ಘಟಕಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗಳಿಗೆ ಪ್ರತ್ಯೇಕ ವಿಶ್ರಾಂತಿ ಗೃಹ ಹಾಗೂ ಶೌಚಾಲಯದ ವ್ಯವಸ್ಥೆ ಕಲ್ಪಿಸಲಾಗಿದೆ. ನಿಗಮವು ವಿದ್ಯಾಚೇತನ ಯೋಜನೆಯಡಿ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ. ಪಿ.ಹೆಚ್.ಡಿ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ-2, ವೈದ್ಯಕೀಯ-43, ಡಿಗ್ರಿ-703, ಡಿಪ್ಲೋಮೋ-43, ಒಟ್ಟಾರೆ ಪಿ.ಯು.ಸಿ.ಯಿಂದ, ಪಿ.ಹೆಚ್.ಡಿ.ವರೆಗಿನ ವಿದೇಶಿ ವ್ಯಾಸಂಗ ಸೇರಿದಂತೆ ಒಟ್ಟು 1402 ಮಹಿಳಾ ವಿದ್ಯಾರ್ಥಿಗಳಿಗೆ. (2022-23 ರಿಂದ 2024-25) ರೂ.70,71,500/- (ಎಪ್ಪತ್ತು ಲಕ್ಷದ ಎಪ್ಪತ್ತೊಂದು ಸಾವಿರದ ಐನೂರು ರೂ.ಗಳು ಮಾತ್ರ) ವಿದ್ಯಾರ್ಥಿ ವೇತನ ನೀಡಲಾಗಿದೆ. ಜನವರಿ 2025 ರಿಂದ ನೂತನ ''ಕೆ.ಎಸ್‌ಆರ್.ಟಿ.ಸಿ ಆರೋಗ್ಯ'' ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯವನ್ನು ಜಾರಿಗೊಳಿಸಿದ್ದು, ಇದುವರೆವಿಗೂ ಒಟ್ಟಾರೆ 984 ಮಹಿಳಾ ಸಿಬ್ಬಂದಿಗಳು ಚಿಕಿತ್ಸೆಗೊಳಪಟ್ಟಿರುತ್ತಾರೆ ಹಾಗೂ ಮಹಿಳಾ ಸಿಬ್ಬಂದಿ ಅವಲಂಬಿತರು 11860 ಜನ ಚಿಕಿತ್ಸೆ ಪಡೆದಿದ್ದು, ಅವಲಂಬಿತರ ಪತ್ನಿ-6996, ತಾಯಿ-3519 ಹಾಗೂ ಹೆಣ್ಣು ಮಕ್ಕಳು-2935 ಚಿಕಿತ್ಸೆ ಪಡೆದಿರುವ ಮೊತ್ತ ರೂ19.87 ಕೋಟಿ ಮೊತ್ತವಾಗಿದೆ.

ಇಂದು ನಿಗಮದ 17 ವಿಭಾಗಗಳಿಂದ ತಲಾ ಒಬ್ಬರಂತೆ ಉತ್ತಮ ಕಾರ್ಯ ಸಾಧನೆ ತೋರಿದ, ತಾಂತ್ರಿಕ ಸಿಬ್ಬಂದಿ-19, ನಿರ್ವಾಹಕರು-16, ಹಾಗೂ ಕರಾಸಾ ಪೇದೆ-7, ಒಟ್ಟು 42 ಮಹಿಳಾ ಸಿಬ್ಬಂದಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಕಾರ್ಯಕ್ರಮದಲ್ಲಿ ಭಾಆಸೇ ನಿರ್ದೇಶಕಿ ಡಾ. ನಂದಿನಿ ದೇವಿ ಕೆ. (ಸಿಬ್ಬಂದಿ ಮತ್ತು ಜಾಗೃತ) ಹಾಗೂ ಹಿರಿಯ ಅಧಿಕಾರಿ/ಸಿಬ್ಬಂದಿಗಳು ಭಾಗವಹಿಸಿದ್ದರು.

### ಪ್ರಶಸ್ತಿಗಳು

ಈ ಸಂಸ್ಥೆಯು 59 ವರ್ಷಗಳ ಅನುಭವವನ್ನು ಹೊಂದಿದ್ದು, ದೇಶದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯ ಅಭಿವೃದ್ದಿಗಾಗಿ ಶ್ರಮಿಸುತ್ತಿದೆ. ಕೆಎಸ್‌ಆರ್‌ಟಿಸಿಗೆ ಅಶ್ವಮೇಧ ಬ್ರ್ಯಾಂಡಿಂಗ್ ಹಾಗೂ ವರ್ಚಸ್ಸು ಅಭಿವೃದ್ಧಿ, ಕಾರ್ಮಿಕರ ಕಲ್ಯಾಣಕ್ಕಾಗಿ

ಮೊದಲನೇ ಪುಟದಿಂದ...

ಕೈಗೊಂಡಿರುವ ವಿನೂತನ ಯೋಜನೆಗಳು ಹಾಗೂ ಗಣಕೀಕರಣ ಉಪಕ್ರಮಗಳಿಗಾಗಿ ಮೂರು ಪ್ರಶಸ್ತಿಗಳು ಲಭಿಸಿದೆ.

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಒಕ್ಕೂಟದ ವತಿಯಿಂದ ನವದೆಹಲಿಯಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಡಾ. ಕಿರಣ್ ಬೇಡಿ ಐಪಿಎಸ್(ನಿವೃತ್ತ ) ರವರು ಪ್ರಶಸ್ತಿ ಪ್ರಧಾನ ಮಾಡಿದ್ದು, ಈ ಸಂದರ್ಭದಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕರು ಪ್ರಿಯಾಂಗ ಭಾಆಸೇ, ನಿರ್ವಾಹಕ ನಿರ್ದೇಶಕರು, ಎಎಸ್‌ಆರ್‌ಟಿಯು ಸೂರ್ಯಕಿರಣ್ ಉಪಸ್ಥಿತರಿದ್ದು, ಉಪಮುಖ್ಯ ಸಂಚಾರ ವ್ಯವಸ್ಥಾಪಕರು ಗುರುರಾಜ ಹೆಚ್, ಹಾಗೂ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ ರಾಧಾರವರು ನಿಗಮದ ಪರವಾಗಿ ಪ್ರಶಸ್ತಿಗಳನ್ನು ಸ್ವೀಕರಿಸಿದ್ದಾರೆ. ಇದೆ ಸಂದರ್ಭದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಶ್ರೀಮತಿ ಸುಲೋಚನಾ ದೇವಿ ಚಾಲಕ ಕಂ ನಿರ್ವಹಕಿ, ಆನೇಕಲ್ ಘಟಕರವರು ಸಾರಿಗೆ ಸಂಸ್ಥೆಯಲ್ಲಿ ಸಲ್ಲಿಸಿರುವ 26 ವರ್ಷಗಳ ಸೇವೆಯನ್ನು ಗುರುತಿಸಿ ಸನ್ಮಾನಿಸಲಾಗಿದೆ.

### ಬಟಾಣಿ ಬ್ಯಾನ್ ಆಗುತ್ತಾ?

ಬಟಾಣಿಯಲ್ಲೂ ಕ್ಯಾನ್ಸರ್ ತರುವ ಅಂಶ ಬೆಳಕಿಗೆ ಬಂದಿದೆ. ಈಗಾಗಲೇ ಆಹಾರ ಇಲಾಖೆ ಆಯುಕ್ತ ಶ್ರೀನಿವಾಸ್ ಕಲರ್ ಬಳಕೆ ನಿಷೇಧದ ಬಗ್ಗೆ ಶಿಫಾರಸು ಮಾಡಿದ್ದಾರೆ.

ಆದ್ರೆ, ಮತ್ತೊಂದು ಸುತ್ತಿನ ಪರೀಕ್ಷೆ ಬಳಿಕ ಬಟಾಣಿಗೆ ಬಣ್ಣ ಬಳಕೆ ಬ್ಯಾನ್‌ಗೆ ಸಿದ್ಧತೆ ನಡೆಸಿದ್ದಾರೆ. ಮತ್ತೊಂದೆಡೆ ಕರಿದ ಬಟಾಣಿಯಲ್ಲಿ ಕ್ಯಾನ್ಸರ್ ಕಾರಕ ಅಂಶ ಪತ್ತೆಯಾದ್ರೂ, ಬೆಂಗಳೂರಲ್ಲಿ ಮಾತ್ರ ಕಲರ್ ಫುಲ್ ಬಟಾಣಿ ಮಾರಾಟ ಮಾತ್ರ ನಿಂತಿಲ್ಲ. ಮೆಜೆಸ್ಟಿಕ್ ನ ಅನೇಕ ಅಂಗಡಿಗಳಲ್ಲಿ ಬಟಾಣಿ ಮಾರಾಟ ಮಾಡುತ್ತಿರುವುದು ಟಿವಿ9 ರಿಯಾಲಿಟಿ ಚೆಕ್ ನಲ್ಲಿ ಬಯಲಾಗಿದೆ.

ಗೋಬಿ, ಕಬಾಬ್ ಬಳಿಕ ಪಾನಿಪುರಿಯಲ್ಲೂ ಕ್ಯಾನ್ಸರ್ ಕಾರಕ ಅಂಶ ಪತ್ತೆ!: ಕರಿದ ಬಟಾಣಿ ಬಹುತೇಕ ಟೈಮ್ ಪಾಸ್ ಆಹಾರವಾಗಿದೆ. ಶಾಲಾ, ಕಾಲೇಜುಗಳ ಬಳಿ ಸಣ್ಣ ಸಣ್ಣ ಪ್ಲಾಸ್ಟಿಕ್ ಪಾಕೆಟ್‌ಗಳಲ್ಲಿ ಕರಿದ ಬಟಾಣಿ ಹೆಚ್ಚು ಮಾರಾಟ ಮಾಡಲಾಗುತ್ತದೆ. ಈ ಬಟಾಣಿಯನ್ನು ಮಕ್ಕಳು ಹೆಚ್ಚಾಗಿ ತಿನ್ನುತ್ತಿದ್ದಾರೆ. ಇನ್ನು ದೊಡ್ಡವರು ಸಹ ಟೈಮ್ ಪಾಸ್ ಗೆ ಅಂತ ಈ ಬಟಾಣಿ ತಿನ್ನುತ್ತಾರೆ. ಇನ್ನು ಬಾರ್ ಗಳಲ್ಲೂ ಸಹ ಎಣ್ಣೆ ಜೊತೆ ಸ್ನ್ಯಾಕ್ಸ್ ಅಂತ ಈ ಬಟಾಣಿ ಮಾರಾಟ ಮಾಡಲಾಗುತ್ತಿದೆ.

### ಬಳಕೆ ಮಾಡುವಂತಿಲ್ಲ

ಸ್ಥಳೀಯ ಸ್ವ-ಆಡಳಿತ ಸಂಸ್ಥೆಗಳು ಈ ಪರವಾನಗಿಗಳನ್ನು ನೀಡುವ ಅಧಿಕಾರವನ್ನು ಹೊಂದಿವೆ.

ಮದುವೆ ಆರತಕ್ಷತೆಗಳಲ್ಲಿ ಅರ್ಧ ಲೀಟರ್ ನೀರಿನ ಬಾಟಲಿಗಳನ್ನು ಬಳಸುವುದನ್ನು ನಿಷೇಧಿಸಲಾಗಿದೆ ಎಂದು ಸ್ಥಳೀಯ ಸ್ವ-ಸರ್ಕಾರಿ ಇಲಾಖೆಯ ವಿಶೇಷ ಕಾರ್ಯದರ್ಶಿ ಹೇಳಿದರು. ರೈಲ್ವೆ ಹಳಿಗಳನ್ನು ಕಸದಿಂದ ಮುಕ್ತವಾಗಿಡುವ ಜವಾಬ್ದಾರಿ ಅದರ ಮೇಲಿದೆ ಎಂದು ನ್ಯಾಯಾಲಯವು ರೈಲ್ವೆ ಇಲಾಖೆಯನ್ನು ಟೀಕಿಸಿತು.

ಸಾರ್ವಜನಿಕರಿಗೆ ಮತ್ತು ಕಾನೂನು ವ್ಯವಸ್ಥೆಗೆ ತನ್ನ ಬಾಧ್ಯತೆಯನ್ನು ಅದು ಪೂರೈಸಬೇಕು ಎಂದು ನ್ಯಾಯಾಲಯ ಹೇಳಿದೆ. ರೈಲ್ವೆ ಹಳಿಗಳ ಮೇಲೆ ಕಸ ಸುರಿಯಲು ಅನುಮತಿ ನೀಡಬಾರದು ಎಂದು ಹೇಳಿದೆ. ಕಸವನ್ನು ಸಂಪೂರ್ಣವಾಗಿ ತೆಗೆದುಹಾಕುವಂತೆ ಹೈಕೋರ್ಟ್ ರೈಲ್ವೆಗೆ ನಿರ್ದೇಶನ ನೀಡಿತು.

### ಜೀವಾವಧಿ ಶಿಕ್ಷೆ

2023 ರ ಸೆಪ್ಟೆಂಬರ್ ತಿಂಗಳು ಬಾಗಲಗುಂಟೆ ಠಾಣಾ ವ್ಯಾಪ್ತಿಯ ಟಿ.ದಾರಸರಹಳ್ಳಿ ಬಳಿ ಜೋಡಿ ಕೊಲೆಯಾಗಿತ್ತು. ನವನೀತ ಹಾಗೂ ಆಕೆಯ ಹನ್ನೊಂದು ವರ್ಷದ ಮಗ ಸಾಯಿ ಸೃಜನ್ ಎಂಬಾತನನ್ನ ಆರೋಪಿ ಶೇಖಪ್ಪ ಕೊಲೆ ಮಾಡಿದ್ದ.

ಗಂಡನಿಂದ ಬೇರ್ಪಟ್ಟು ಇಬ್ಬರ ಮಕ್ಕಳ ಜೊತೆ ಮಹಿಳೆ ನವನೀತ ವಾಸವಾಗಿದ್ದರು. ಇದೇ ವೇಳೆ, ಎಲೆಕ್ಟ್ರಿಕ್ ಕೆಲಸ ಮಾಡ್ತಿದ್ದ ಶೇಖಪ್ಪನ ಪರಿಚಯವಾಗಿ ಆತ್ಮೀಯತೆ, ಸಲುಗೆ ಬೆಳೆಯಿತು. ಈ ನಡುವೆ ಮತ್ತೊಬ್ಬ ವ್ಯಕ್ತಿ ಜೊತೆ ಮಹಿಳೆ ನವನೀತ ಓಡಾಡುತ್ತಿದ್ದರು. ಇದಕ್ಕೆ ಕೋಪಗೊಂಡು ಗಲಾಟೆ ತೆಗೆದು ಮನೆಯಲ್ಲೇ ಚಾಕುವಿನಿಂದ ಚುಚ್ಚಿ ಆರೋಪಿ ಕೊಲೆ ಮಾಡಿದ್ದಾನೆ.

ಈ ನಡುವೆ ಕೊಲೆಯನ್ನ ನೋಡಿದ್ದ ಆಕೆಯ ಮಗನನ್ನ ಉಸಿರುಗಟ್ಟಿಸಿ ಕೊಲೆ ಮಾಡಿದ್ದ. ಬಾಗಲಗುಂಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ಆರೋಪಿಯನ್ನ ಬಂಧಿಸಲಾಗಿತ್ತು. ಚಾರ್ಜ್‌ಶೀಟ್ ಸಲ್ಲಿಸಿದ್ದು, ನ್ಯಾಯಾಲಯದಲ್ಲಿ ಟ್ರಯಲ್ ನಡೆಸಲಾಗಿತ್ತು.

### ಬರಹ, ಧ್ವಂಸ

ಕಳೆದ ವರ್ಷವೂ ದೇವಾಲಯ ಧ್ವಂಸ ಪ್ರಕರಣಗಳು ನಡೆದಿವೆ, ಕ್ಯಾಲಿಫೋರ್ನಿಯಾದ ಸ್ಯಾಕ್ರಮೆಂಟೋದಲ್ಲಿರುವ ಬಿಎಪಿಎಸ್ ಶ್ರೀ ಸ್ವಾಮಿನಾರಾಯಣ ಮಂದಿರವನ್ನು ಸೆಪ್ಟೆಂಬರ್ 25 ರ ರಾತ್ರಿ ಧ್ವಂಸಗೊಳಿಸಲಾಯಿತು. ನ್ಯೂಯಾರ್ಕ್‌ನ ಬಿಎಪಿಎಸ್ ಮಂದಿರದ ಮೇಲೆ ಇದೇ ರೀತಿಯ ದಾಳಿ ನಡೆದ 10 ದಿನಗಳ ಒಳಗೆ ಈ ಘಟನೆ ನಡೆದಿದೆ.

ಹಿಂದೂಗಳು ಹಿಂದಿರುಗಿ ಎಂಬಂತಹ ಬರಹಗಳು ಸೇರಿದಂತೆ ಹಿಂದೂ ವಿರೋಧಿ ಸಂದೇಶಗಳು ಸ್ಥಳೀಯ ಹಿಂದೂ ಸಮುದಾಯವನ್ನು ಗಾಬರಿಗೊಳಿಸಿವೆ. ಇದಕ್ಕೆ ಪ್ರತಿಕ್ರಿಯೆಯಾಗಿ, ಸಮುದಾಯವು ಇಂತಹ ದ್ವೇಷದ ಕೃತ್ಯಗಳ ವಿರುದ್ಧ ಒಗ್ಗಟ್ಟಿನಿಂದ ನಿಲ್ಲುವ ತನ್ನ ಬದ್ಧತೆಯನ್ನು ಪುನರುಚ್ಚರಿಸಿತು.

### ಏನು ಗೊತ್ತಾ?

ರೈಲಿನಿಂದ ಇಳಿದು ಒಂದು ಡಿಮಾರ್ಟ್ ಗೆ ಹೋಗಿದ್ದಾನೆ. ಅಲ್ಲಿ ಸಿಬ್ಬಂದಿ ಆತನನ್ನು ಗುರುತಿಸಿ ಪೊಲೀಸರಿಗೆ ತಿಳಿಸಿದ್ದಾರೆ. ನಿನ್ನೆ ಉಡುಪಿಯ ಮಾರ್ಟ್ ಒಂದರಲ್ಲಿ ದಿಗಂತ್ ಪತ್ತೆಯಾಗಿದ್ದು, ಸುರಕ್ಷಿತವಾಗಿ ಇದ್ದಾನೆ ಎನ್ನಲಾಗಿದೆ.

**ಪ್ರಕರಣದ ಹಿನ್ನೆಲೆ:** ಫರಂಗಿ ಪೇಟೆ ನಿವಾಸಿಯಾಗಿದ್ದ ದಿಗಂತ್, ದ್ವಿತೀಯ ಪಿಯುಸಿ ಓದುತ್ತಿದ್ದ. ಕಳೆದ ಫೆಬ್ರವರಿ 25ರಂದು ದೇವಸ್ಥಾನಕ್ಕೆ ಹೋಗಿ ಬರುತ್ತೇನೆ ಅಂತ ಹೋದವನು ಏಕಾಏಕಿ ನಾಪತ್ತೆಯಾಗಿದ್ದ. ಮಗ ಎಷ್ಟು ಹೊತ್ತಾದರೂ ಮನೆಗೆ ಮರಳದೇ ಇದ್ದುದ್ದನ್ನು ನೋಡಿ ಪೋಷಕರು ಗಾಬರಿಯಾಗಿದ್ದರು. ಬಳಿಕ ದೇವಸ್ಥಾನ, ವ್ಯಾಯಾಮ ಶಾಲೆ ಸೇರಿದಂತೆ ಎಲ್ಲಾ ಕಡೆ ಹುಡುಕಾಡಿದ್ದರು. ಆದರೂ ದಿಗಂತ್ ಮಾತ್ರ ಪತ್ತೆಯಾಗಿರಲಿಲ್ಲ.

**ರೈಲ್ವೆ ಹಳಿ ಬಳಿ ಚಪ್ಪಲಿ, ರಕ್ತದ ಕಲೆ ಪತ್ತೆ:** ದಿಗಂತ್‌ಗಾಗಿ ಎಲ್ಲೆಡೆ ಹುಡುಕಾಟ ಹುಡುಕಾಟ ನಡೆಸಲಾಯ್ತು. ಕೊನೆಗೆ ಪೊಲೀಸರಿಗೆ ದೂರು ನೀಡಲಾಯ್ತು. ದೂರು ಪಡೆದ ಪೊಲೀಸರು ದಿಗಂತ್ ಪತ್ತೆಗಾಗಿ ನಾಲ್ಕು ತಂಡಗಳನ್ನು ರಚಿಸಿದ್ದರು. ರೈಲ್ವೆ ಹಳಿ ಬಳಿ ದಿಗಂತ್ ಚಪ್ಪಲಿ ಪತ್ತೆಯಾಗಿದ್ದು, ರಕ್ತದ ಕಲೆ ಕೂಡ ಇತ್ತು ಎನ್ನಲಾಗಿದೆ. ಇದರಿಂದ ದಿಗಂತ್ ಪೋಷಕರು ಮತ್ತಷ್ಟು ಆತಂಕಕ್ಕೆ ಒಳಗಾಗಿದ್ದರು.

**ಹಿಂದೂ ಸಂಘಟನೆಗಳಿಂದ ಪ್ರತಿಭಟನೆ:** ಇನ್ನು 5 ದಿನ ಆದರೂ ವಿದ್ಯಾರ್ಥಿ ದಿಗಂತ್ ಪತ್ತೆಯಾಗದಕ್ಕೆ ಪೋಷಕರಷ್ಟೇ ಅಲ್ಲದೇ ಗ್ರಾಮದ ಜನರು, ಹಿಂದೂ ಸಂಘಟನೆ ಸದಸ್ಯರು ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಪೊಲೀಸರ ವಿರುದ್ಧ ಮಾರ್ಚ್ 1ರಂದು ಫರಂಗಿಪೇಟೆ ಬಂದ್ ಮಾಡಿ, ಪ್ರತಿಭಟನೆ ನಡೆಸಲಾಗಿತ್ತು.

### ಜಪ್ತಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೆಚ್ಚಿನ ಜಿಲ್ಲೆಗಳಲ್ಲಿ ಚಾಮರಾಜನಗರ ಜಿಲ್ಲೆ ಕೂಡ ಒಂದು. ಯಾರೇ ಮುಖ್ಯಮಂತ್ರಿಯಾದರೂ ಚಾಮರಾಜನಗರ ಜಿಲ್ಲೆಗೆ ತೆರಳಲು ಹಿಂದೇಟು ಹಾಕುತ್ತಾರೆ. ಚಾಮರಾಜನಗರ ಜಿಲ್ಲೆಗೆ ಹೋದರೇ ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬ ವಾಡಿಕೆ ಇದೆ. ಆದರೆ, ಸಿಎಂ ಸಿದ್ದರಾಮಯ್ಯ ಅನೇಕ ಬಾರಿ ಚಾಮರಾಜನಗರಕ್ಕೆ ಭೇಟಿ ನೀಡಿ ಆ ಕಳಂಕವನ್ನು ದೂರವಾಗಿಸಿದ್ದಾರೆ.

ಜೊತೆಗೆ ಮಲೆ ಮಹದೇಶ್ವರ ಬೆಟ್ಟವನ್ನ ಮದ್ಯ ಮುಕ್ತ ಪ್ರದೇಶವನ್ನಾಗಿಸುವ ಸಂಕಲ್ಪ ಮಾಡಿದ್ದಾರೆ. ಜೊತೆಗೆ ಅಧಿಕಾರಿಗಳಿಗೆ ಕೆಡಿಪಿ ಸಭೆಯಲ್ಲಿ ಖಡಕ್ ಆಗಿ ಸೂಚನೆ ನೀಡಿದ್ದಾರೆ. ಇವೆಲ್ಲರ ನಡುವೆ ಈಗ ಮತ್ತೆ ಮಲೆ ಮಹದೇಶ್ವರ ಬೆಟ್ಟದಲ್ಲಿ 300 ಲೀಟರ್ ಮದ್ಯ ಜಪ್ತಿಯಾಗಿದೆ. ಅಕ್ರಮವಾಗಿ ಮದ್ಯ ತಂದು ಮಾರಾಟ ಮಾಡುತ್ತಿದ್ದ ಸಿದ್ದಪ್ಪ ಹಾಗೂ ಮುತ್ತುರಾಜ್ ಎಂಬ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಅಕ್ರಮ ಮದ್ಯ ಮಾರಟಗಾರರ ಜೊತೆ ಅಧಿಕಾರಿಗಳ ಕೈವಾಡವಿದೆ ಎಂಬ ಆರೋಪವೂ ಕೇಳಿಬಂದಿದೆ. ಜಿಲ್ಲಾ ಎಸ್ ಪಿ ಹಾಗೂ ಅಬಕಾರಿ ಇಲಾಖೆಯ ಡಿಸಿ ಈ ಕುರಿತು ಹೆಚ್ಚಿನ ನಿಗಾ ವಹಿಸಬೇಕಿದೆ. ಹಾಗಿದಲ್ಲಿ ಮಾತ್ರ, ಮಾದಪ್ಪನ ಕ್ಷೇತ್ರದ ಪಾವಿತ್ರ್ಯ ಉಳಿಸಿಕೊಳ್ಳಲು ಸಾಧ್ಯವಾಗುತ್ತದೆ.

### ಆತ್ಮಹತ್ಯೆ

ಬಳಿಕ ಪಿಜಿಯಲ್ಲಿ ಫ್ಯಾನಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಘಟನೆ ಸಂಬಂಧ ಕೊತ್ತನೂರು ಪೊಲೀಸ್ ಠಾಣೆಯಲ್ಲಿ ಅಸಹಜ ಸಾವು ಪ್ರಕರಣ ದಾಖಲಿಸಲಾಗಿದೆ.

ಸಂಜೆ ಮುಗಿಲು
ಭಾನುವಾರ
9.3.2025



# ದೇಹದಾರ್ಢ್ಯತೆ ಕಾಪಾಡಿಕೊಳ್ಳಲು ಕ್ರೀಡೆಗಳಲ್ಲಿ ತೊಡಗಿಕೊಳ್ಳಿ



**ವಿಜಯಪುರ:** ಬದಲಾಗುತ್ತಿರುವ ಕಾಲಮಾನದಲ್ಲಿ ಅನಾರೋಗ್ಯ ಎಂಬುದು ಎಲ್ಲಾ ವಯಸ್ಸಿನವರುಗಳಿಗೂ ಕಾಡುತ್ತಿದ್ದು, ಉತ್ತಮ ಆರೋಗ್ಯ, ದೇಹದಾರ್ಢ್ಯತೆಯನ್ನು ಉಳಿಸಿಕೊಳ್ಳಬೇಕೆಂದಲ್ಲಿ ಪ್ರತಿಯೊಬ್ಬರು ಯಾವುದಾದರೂ ಒಂದೊಂದು ಕ್ರೀಡೆಯಲ್ಲಿ ತೊಡಗಿಕೊಳ್ಳಬೇಕೆಂದು ದೇವನಹಳ್ಳಿಯ ದಾಸರ ಬೀದಿಯ ಮುರಳಿರವರು ತಿಳಿಸಿದರು.

ಇಲ್ಲಿನ ಸರ್ಕಾರಿ ಪದವಿಪೂರ್ವ ಕಾಲೇಜಿನ ಆಟದ ಮೈದಾನದಲ್ಲಿ ಎರಡು ದಿನಗಳ ಕಾಲದ ಹದಿನಾರನೇ ವರ್ಷದ ರಾಯಲ್ ಕ್ರಿಕೆಟ್ ಕ್ಲಬ್ ವತಿಯಿಂದ ಏರ್ಪಡಿಸಿದ್ದ ಟೆನಿಸ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ ಅನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ದೇವನಹಳ್ಳಿ ಪುರಸಭೆ ಸದಸ್ಯರಾದ ಬಾಲರಾಜುರವರು ಕ್ರೀಡೆಯಲ್ಲಿ ತಂಡಗಳ ಸೋಲು ಗೆಲುವು ಎನ್ನುವುದಕ್ಕಿಂತ ಕ್ರೀಡೆ ಗೆಲ್ಲುವಂತಾಗಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕ್ರಿಕೆಟ್ ಟೂರ್ನಮೆಂಟ್ನ ಆಯೋಜಕರುಗಳಾದ ಮೋಹನ್, ಮಂಜುನಾಥ್, ವಿನಯ್, ಲೋಕೇಶ್, ಮತ್ತಿತರರು ಉಪಸ್ಥಿತರಿದ್ದರು.

ರಾಯಲ್ ಕ್ರಿಕೆಟ್ ಕ್ಲಬ್, ಹುಡುಗರ ತಂಡ, ಲೈಬ್ರರಿ ಬಾಯ್ಸ್, ಗೋಲ್ಡನ್ ಈಗಲ್ಸ್, ಎಲೈಟ್ ಬಾಯ್ಸ್, ಹನುಮಾನ್ ಬಾಯ್ಸ್, ಮಾರ್ನಿಂಗ್ ಕ್ರಿಕೆಟರ್ಸ್ ಮೊದಲಾಗಿ ಏಳು ತಂಡಗಳು ಭಾಗವಹಿಸಿದ್ದವು.



**ವಿಜಯಪುರ ಪಟ್ಟಣದ ಶ್ರೀ ಓಂಕಾರೇಶ್ವರ ಸ್ವಾಮಿ ಒಕ್ಕಲಿಗ ಟ್ರಸ್ಟ್‌ನ ನೂತನ ಅಧ್ಯಕ್ಷರಾಗಿ ವಿಜಯಪುರ ಟೌನ್ ಮಾಜಿ ಪುರಸಭಾ ಸದಸ್ಯರು ಟೌನ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಆದ ವಿ.ಎಂ.ನಾಗರಾಜ್ ಅವಿರೋಧ ಆಯ್ಕೆಯಾದರು. ಪುರಸಭಾ ಸದಸ್ಯರಾದ ನಾರಾಯಣಸ್ವಾಮಿ, ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯ ಕೋಕಾ ಕೋಲಾ ಮಂಜುನಾಥ್, ಟ್ರಸ್ಟ್‌ನ ಮಾಜಿ ಅಧ್ಯಕ್ಷರುಗಳಾದ ಗೋಪಾಲಣ್ಣ, ದೇವರಾಜ್, ಮುಖಂಡರಾದ ಸುಬ್ಬಣ್ಣ, ಬಚ್ಚೇಗೌಡ ರಘು, ಸುರೇಶ್, ಕೃಷ್ಣಮೂರ್ತಿ ಉಪಸ್ಥಿತರಿದ್ದರು.**

# ಮಹಿಳೆ ಒಬ್ಬಳು ಮಾತ್ರವೇ ವ್ಯಕ್ತಿಯ ಜೀವನದಲ್ಲಿ ಎಲ್ಲವೂ ಆಗಲು ಸಾಧ್ಯ

**ವಿಜಯಪುರ:** ಒಬ್ಬ ವ್ಯಕ್ತಿಯ ಜೀವನದಲ್ಲಿ ತಾಯಿಯಾಗಿ, ತಂಗಿಯಾಗಿ, ಮಗಳಾಗಿ, ಸಹೋದರಿಯಾಗಿ, ಹೆಂಡತಿಯಾಗಿ, ಮುಂತಾಗಿ ಮನುಷ್ಯನ ಹುಟ್ಟಿನಿಂದ ಸಾಯುವವರೆಗೂ ಎಲ್ಲಾ ರೀತಿಯಲ್ಲಿಯೂ ನೋಡಿಕೊಳ್ಳಲು ಒಬ್ಬ ಮಹಿಳೆಗೆ ಮಾತ್ರ ಸಾಧ್ಯವೆಂದು ಬೆಂಗಳೂರಿನ ಅಯೋಧ್ಯಾನಗರದ ಶಿವಾಚಾರ ನಗರ್ಥ ವಿದ್ಯಾವರ್ಧಕ ಸಂಘದ ನಿರ್ದೇಶಕರಾದ ಸುವರ್ಣ ಶಿವಕುಮಾರ್ ತಿಳಿಸಿದರು.

ಅವರು ಇಲ್ಲಿನ ಹರಿಹರ ಸಂಗಮ ಕ್ಷೇತ್ರವಾದ ಶ್ರೀನಗರೇಶ್ವರ ಸ್ವಾಮಿ ದೇವಾಲಯದಲ್ಲಿ ಶ್ರೀ ನಗರೇಶ್ವರ ಸ್ವಾಮಿ ಹಾಗೂ ಶ್ರೀ ಆದಿನಾರಾಯಣ ಸ್ವಾಮಿ ರವರುಗಳಿಗೆ ಟೌನ್ ಮಹಿಳಾ ಸಂಘದ ವತಿಯಿಂದ ಮಹಿಳಾ ದಿನದ ಅಂಗವಾಗಿ ಏರ್ಪಡಿಸಿದ್ದ ವಿಶೇಷ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಸಂಘದ ಸದಸ್ಯರಾದ ಸವಿತಾ ಮುರಳಿಧರ್ ರವರು ಮಾತನಾಡಿ, ಈ ಹಿಂದೆಯೂ ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಆದಿಪರಾಶಕ್ತಿ, ಪಾರ್ವತಿ, ದುರ್ಗಾಮಾತಾ ಎಂದು ಮಹಿಳೆಗೆ ಸಾಕಷ್ಟು ಪ್ರಾಮುಖ್ಯತೆ ಇರುವುದರೊಂದಿಗೆ ನಮ್ಮ ಭಾರತದಲ್ಲಿಯೂ ಇಂದಿರಾಗಾಂಧಿ ಸಾಕಷ್ಟು ವರ್ಷಗಳ ಕಾಲ ಭಾರತ ದೇಶವನ್ನು ಆಳಿದ್ದು, ಇದೀಗ ನಮ್ಮ ರಾಷ್ಟ್ರಪತಿಗಳಾದ ದ್ರೌಪತಿ ಮುರ್ಮು ರವರು ಸಹ ಮಹಿಳೆಯಾಗಿದ್ದು, ನಮ್ಮ ಸಂಸ್ಕೃತಿಯಲ್ಲಿ ಮಹಿಳೆಗೆ ವಿಶೇಷ ಪ್ರಾಧಾನ್ಯತೆ ಇದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿ ಭಾರತಿ ಪ್ರಭುದೇವ್, ಉಪಾಧ್ಯಕ್ಷರಾದ ಭಾರತಿ ವಿಶ್ವನಾಥ್, ಖಜಾಂಚಿ ಶ್ವೇತಾ ಮಂಜುನಾಥ್, ವೀಣಾ ನಟಶೇಖರ್, ಭಾರತಿರಾಜು, ಮಾಣಿಕ್ಯ ನಂಜಣ್ಣ, ಸಹಕಾರ್ಯದರ್ಶಿ ರಮಾ ನಟರಾಜ್, ಶಾಂತಾಬಸವರಾಜು, ಮಂಜುಳಾ ರವಿಕುಮಾರ್, ಅನ್ನಪೂರ್ಣ ಪುಟ್ಟರಾಜು ಉಪಸ್ಥಿತರಿದ್ದರು.






### ಶಾಲಾ ಮುಖ್ಯೋಪಾಧ್ಯಾಯರಾದ ಜೆ.ಎನ್ ಪ್ರಕಾಶ್ ಅನಿಸಿಕೆ

# ಹೆಣ್ಣು ಇರುವ ಮನೆ ಸ್ವರ್ಗಕ್ಕೆ ಸಮಾನ

**ವಿಜಯಪುರ:** ಪಟ್ಟಣದ ಪ್ರಗತಿ ಆಂಗ್ಲ ಶಾಲೆಯಲ್ಲಿ ಶನಿವಾರದಂದು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲಾಯಿತು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯರಾದ ಜೆ.ಎನ್ ಪ್ರಕಾಶ್ ಅವರು ವಹಿಸಿದ್ದು, ಕಾರ್ಯಕ್ರಮದ ಕುರಿತು ಮಾತನಾಡಿ, ಹೆಣ್ಣು ಈ ಸಮಾಜದ ಕಣ್ಣು, ಬದುಕಿನ ಎಲ್ಲಾ ಸವಾಲುಗಳನ್ನು ಎದುರಿಸಿ ನಿಲ್ಲುವ ಗಟ್ಟಿಗಿತ್ತಿ ಆಕೆ. ಮಹಿಳೆ ಎಲ್ಲ ರಂಗಗಳಲ್ಲೂ ಇವತ್ತು ತನ್ನದೇ ಆದಂತಹ ಛಾಪನ್ನು ಮೂಡಿಸುತ್ತಿದ್ದಾಳೆ. ಉದಾಹರಣೆಗೆ ಪ್ರಾಥಮಿಕ ಶಾಲೆಗಳಲ್ಲಿ ಶೇಕಡ 100% ಶಿಕ್ಷಕರಲ್ಲಿ, 75% ಮಹಿಳಾ ಶಿಕ್ಷಕರು ಕೆಲಸವನ್ನು ನಿರ್ವಹಿಸುತ್ತಿದ್ದಾರೆ. ಹೆಣ್ಣಿಲ್ಲದೆ ಜೀವವಿಲ್ಲ, ಹೆಣ್ಣಿಲ್ಲದೆ ಜೀವನವಿಲ್ಲ, ಹೆಣ್ಣಿಂದಲೇ ಬಾಳು ಬಂಗಾರ. ಹಾಗಾಗಿ ಎಲ್ಲಾ ವಿದ್ಯಾರ್ಥಿಗಳು ತಮ್ಮ ಮನೆಯಲ್ಲಿ ಇರತಕ್ಕಂತ ಎಲ್ಲಾ ಹೆಣ್ಣು ಮಕ್ಕಳಿಗೂ ಗೌರವವನ್ನು ನೀಡಬೇಕು ಎಂಬುದನ್ನು ವಿದ್ಯಾರ್ಥಿಗಳ ಮನಮುಟ್ಟುವಂತೆ ತಿಳಿಸಿಕೊಟ್ಟರು.

ಹಿರಿಯ ಶಿಕ್ಷಕ ಶಾಂತ ಮೂರ್ತಿರವರು ಮಾತನಾಡಿ, ಹೆಣ್ಣು ಸೃಷ್ಟಿಯ ಅದ್ಭುತ ರೂಪ, ಭಾವನೆಗಳ ಒಡತಿ, ಸಾಧನೆಯ ಮೂರ್ತಿ ಹಾಗಾಗಿ ಎಲ್ಲಾ ಮಹಿಳೆಯರಿಗೂ ನಾವೆಲ್ಲರೂ ಸೇರಿ ಗೌರವವನ್ನು ಸೂಚಿಸೋಣ ಎಂಬುದನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ಸಹಶಿಕ್ಷಕ ರಿಯಾಜ್ ಅಹಮದ್ ರವರು ಮಾತನಾಡಿ, ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಮೊಟ್ಟ ಮೊದಲ ಬಾರಿಗೆ ವಿಶ್ವಸಂಸ್ಥೆಯು 1975 ರಲ್ಲಿ ಮಾರ್ಚ್ 8 ಅನ್ನು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಎಂದು ಅಧಿಕೃತವಾಗಿ ಘೋಷಣೆ ಮಾಡಲಾಯಿತು ಮೊದಲ ಬಾರಿಗೆ 1911 ರಲ್ಲಿ ಜರ್ಮನ್ ಕಾರ್ಯಕರ್ತೆ ಕ್ಲಾರ ಜಟ್ಕಿನ್ ರವರು ಈ ಕಲ್ಪನೆಯನ್ನು ಜಾರಿಗೆ ತಂದರು. ಹಾಗೆ ಈ ಬಾರಿ 2025. ರ ಧ್ಯೇಯ ವಾಕ್ಯ ಕ್ರಿಯೆಯನ್ನು ವೇಗಗೊಳಿಸಿ ಲಿಂಗ ಸಮಾನತೆಯಲ್ಲಿ ತ್ವರಿತ ಪ್ರಗತಿಗೆ ಕರೆ ನೀಡುತ್ತದೆ.ಮಹಿಳೆಯರಿಗೆ ಸಮಾನ ಅವಕಾಶಗಳ ವಾತಾವರಣವನ್ನು ಬೆಳೆಸಲು ಸಹಕರಿಸುತ್ತದೆ ಎಂಬುದನ್ನು ತಿಳಿಸಿಕೊಟ್ಟರು.

ಸಹ ಶಿಕ್ಷಕ ಆನಂದ್ ಮಾತನಾಡಿ, ಹೆಣ್ಣು ಈ ಸಮಾಜದ ಕಣ್ಣು ಮತ್ತು ಸಂಸಾರದ ಕಣ್ಣು ಎಂಬುದನ್ನು ತಿಳಿಸಿದರು.ಹೆಣ್ಣಾಗಿ ಹುಟ್ಟಿದಂತಹ ಈಕೆ ಈ ಸಮಾಜದಲ್ಲಿ ಒಬ್ಬ ಮಗಳಾಗಿ ,ಸಹೋದರಿಯಾಗಿ ,ಗೆಳತಿಯಾಗಿ, ಹೆಂಡತಿಯಾಗಿ, ಮತ್ತು ತಾಯಿಯಾಗಿ, ತನ್ನದೇ ಆದಂತಹ ಕಾರ್ಯಗಳನ್ನು ನಿರ್ವಹಿಸುತ್ತಾಳೆ ಎಂದು ತಿಳಿಸಿದರು..

ಈ ಕಾರ್ಯಕ್ರಮದಲ್ಲಿ ಪ್ರಗತಿ ಆಂಗ್ಲ ಶಾಲೆಯಲ್ಲಿ ಸರಿಸುಮಾರು 15 ವರ್ಷಕ್ಕಿಂತ ಮೇಲ್ಪಟ್ಟು ಸೇವೆಯನ್ನು ಸಲ್ಲಿಸಿದ ಮಹಿಳಾ ಶಿಕ್ಷಕಿ ದೀಪ, ಮತ್ತು ಸಹಾಯಕಿ ಕೆಲಸವನ್ನು ನಿರ್ವಹಿಸಿದ ಹಸೀನಾ ರವರಿಗೆ ಪ್ರಗತಿ ಆಂಗ್ಲ ಶಾಲೆಯ ಎಲ್ಲಾ ಶಿಕ್ಷಕರ ಕಡೆಯಿಂದ ಸನ್ಮಾನಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಪ್ರಗತಿ ಶಾಲೆಯ ಎಲ್ಲಾ ಶಿಕ್ಷಕ ವೃಂದದವರು, ಶಿಕ್ಷಕೇತರ ಸಿಬ್ಬಂದಿ ವರ್ಗ ಹಾಗೂ ಎಲ್ಲಾ ಮಹಿಳೆಯರು ಮತ್ತು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಅಭಿವೃದ್ಧಿಗೆ ಪೂರಕವಾದ ಅಯವ್ಯಯ ಡಾ.ಎಂ.ಆರ್.ಹುಲಿನಾಯ್ಕರ್

**ತುಮಕೂರು:** 2025–26 ನೇ ಸಾಲಿನ ಕರ್ನಾಟಕ ರಾಜ್ಯದ ಆಯವ್ಯಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ್ದಾರೆ. 16ನೆಯ ಸಲ ರಾಜ್ಯ ಬಜೆಟ್ ನ್ನು ಮಂಡಿಸುವ ಅವಕಾಶ ಅವರಿಗೆ ದೊರಕಿರುವುದು ಸಂತೋಷದ ವಿಚಾರ. ಇದಕ್ಕಾಗಿ ಅವರನ್ನು ಹಾರ್ದಿಕವಾಗಿ ಅಭಿನಂದಿಸುತ್ತೇನೆ. ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ, ಮೂಲಭೂತ ಸೌಕರ್ಯದ ಹೆಚ್ಚಳ, ನಗರಾಭಿವೃದ್ಧಿ ವಲಯಕ್ಕೆ ಸಂಪನ್ಮೂಲ ಹೂಡಿಕೆಯ ಕ್ಷೇತ್ರಕ್ಕೆ ಕೊಟ್ಟ ಬೆಂಬಲದಿಂದಾಗಿ ಉದ್ಯೋಗ ಸೃಷ್ಟಿ- ಇವು ಆಯವ್ಯಯದ ಮುಖ್ಯಾಂಶಗಳು.

ಆರೋಗ್ಯ ಕ್ಷೇತ್ರದಲ್ಲಿ ಅನೇಕ ವಿನೂತನ ಕಾರ್ಯಕ್ರಮಗಳನ್ನು ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. 3 ಕೋಟಿ ವೆಚ್ಚದಲ್ಲಿ ಗೃಹಯೋಜನೆಯ ವಿಸ್ತರಣೆ ಸ್ವಾಗತಾರ್ಹವಾಗಿದೆ. ಮಹಿಳೆಯರ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು 16 ವರ್ಷದ ಹೆಣ್ಣು ಮಕ್ಕಳಿಗೆ ಹೆಚ್.ಪಿ.ವಿ (ಊಕಗಿ) ಲಸಿಕೆ ನೀಡುವ ಸಂಕಲ್ಪ ಉತ್ತಮವಾಗಿದೆ. ಸುಟ್ಟ ಗಾಯಗಳ ತಡೆಗಟ್ಟುವಿಕೆಗೆ ಮತ್ತು ಸಂತಸ್ತರ ಚಿಕಿತ್ಸೆಗೆ ನೀತಿಯೊಂದನ್ನು ತರುತ್ತಿರುವುದು ಉತ್ತಮವಾದ ಕೆಲಸ. ಅದೇ ರೀತಿ ಅಂಬ್ಯೂಲೆನ್ಸ್ ಸೇವೆಯಲ್ಲಿ ದಕ್ಷತೆ ತೋರಿಸಲು ಮನಸ್ಸು ಮಾಡಿರುವುದು ಸಾಮಾನ್ಯ ಜನರಿಗೆ ಅನುಕೂಲವಾಗಿದೆ.

ವೈದ್ಯಕೀಯ ಶಿಕ್ಷಣ ಸಂಸ್ಥೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸುವುದು ಉತ್ತಮ ಬೆಳವಣಿಗೆ. ಅದೇ ರೀತಿ ನಿಮ್ಹಾನ್ಸ್ ಮಾದರಿಯಲ್ಲಿ ಜಿಲ್ಲಾ ಕೇಂದ್ರಗಳಲ್ಲೂ ಕೂಡ ಆಸ್ಪತ್ರೆ ತೆರೆಯುತ್ತಿರುವುದು ಅನೇಕರಿಗೆ ಅನುಕೂಲವಾಗಿರುತ್ತದೆ. ತುಮಕೂರು ಜಿಲ್ಲೆಗೆ ಜಿಟಿಟಿಸಿ(ಉಖಿಖಿಅ) ಸ್ಥಾಪನೆ ಮಾಡಲು ತೀರ್ಮಾನಿಸಿರುವುದು ಒಳ್ಳೆಯ ವಿಚಾರ



ವಸಂತ ನರಸಾಪುರ ಕೈಗಾರಿಕಾ ಪ್ರದೇಶದಲ್ಲಿ ಮಹಿಳಾ ವಸತಿ ನಿಲಯ ಸ್ಥಾಪನೆ ಮಾಡಲು ತೀರ್ಮಾನ ಮಾಡಿರುವುದು ಉತ್ತಮವಾದ ನಿರ್ಧಾರವಾಗಿದೆ. ಜಪಾನ್ ಸಹಕಾರದೊಡನೆ ಕೈಗಾರಿಕೋದ್ಯಮದ ಪಾರ್ಕ್ ಸಹ ಜಿಲ್ಲೆಗೆ ದೊರೆಯುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಯವ್ಯಯವು ರಾಜ್ಯದ ಎಲ್ಲಾ ಜಿಲ್ಲೆಗೂ ಒಂದಲ್ಲ ಒಂದು ಕೊಡುಗೆಯನ್ನು ಕೊಟ್ಟಿದೆ. ಆಯವ್ಯಯವು ಉತ್ತಮಾಂಶಗಳನ್ನು ಒಳಗೊಂಡಿದ್ದರೂ ಅದರ ಅನುಷ್ಠಾನ ದೊಡ್ಡ ಸವಾಲಾಗಿದೆ. ಮುಖ್ಯಮಂತ್ರಿಗಳು ತಾವು ಪ್ರಸ್ತಾಪಿಸಿರುವ ಎಲ್ಲಾ ಕ್ಷೇತ್ರಗಳಿಗೂ ಸೂಕ್ತವಾದ ಹಣಕಾಸು ಸೌಲಭ್ಯವನ್ನು ಒದಗಿಸಿ ರಾಜ್ಯದ ಸರ್ವಾಂಗೀಣ ಪ್ರಗತಿಗೆ ಕಾರಣರಾಗಲೆಂದು ಆಶೀಸುತ್ತೇನೆ. 16ನೇ ಆಯವ್ಯಯ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತೊಮ್ಮೆ ಅಭಿನಂದನೆಗಳು.

# ಸಚಿವ ಕೆ.ಎಚ್. ಮುನಿಯಪ್ಪ ಅವರಿಂದ ಕ್ಷೇತ್ರದ ಆಮೂಲಾಗ್ರ ಅಭಿವೃದ್ಧಿ: ಎಂ ಸತೀಶ್ ಕುಮಾರ್

**ವಿಜಯಪುರ:** ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಸಚಿವರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಸ್ತುವಾರಿ ಸಚಿವರು ಆದ ಕೆಎಚ್ ಮುನಿಯಪ್ಪ ರವರು ದೇವನಹಳ್ಳಿ ಕ್ಷೇತ್ರದಿಂದ ಆಯ್ಕೆಯಾದ ನಂತರ ಕ್ಷೇತ್ರದಲ್ಲಿ ಮೊದಲ ಬಾರಿ ಸಚಿವರು ಕಾರ್ಯನಿರ್ವಹಿಸಿದಂತಾಗಿದ್ದು, ಆ ಮೂಲಕ ಕ್ಷೇತ್ರದ ಆಮೂಲಾಗ್ರ, ಅಭಿವೃದ್ಧಿ ಸಾಧ್ಯವಾಗಿದೆ ಎಂದು ಪುರಸಭಾ ಸದಸ್ಯರು, ಮಾಜಿ ಅಧ್ಯಕ್ಷರು ಆಗಿದ್ದ ಎಂ ಸತೀಶ್ ಕುಮಾರ್ ತಿಳಿಸಿದರು.

ಕೆಎಚ್ ಮುನಿಯಪ್ಪ ರವರ 77ನೇ ಹುಟ್ಟುಹಬ್ಬದ ಸಲುವಾಗಿ ವಿಜಯಪುರ ಪಟ್ಟಣದ ಕಾಂಗ್ರೆಸ್ ಮುಖಂಡರುಗಳೊಂದಿಗೆ ತೆರಳಿ ಸಚಿವರನ್ನು ಅಭಿನಂದಿಸಿ ಮಾತನಾಡಿದರು.

ಕ್ಷೇತ್ರಕ್ಕೆ ಈ ಬಾರಿಯ ಬಜೆಟ್ ನಲ್ಲಿ ಮೆಟ್ರೋ ಯೋಜನೆ ವಿಸ್ತರಣೆ, ಕಾವೇರಿ ಕುಡಿಯುವ ನೀರು ಪೂರೈಕೆಗಾಗಿ ಯೋಜನೆ, ಸಿಗ್ನೇಚರ್ ಪಾರ್ಕ್ ಯೋಜನೆ, ತಾಲೂಕಿನಲ್ಲೆಡೆ ಚತುಷ್ಪಥ ರಸ್ತೆಗಳ ನಿರ್ಮಾಣ, ಮುಂತಾಗಿ ಕ್ಷೇತ್ರ ಅಭಿವೃದ್ಧಿ ಕಾರ್ಯಗಳು ನಡೆಯುವಂತಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭಾ ಮಾಜಿ ಸದಸ್ಯರುಗಳಾದ ಸಂಪತ್ ಕುಮಾರ್, ಮುನಿ ಚಿನ್ನಪ್ಪ, ಆರ್ ಮುನಿರಾಜು, ಹರೀಶ್, ಮುಖಂಡರುಗಳಾದ ಆರ್ ಎಂ ಸಿಟಿ ಮಂಜುನಾಥ್, ಅಣ್ಣಮ್ಮ ತಾಯಿ ಸುರೇಶ್, ನಂಜಣ್ಣ, ಸೈಫ್ ಉಲ್ಲಾ, ಸಂಪತ್ ಕುಮಾರ್, ರವೀಶ್, ಕೆಎಂ ಮಧು, ಶಿವಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.



# ಅಂತರ್ ರಾಷ್ಟ್ರೀಯ ಮಹಿಳಾ ದಿನಾಚರಣೆ

**ಆನೇಕಲ್:** ಸರ್ಜಾಪುರ ದ ಡಾ. ಆರ್.ಅಂಬೇಡ್ಕರ್ ಆಟದ ಮೈದಾನದಲ್ಲಿ ಮಹಿಳೆಯರ ಸೋಲ್ ಸ್ಪಿರಿಟ್ ತಂಡದ ವತಿಯಿಂದ ಅಂತರ್ ರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಆಚರಿಸಲಾಯಿತು. ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಡಾ. ಬಿ.ಆರ್ ಅಂಬೇಡ್ಕರ್ ರವರ ಕಂಚಿನ ಪತಳಿಗೆ ಪುಷ್ಪ ನಮನ ಸಲ್ಲಿಸಿ ನಂತರ ವೇದಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದಂತಹ ಸಾಧಕೀಯರಿಗೆ ಮಹಿಳಾ ರತ್ನ ಆವಾರ್ಡ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು ಮತ್ತು ವಿಶೇಷವಾಗಿ ಮಹಿಳೆಯರಿಗೆ ಹಲವು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಮಹಿಳೆಯರಿಂದ ಕೋಲಾಟ ಪ್ರದರ್ಶನ ಮತ್ತು ಮಕ್ಕಳಿಂದ ಭರತನಾಟ್ಯ ನೃತ್ಯ ಪ್ರದರ್ಶನವು ನಡೆಯಿತು. ಕಾರ್ಯಕ್ರಮದಲ್ಲಿ ಸರ್ಜಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಮತಾ ರಮೇಶ್, ಮಹಿಳಾ ಮುಖಂಡರಾದ ಮಮತಾ ಎಸ್.ವೈ ಶಂಭಯ್ಯ, ಶೈಲಾ ಶ್ರೀನಿವಾಸ್, ವೈದ್ಯರಾದ ಡಾ.ರೂಪ, ಯೋಗ ಗುರುಗಳಾದ ಸ್ವಾತಿ ಶಕ್ತಿ ರೂಪ, ನಿವೃತ್ತ ಶಿಕ್ಷಕಿ ಮುನಿರತ್ನಮ್ಮ, ಸಭಿಯಾ, ಪೂಜಾ ಚಂದ್ರ, ನಸೀಬಾ, ಚಂದ್ರಕಲಾ, ಡಾ.ಎನ್ ಕಲಾವತಿ ಮೂರ್ತಿಕುಮಾರ್, ಎ.ಸತೀಶ್ ಕುಮಾರ್, ಮಂಜೇಗೌಡ, ಹಾಗೂ ಸರ್ಜಾಪುರ ಅಭಿವೃದ್ದೀ ಸಂಜಿವಿನಿ ಒಕ್ಕೂಟದ ಪಧಾಧಿಕಾರಿರಿಗಳು, ಮೃತ್ಯುಂಜಯ ಫೌಂಡೇಷನ್, ನವ ಎಕ್ಸಪರ್ಷನ್ ಸಂಸ್ಥೆಯ ಮಕ್ಕಳು ಸೇರಿದಂತೆ ಮಹಿಳೆಯರು ಹಾಜರಿದ್ದರು.

# ಡಿಶ್ ಕೇಬಲ್ ನೆಟ್ವರ್ಕ್ ಸಂಸ್ಥೆಗಳಿಗೆ ಮುನ್ನೆಚ್ಚರಿಕೆ ಕ್ರಮ

**ಮೈಸೂರು:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ವತಿಯಿಂದ ನ.ರಾ ಮೊಹಲ್ಲಾದ ಕಾರ್ಯ ಮತ್ತು ಪಾಲನಾ ವಿಭಾಗದ ವ್ಯಾಪ್ತಿಯ ಕೇಂದ್ರಗಳಾದ ಜ್ಯೋತಿನಗರ, ಚಾಮುಂಡಿಪುರಂ ಹಾಗೂ ವರುಣ ಉಪವಿಭಾಗಗಳಲ್ಲಿನ ಹಲವಾರು ನಿಗಮದ ವಿದ್ಯುತ್ ಕಂಬಗಳನ್ನು ಬಳಸಿ ಅವುಗಳ ಮೇಲೆ ಡಿಶ್ ಕೇಬಲ್ ಹಾಗೂ ನೆಟ್ವರ್ಕ್ ಕೇಬಲ್‌ಗಳನ್ನು ಅಧಿಕೃತವಾಗಿ/ಅನಧಿಕೃತವಾಗಿ ಹಾಗೂ ಸರಿಯಾದ ಕ್ರಮ ಅನುಸರಿಸದೇ ಎಳೆದಿರುವುದು ಚಾ.ವಿ.ಸ.ನಿ.ನಿ ಯ ನಿಯಮಗಳಿಗೆ ವಿರುದ್ಧವಾಗಿದೆ.ಡಿಶ್ ಕೇಬಲ್ ಮತ್ತಿತರೆ ಕೇಬಲ್‌ಗಳನ್ನು ಸರಿಯಾದ ರೀತಿಯಲ್ಲಿ ಎಳೆಯದೇ ಇರುವುದರಿಂದ ವಿದ್ಯುತ್ ಅಪಘಾತಗಳು ಘಟನೆಗಳು ಸಂಭವವಿರುತ್ತದೆ ಹಾಗೂ ಸಾರ್ವಜನಿಕ ಆಸ್ತಿ–ಪಾಸ್ತಿಗಳಿಗೆ ಹಾನಿಯುಂಟಾಗಬಹುದಾಗಿರುತ್ತದೆ. ಇಂತಹ ಘಟನೆಗಳು ಸಂಭವಿಸಿದಲ್ಲಿ ಚಾ.ವಿ.ಸ.ನಿ.ನಿ ಯು ಜವಬ್ದಾರಿಯಾಗಿರುವುದಿಲ್ಲ ಬದಲಾಗಿ ಕೇಬಲ್ ನೆಟವರ್ಕ್ ಏಜೆನ್ಸಿಗಳೇ ನೇರವಾಗಿ ಜವಬ್ದಾರರಾಗಿರುತ್ತಾರೆ.ಈ ಬಗ್ಗೆ ಹಿಂದೆಯೂ ಪತ್ರಿಕಾ ಪ್ರಕಟಣೆ ನೀಡಿ ಸೂಚಿಸಿದ್ದರೂ ಕೂಡ ಹಲವರು ಡಿಶ್ ಕೇಬಲ್ ನೆಟ್ವರ್ಕ್ ಸಂಸ್ಥೆಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ, ಆದ್ದರಿಂದ ಸಂಬಂಧ ಪಟ್ಟ ಕೇಬಲ್ ಆಪರೇಟರ್/ ನೆಟ್ವರ್ಕ್ ಸಂಸ್ಥೆಗಳು ಕೂಡಲೇ ತುರ್ತು ಕ್ರಮವನ್ನು ವಹಿಸಿ ಚಾ.ವಿ.ಸ.ನಿ.ನಿ ವಿದ್ಯುತ್ ಕಂಬಗಳನ್ನು ಬಳಸಿ ಎಳೆಯಲಾದ ಕೇಬಲ್ಗಳನ್ನು ಪರಿವೀಕ್ಷಣೆ ನಡೆಸಿ ತಪಶೀಲು ಪಟ್ಟಿ ಹಾಗೂ ಪ್ರತಿ ಕಂಬಗಳಲ್ಲಿ ಎಳೆದಿರುವ ತಮ್ಮ ಸಂಸ್ಥೆಯ ಕೇಬಲ್ ಸಂಖ್ಯೆಗಳನ್ನು ಗುರುತಿಸಿ ಚಾವಿಸನಿನಿ ಯಿಂದ ನೀಡಲಾಗಿರುವ ಮಂಜೂರಾತಿ ಆದೇಶದಂತೆ ನಿಯಮಾನುಸಾರ ಕ್ರಮವಹಿಸಿ ತಮ್ಮ ನೆಟ್ವರ್ಕ್ ಕೇಬಲ್‌ಗಳನ್ನು ಮುಂದಿನ 7 ದಿನಗಳೊಳಗಾಗಿ ಸರಿಪಡಿಸಿಕೊಳ್ಳುವುದು ಹಾಗೂ ಅನಧಿಕೃತವಾಗಿ ಕೇಬಲ್ ಗಳನ್ನು ಎಳೆದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಉಪವಿಭಾಗಗಳನ್ನು ಸಂಪರ್ಕಿಸಿ ನಿಗಮದ ನಿಯಮಾನುಸಾರ ಮಂಜೂರಾತಿ ಪಡೆದು ಹಣವನ್ನು ಪಾವತಿಸುವಂತೆ ಸೂಚಿಸಲಾಗಿದೆ. ತಪ್ಪಿದಲ್ಲಿ ಚಾ.ವಿ.ಸ.ನಿ.ನಿಯ ನ.ರಾ ಮೊಹಲ್ಲಾ ವಿಭಾಗದಿಂದಲೇ ಪುನಃ ಯಾವುದೇ ಮುನ್ಸೂಚನೆ ನೀಡದೇ ಅಂತಹ ಕೇಬಲ್‌ಗಳನ್ನು ಮತ್ತು ಅನಧಿಕೃತ ಕೇಬಲ್ ನೆಟ್ವರ್ಕ್‌ಗಳನ್ನು ತೆರವುಗೊಳಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಹಾಗೂ ಇದರಿಂದ ಉಂಟಾಗುವ ಯಾವುದೇ ತೊಂದರೆಗಳಿಗೆ ಚಾ.ವಿ.ಸ.ನಿ.ನಿ ಯು ಜವದ್ದಾರಿಯಾಗಿರುವುದಿಲ್ಲ ಎಂದು ಚಾ.ವಿ.ಸ.ನಿ.ನಿ ಯ ನ.ರಾ ಮೊಹಲ್ಲಾದ ಕಾರ್ಯ ಮತ್ತು ಪಾಲನೆಯ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ತಿಳಿಸಿದ್ದಾರೆ.

# ಶ್ರೀಲಂಕಾ ರಾಮಾಯಣ ಯಾತ್ರಾ, ದೈವಿಕ ನೇಪಾಳ ಪ್ರವಾಸ

**ಮೈಸೂರು:** ಭಾರತ ಸರ್ಕಾರದ ರೈಲ್ವೆ ಸಚಿವಾಲಯದ ಅಡಿಯಲ್ಲಿ ಬರುವ ಕೇಂದ್ರ, ಸಾರ್ವಜನಿಕ ಕ್ಷೇತ್ರದ ಒಂದು ಉದ್ಯಮವಾದ ಭಾರತೀಯ ರೈಲ್ವೆ ಕ್ಯಾಟರಿಂಗ್ ಮತ್ತು ಟೂರಿಸಂ ಕಾರ್ಪೊರೇಶನ್ ಲಿಮಿಟೆಡ್(ಐಆರ್ ಸಿಟಿಸಿ) ಯು ಕರ್ನಾಟಕದ ಪ್ರವಾಸ ಪ್ರಿಯರಿಗಾಗಿ 2025 ಮಾರ್ಚ್ ತಿಂಗಳಲ್ಲಿ ಬೆಂಗಳೂರಿನಿಂದ ಶ್ರೀಲಂಕಾ ಮತ್ತು ನೇಪಾಳಕ್ಕೆ ಅಂತಾರಾಷ್ಟ್ರೀಯ ಪ್ರವಾಸವನ್ನು ಆಯೋಜಿಸುತ್ತಿದೆ. ಮಾರ್ಚ್ 25 ರಂದು ಶ್ರೀಲಂಕಾ ರಾಮಾಯಣ ಯಾತ್ರೆ:– ಈ ಪ್ರವಾಸವು ಶ್ರೇಷ್ಠ ಮಹಾಕಾವ್ಯ 'ರಾಮಾಯಣದೊಂದಿಗೆ ನಿಕಟ ಸಂಪರ್ಕ ಹೊಂದಿರುವ ಪವಿತ್ರ ಸ್ಥಳಗಳನ್ನು ಅನ್ವೇಷಿಸಲು ಅನನ್ಯ ಅವಕಾಶವನ್ನು ನೀಡುತ್ತಿರುವುದರಿಂದ 7 ದಿನಗಳ ಪ್ರವಾಸದಲ್ಲಿ ಕೊಲಂಬೊ, ದಂಬುಲ್ಲಾ, ಟ್ರಿಂಕೋಮಲಿ, ಕ್ಯಾಂಡಿ ಮತ್ತು ಮವಾರಾ ಎಲಿಯಾಲ ಜನಪ್ರಿಯ ತಾಣಗಳನ್ನು ಒಳಗೊಂಡಿರುವುದರಿಂದ ಇ ಪ್ಯಾಕೇಜ್‌ನ ಬೆಲೆಯು ಪ್ರತಿ ವ್ಯಕ್ತಿಗೆ ರೂ.64,500/– ರಿಂದ ಪ್ರಾರಂಭವಾಗುತ್ತದೆ. ಮಾರ್ಚ್ 27 ರಂದು ಮುಕ್ತಿನಾಥ ಜೊತೆಗೆ ದೈವಿಕ ನೇಪಾಳ ಪ್ರವಾಸ:– ದೈವಿಕ ನೇಪಾಳ ಪ್ರವಾಸವು ಕಠ್ಮಂಡು ಮತ್ತು ಪೋಖರಾದಲ್ಲಿನ ಪುರಾತನ ದೇವಾಲಯಗಳು, ಸ್ತೂಪಗಳು ಮತ್ತು ಪವಿತ್ರ ಸ್ಥಳಗಳನ್ನು ಒಳಗೊಂಡಂತೆ ನೇಪಾಳದ ಆಧ್ಯಾತ್ಮಿಕ ಪ್ರಯಾಣಿಕರನ್ನು ಕರೆದೊಯ್ಯುವ ಸಂಪೂರ್ಣ ಅನುಭವವನ್ನು ನೀಡುವುದರ ಜೊತೆಗೆ ಪ್ರವಾಸಿಗರು ಮುಕ್ತಿನಾಥಕ್ಕೆ ಭೇಟಿ ನೀಡುವುದರಿಂದ ಇ ಪ್ಯಾಕೇಜ್‌ನ ಬೆಲೆಯು ಪ್ರತಿ ವ್ಯಕ್ತಿಗೆ ರೂ.64,150/– ರಿಂದ ಪ್ರಾರಂಭವಾಗುತ್ತದೆ.

# ಮನಸ್ಸು ಮಾಡಿದರೆ ಏನೂ ಬೇಕಾದರೂ ಸಾಧಿಸಬಹುದು

**ತುಮಕೂರು :** ಜಗತ್ತಿನಲ್ಲಿ ಹೆಣ್ಣುಯೊಬ್ಬಳು ಮನಸ್ಸು ಮಾಡಿದರೆ, ಏನೂ ಬೇಕಾದರೂ ಸಾಧಿಸಬಹುದು. ಮಹಿಳೆ ತನ್ನ ಎಲ್ಲಾ ಜವಾಬ್ದಾರಿಗಳನ್ನು ಕಚ್ಚು–ಕಟ್ಟಯಾಗಿ ನಿರ್ವಹಿಸುತ್ತಾರೆ. ಯಾವ ಸಂದರ್ಭದಿಂದಲೂ ಹಿಂದೆ ಸರಿಯದೇ, ಎಲ್ಲಾ ಜವಾಬ್ದಾರಿಗಳಿಂದಲೂ ನ್ಯಾಯ ಒದಗಿಸುತ್ತಾ ಸಾಧನೆಗೆ ಮುಂದಾಗಿರುವುದು ಹೆಣ್ಣು ಎಂದು ತುಮಕೂರಿನ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತೆ ಟಿ.ಎಸ್.ಸಿದ್ದಗಂಗಾರವರು ತಿಳಿಸಿದರು.

ನಗರದ ವರಾನ ಗ್ಲೋಬಲ್ ಟ್ರಸ್ಟ್‌ನ ಅಂಗಸಂಸ್ಥೆಯಾದ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಕಾಲೇಜಿನಲ್ಲಿ ಮಾ.8 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಮಹಿಳಾ ದಿನಾಚರಣೆಯನ್ನು ''ಸ್ತ್ರೀ ಎಂದರೆ ಅಷ್ಟೇ ಸಾಕೇ'' ಎಂಬ ಕಾರ್ಯಕ್ರಮ ಅಡಿಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿದ್ದ ಆಯುಕ್ತೆ ಟಿ.ಎಸ್.ಸಿದ್ದಗಂಗಾ ರವರು ಮಾತನಾಡುತ್ತಾ ತಮ್ಮನ್ನೇ ಉದಾಹರಣೆಯಾಗಿ ನೀಡುತ್ತಾ, ಇಂದು ಗ್ರಾಮೀಣ ಪ್ರದೇಶದಿಂದ ಕನ್ನಡ ಮಾಧ್ಯಮದಲ್ಲಿ ಓದಿ, ಬರೆದಂತಹ ಹೆಣ್ಣು ಮಗಳು ಸಹ ಪರಿಶ್ರಮ, ಶ್ರದ್ಧೆಯಿಂದ ವಿದ್ಯಾಭ್ಯಾಸ ಮಾಡಿದರೆ ತನ್ನ ಗುರಿ ಸಾಧಿಸಬಹುದು ಎಂದು ವಿವರಿಸಿದರು.

ಕಾರ್ಯಕ್ರಮದ ವಿಶೇಷ ಆಹ್ವಾನಿತರಾಗಿ ಸಾಮಾಜಿಕ ಕಾರ್ಯಕರ್ತೆ ಹಾಗೂ ರೋಟರಿ ಮುಖ್ಯಸ್ಥೆಯಾದ ಆಶಾಪ್ರಸನ್ನಕುಮಾರ್‌ರವರು ಮಾತನಾಡುತ್ತಾ ಹೆಣ್ಣು ಜಗತ್ತಿನಾದ್ಯಂತ ಎಲ್ಲಾ ಕ್ಷೇತ್ರಗಳಿಂದಲೂ ತನ್ನನ್ನು ನಾನು ಗುರುತಿಸಿಕೊಂಡಿದ್ದಾಳೆ. ಧೈರ್ಯ, ಮನೋಸಾಮರ್ಥ್ಯದ ಮೂಲಕ ಜಗತ್ತಿಗೆ ಪರಿಚಯಗೊಳ್ಳಿಸಿಕೊಳ್ಳಬಹುದು. ಸ್ತ್ರೀಯನ್ನು ಮಗಳಾಗಿ, ಸೋದರಿಯಾಗಿ, ಸ್ನೇಹಿತೆಯಾಗಿ,



ಪತ್ನಿಯಾಗಿ, ತಾಯಿಯಾಗಿ, ಮನೆಯ ಬೆಳಗುವ ಸೊಸೆಯಾಗಿ ತನ್ನ ಕರ್ತವ್ಯವನ್ನು ನಿರ್ವಹಿಸುತ್ತಾ ಬಂದಿರುತ್ತಾಳೆ ಎಂದು ಅರ್ಥಪೂರ್ಣವಾಗಿ ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅನನ್ಯ ಸಂಸ್ಥೆಯ ಅಧ್ಯಕ್ಷರಾದ ಸಿ.ಎ.ಎಸ್.ವಿಶ್ವನಾಥ್‌ರವರು ಮಾತನಾಡುತ್ತಾ ಹೆಣ್ಣೊಂದು ತಾಯಿಯಾಗಿ ಸಲುಹಿ ಪ್ರಪಂಚಕ್ಕೆ ಮಕ್ಕಳ ಭವಿಷ್ಯವನ್ನು ಒಳ್ಳೆಯ ರೀತಿಯಲ್ಲಿ ರೂಪಿಸುತ್ತಾಳೆ. ಇತಂಹ ಸ್ಪರ್ಧಾತ್ಮಕ ಯುಗದಲ್ಲಿ ಹೆಣ್ಣು ಮಕ್ಕಳು ಇನ್ನೂ ಹೆಚ್ಚು ಹೆಚ್ಚು ಸಾಧನೆಯನ್ನು ಮಾಡಬೇಕು ಎಂದು ಆಶಿಸಿದರು. ಸಾಮಾಜಿಕ ಕಾರ್ಯಕರ್ತೆಯಾದ ಸುಭಾಷಿಣಿ ರವೀಶ್‌ರವರು ಮಾತನಾಡುತ್ತಾ ಪ್ರೀತಿಯಿಂದ ಸಾಕಿ ಸಲುಹಿದ ತಾಯಿಯನ್ನು ಅಷ್ಟೇ ಪ್ರೀತಿಯಿಂದ ಮಕ್ಕಳು ಕಾಣುವಂತರಾಗಬೇಕು. ಅವಳ ಮಾರ್ಗದರ್ಶನದಲ್ಲಿಯೇ ನಡೆದು ಅವಳ ಬದುಕನ್ನು ಸುಂದರವಾಗಿಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಹಿಳಾ ದಿನಾಚರಣೆಯ ಅಂಗವಾಗಿ ಅನನ್ಯ ಸಂಸ್ಥೆಯ ಉಪನ್ಯಾಸಕರುಗಳನ್ನು ಸನ್ಮಾನಿಸಿ ಮತ್ತು ಗೌರವಿಸಿ ಕಾರ್ಯಕ್ರಮಕ್ಕೆ ಮೆರಗನ್ನು ನೀಡಿದ್ದರು. ಕಾರ್ಯಕ್ರಮದಲ್ಲಿ ಅನನ್ಯ ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಕಾರ್ಯದರ್ಶಿಗಳಾದ ಟಿ.ಎನ್. ಚೆನ್ನಬಸವಪ್ರಸಾದ್, ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್, ಅನನ್ಯ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಆರ್. ರಘು, ಕಾಮರ್ಸ್ ವಿಭಾಗದ ಮುಖ್ಯಸ್ಥೆ ದೇವಕಿಪ್ರಸಾದ್, ಬಿ.ಸಿ.ಎ ವಿಭಾಗದ ಮುಖ್ಯಸ್ಥರಾದ ಇಫ್ತಾನ್ ಅಹಮ್ಮದ್, ಉದ್ಯೋಗ ಅಧಿಕಾರಿಯಾದ ಪ್ರೊ.ಶಮಂತಪ್ರಿಯ ಹಾಗೂ ಸಂಸ್ಥೆಯ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳೆಯರಿಗೆ ಗೌರವ ಸಮರ್ಪಣೆ

**ಚನ್ನಪಟ್ಟಣ:** ಸಮಾಜದ ಮುಖ್ಯವಾಹಿನಿಗೆ ಬರಲು ಪ್ರೋತ್ಸಾಹ ಸಿಕ್ಕರೆ ಮಹಿಳೆಯರು ಯಾವ ಕ್ಷೇತ್ರದಲ್ಲಾದರೂ ಸಾಧನೆ ಮಾಡುವ ಶಕ್ತಳಾಗಿದ್ದಾಳೆ. ಈ ನಿಟ್ಟಿನಲ್ಲೇ ಮಹಿಳೆ ಇಂದು ಸಮಾಜದ ಎಲ್ಲಾ ರಂಗದಲ್ಲೂ ತನ್ನ ಸಾಧನೆಯ ಮೂಲಕ ಸಾಮರ್ಥ್ಯವನ್ನು ತೋರುತ್ತಿದ್ದಾಳೆ ಎಂದು ನಿವೃತ್ತ ಪ್ರಾಂಶುಪಾಲರು ಹಾಗೂ ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷರಾದ ನಿಂಗೇಗೌಡರು(ಎನ್‌ಜಿ) ಬಣ್ಣಿಸಿದರು.

ಕಸ್ತೂರಿ ಕರ್ನಾಟಕ ಜನಪರ ವೇದಿಕೆ ವತಿಯಿಂದ ಆಯೋಜಿಸಲಾಗಿದ್ದ ವಿಶ್ವ ಮಹಿಳಾ ದಿನಾಚರಣೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಪೌರಕಾರ್ಮಿಕರು, ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ಸೇವೆ ಮಾಡುತ್ತಿರುವ ಮಹಿಳೆಯರನ್ನು ಸನ್ಮಾನಿಸಿ ಅವರು ಮಾತನಾಡಿ, ಮಹಿಳೆಯರನ್ನು ಅಡುಗೆ ಮನೆಗೆ ಮಾತ್ರ ಸೀಮಿತ ಮಾಡಿದ್ದ ಕಾಲ ಇಂದು ಮರೆಯಾಗಿದ್ದು ಮಹಿಳೆ ಪುರುಷನಿಗೂ ಮಿಗಿಲಾಗಿ ರಾಜಕೀಯ, ಸಾಂಸ್ಕೃತಿಕ, ಕ್ರೀಡೆ, ಕಲೆ, ವೈಜ್ಞಾನಿಕ ಕ್ಷೇತ್ರ ಸೇರಿದಂತೆ ಆಕಾಶಕ್ಕೂ ಕಾಲಿಟ್ಟಿದ್ದಾಳೆ. ಇಂತಹ ಮಹಿಳೆಯರ ಸಾಧನೆಯನ್ನು ಗುರುತಿಸಿ ಪ್ರೋತ್ಸಾಹ ನೀಡಿದರೆ ಮತ್ತಷ್ಟು ಮಹಿಳೆಯರು ಸಾಧನೆಯ ಹಾದಿಯಲ್ಲಿ ನಡೆಯುತ್ತಾ ಎನ್ನುವ ಕಲ್ಪನೆಯಲ್ಲಿ ರಮೇಶ್‌ಗೌಡರು ತಾಲೂಕಿನಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಿರುವ ಮಹಿಳೆಯರನ್ನು ಅಭಿನಂದಿಸಿ ಗೌರವಿಸುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಕಕಜ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಮಾತನಾಡಿ, ಮಹಿಳೆಯರನ್ನು ಅಡುಗೆ ಮನೆಯ ಜೊತೆಗೆ ಮಕ್ಕಳನ್ನು ಹೆರುವ ಯಂತ್ರವಾಗಿ ಕಾಣುತ್ತಿದ್ದವರು ಇಂದು ಮಹಿಳೆ ಇಲ್ಲದೆ ಜೀವನವೇ ಇಲ್ಲ ಎಂಬ ಪರಮಾರ್ಥವನ್ನು ತಿಳಿದಿದ್ದಾರೆ. ಹೆಣ್ಣುಮಕ್ಕಳು ಹುಟ್ಟಿದರೆ ಶಾಪ ಎನ್ನುತ್ತಿದ್ದವರಿಗೆ ಇಂದು ತಮ್ಮ ಮಕ್ಕಳಿಗೆ ಹೆಣ್ಣುಮಕ್ಕಳು ಸಿಗದಿರುವುದನ್ನು ನೋಡಿ ಹೆಣ್ಣುಮಕ್ಕಳ ಪ್ರಾಮುಖ್ಯತೆ ತಿಳಿಯುತ್ತಿದೆ. ಮಹಿಳೆಗೆ ಪ್ರೋತ್ಸಾಹ ಮತ್ತು ಸಹಕಾರ ಕೊಟ್ಟಾಗ ಮಾತ್ರ ಆಕೆಯಲ್ಲಿನ ಶಕ್ತಿ ಹೊರಬರಲು ಸಾಧ್ಯ. ಈ ನಿಟ್ಟಿನಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡುತ್ತಿರುವ ಮಹಿಳೆಯರನ್ನು ಗುರುತಿಸಿ ಗೌರವಿಸಿದರೆ ಇದು ಮುಂದಿನ ಮಹಿಳಾ ಪೀಳಿಗೆಗೆ ಸ್ಪೂರ್ತಿಯಾಗಿ ಮತ್ತಷ್ಟು ಸಾಧನೆ ಮಾಡಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕವಯತ್ರಿ ಎಂ.ಎಸ್. ಆಶಾಲತ ಮಾತನಾಡಿ, ಕನ್ನಡ ನಾಡು, ನುಡ, ಜಲ ಭಾಷೆಯ ವಿಚಾರದಲ್ಲಿ ಅನ್ಯಾಯ ಆದರೆ ಮೊದಲು ಹೋರಾಟಕ್ಕೆ ಧುಮುಕುವ ರಮೇಶ್‌ಗೌಡರು ಸಮಾಜದಲ್ಲಿ ಮಹಿಳೆಯರ ಸ್ಥಾನವನ್ನು ಗುರುತಿಸಿ ಅವರ ಸಾಧನೆಯನ್ನು ಗೌರವಿಸಲು ಪ್ರತಿ ವರ್ಷ ಮಹಿಳಾ ದಿನಾಚರಣೆ ಮಾಡುತ್ತಾ ಬಂದಿದ್ದು, ಸಮಾಜದ ಎಲ್ಲಾ ಕ್ಷೇತ್ರದಲ್ಲಿ ತನ್ನ ಛಾಪು ಮೂಡಿಸಿರುವ ಮಹಿಳೆಯರನ್ನು ಗೌರವಿಸುವ ಅವರ ಕಾರ್ಯ ಶ್ಲಾಘನೀಯ ಎಂದರು.

ಗೌರವ ಸ್ವೀಕರಿಸಿದ ಆಶಾಕಾರ್ಯಕರ್ತೆ ಸವಿತ ಮಾತನಾಡಿ, ಪುರುಷರು ಒಂದು ಕೆಲಸದ ಮೇಲೆ ಹೋಗಿ ಬರುತ್ತಾರೆ. ಆದರೆ ಮಹಿಳೆ ಸಮಾಜದ ಎಲ್ಲಾ ಕ್ಷೇತ್ರದಲ್ಲಿ ಸಾಧನೆ ಮಾಡುವ ಜೊತೆಗೆ ಕುಟುಂಬವನ್ನು ಕಾಪಾಡುವ ಹೊಣೆ ಹೊತ್ತಿರುತ್ತಾಳೆ, ಆಶಾಕಾರ್ಯಕರ್ತೆಯರಾದ ನಾವು ಮನೆ ಮನೆ ಬಾಗಿಲಿಗೆ ತೆರಳಿ ಸರ್ಕಾರದ ಸೌಲಭ್ಯಗಳನ್ನು ಕಲ್ಪಿಸಲು ಮುಂದಾದ ವೇಳೆ ನಮ್ಮನ್ನು ಗೌರವಿಸುತ್ತಾರೆ. ಆದರೆ ನಮ್ಮ ಸೇವೆಯನ್ನು ಗುರುತಿಸಿ ಗೌರವಿಸುವ ಮಹಿಳಾ ದಿನಾಚರಣೆಯನ್ನು ಆಚರಿಸಿ ಸಮಾಜದ ಮುಂದೆ ನಮಗೂ ಗೌರವ ನೀಡುತ್ತಿರುವ ಕಕಜ ವೇದಿಕೆಯ ಕಾರ್ಯಕ್ಕೆ ನಾವು ಚಿರಋಣಿಯಾಗಿದ್ದೇವೆ ಎಂದರು.

ಆಟೋ ನಾಗಲಿಂಗು, ರಾಮಕೃಷ್ಣಪ್ಪ, ರಾಜು, ಚಿಕ್ಕೇನಳ್ಳಿ ಸಿದ್ದಪ್ಪಾಜಿ, ರಾಜಣ್ಣ, ರಿಯಾಜ್‌ವುದ್ದೀನ್ ಸೇರಿದಂತೆ ವೇದಿಕೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮಹಿಳಾ ದಿನ ಆಚರಣೆ ನಿಮಿತ್ತ ರಾಷ್ಟ್ರೀಯ ಲೋಕ ಅದಾಲತ್



ಕೋಲಾರ: ಜಿಲ್ಲಾ ಹಾಗೂ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಈ ವರ್ಷದ ಮೊದಲ ರಾಷ್ಟ್ರೀಯ ಜನತಾ ನ್ಯಾಯಾಲಯ ಹಮ್ಮಿಕೊಂಡಿದ್ದು, ರಾಜೀ ಮೂಲಕ ಪ್ರಕರಣಗಳ ಇತ್ಯರ್ಥ ಮಾಡಿಕೊಳ್ಳಲು ಸಾರ್ವಜನಿಕರು ಮುಂದಾಗಬೇಕು. ಈ ಅದಾಲತ್ ನ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎ.ಮಂಜುನಾಥ ಕರೆ ನೀಡಿದರು.

ನಗರದ ನ್ಯಾಯಾಲಯ ಆವರಣದಲ್ಲಿ ಶನಿವಾರ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ವಕೀಲರ ಸಂಘ ಸಂಯುಕ್ತ ಆಶ್ರಯದಲ್ಲಿ ನಡೆದ ರಾಷ್ಟ್ರೀಯ ಲೋಕ್ ಅದಾಲತ್ ಹಾಗೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸದರಿ ರಾಷ್ಟ್ರೀಯ ಜನತಾ ನ್ಯಾಯಾಲಯದಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥ ಮಾಡಿಕೊಳ್ಳಲು ಅವಕಾಶವಿರುತ್ತದೆ ಎಂದು ಹೇಳಿದರು. ಮಾನವ ನೆಮ್ಮದಿಗಾಗಿ ಬದುಕಲು ಹಣ ಮಾಡಬೇಕು. ವಿನಾಕಾರಣ ಹಣದಿಂದಲ್ಲೇ ಸಂಬಂಧ ಹಾಗೂ ಮನಸ್ಸು ಹಾಳು ಮಾಡಿಕೊಳ್ಳಬಾರದು. ಸಹಬಾಳ್ವೆಯಿಂದ ಬದುಕುವುದನ್ನು ರೂಢಿಸಿಕೊಳ್ಳಬೇಕು. ಸಮಾನತೆ ಆದಿಯಲ್ಲಿ ನಡೆಯುವ ಮೂಲಕ ಜೀವನ ಸಾರ್ಥಕ ಪಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಮಹಿಳಾ ದಿನಾಚರಣೆ ಮಾಡುವ ದೇಶದಲ್ಲಿ ಆ ದೇಶಕ್ಕೆ ಕೊಡುಗೆ ನೀಡಿದ, ಸಮಾಜಕ್ಕೆ ಮಾದರಿಯಾದ ಮಹಿಳೆಯರ ಸಾಧನೆಯನ್ನು ನೆನೆದು ಗೌರವಿಸಲಾಗುತ್ತದೆ. ಎಷ್ಟೋ ರಾಷ್ಟ್ರಗಳು ತಮ್ಮ ದೇಶಕ್ಕೆ ಕೊಡುಗೆ ನೀಡಿದ ಮಹಿಳೆಯರ ಸಾಧನೆಯನ್ನು ಸಾರುವ ಪಠ್ಯಕ್ರಮವನ್ನು ಅಳವಡಿಸಿವೆ. ಉದಾಹರಣೆಗೆ ಕರ್ನಾಟಕದಲ್ಲಿ ವೀರ ವನಿತೆ ಓಬವ್ವ, ಕಿತ್ತೂರು ರಾಣಿ ಚೆನ್ನಮ್ಮ ವಚನ ಸಾಹಿತ್ಯ ಕ್ಷೇತ್ರಕ್ಕೆ ಅದ್ಭುತ ಕೊಡುಗೆ ನೀಡಿದ ಅಕ್ಕಮಹಾದೇವಿ ಹೀಗೆ ಹಲವರ ಕುರಿತಂತೆ ಪಾಠಗಳಿದ್ದು ಅವರ ಕೊಡುಗೆ ಹಾಗೂ ಸಾಧನೆಯ ಸ್ಮರಣಾರ್ಥವಾಗಿದೆ ಎಂದರು.

ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್.ಜಯಶ್ರೀ ಮಾತನಾಡಿ, ಮಹಿಳೆ ನಾಲ್ಕು ಗೋಡೆಗೆ ಮಾತ್ರ ಸೀಮಿತವಾಗಿರದೆ ಆರ್ಥಿಕವಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ, ಸಾಂಸ್ಕೃತಿಕವಾಗಿ ಮತ್ತು ಇನ್ನಿತರ ಎಲ್ಲಾ ಕ್ಷೇತ್ರಗಳಲ್ಲಿ ತಮ್ಮದೇ ಛಾಪನ್ನು ಮೂಡಿಸಿದ್ದಾರೆ. ಅವರ ಸಾಧನೆಯನ್ನು ಗುರುತಿಸಿ ಗೌರವಿಸಲು ಹಾಗೂ ಇತರರಿಗೆ ಮಾದರಿಯಾಗಲು ಈ ಮಹಿಳಾ ದಿನಾಚರಣೆ ಸಹಕಾರಿಯಾಗಿದೆ ಎಂದು ಹೇಳಿದರು. ಬೇರೆಯವರ ಮೇಲೆ ಅವಲಂಭಿತವಾಗಿರದೇ ತನ್ನ ಆತ್ಮಗೌರವವನ್ನು ಕಾಪಾಡಿಕೊಳ್ಳಲು ಪ್ರತಿಯೊಬ್ಬ ಮಹಿಳೆ ಇಂದು ಸಾಹಸವನ್ನು ಪಡುತ್ತಿದ್ದಾಳೆ. ಹೀಗಾಗಿ ಇಂತಹ ಮಹಿಳೆಯರಿಗೆ ಬೆಂಬಲವಾಗಿ ನಿಲ್ಲುವ ಸಮಾಜ ನಮ್ಮದಾಗಬೇಕು. ಹೆಣ್ಣಾಗಿ ಹುಟ್ಟಿರುವುದೇ ಒಂದು ಮಹಾಸೌಭಾಗ್ಯ ಮತ್ತು ಮಹಾಶಕ್ತಿ. ಹೀಗಾಗಿ ಅದನ್ನು ನಾವು ಸಂತಸದಿಂದ ನಾವು ಸಂಭ್ರಮಿಸೋಣ ಎಂದು ನುಡಿದರು.

ಈ ಸಂದರ್ಭದಲ್ಲಿ ನ್ಯಾಯಾಧೀಶರಾದ ನಿರ್ಮಲಾದೇವಿ, ಪಿ.ಕೆ.ದಿವ್ಯ, ಕೆ.ಬಿ.ಪ್ರಸಾದ್, ಸುನೀಲ ಎಸ್ ಹೊಸಮನಿ, ಎಸ್. ಶಕುಂತಲಾ, ಆರ್.ನಟೇಶ್, ರೆಹಾನ ಸುಲ್ತಾನ, ಎಂ.ವಿ.ಲಕ್ಷ್ಮಿ, ಶ್ರೀನಿವಾಸ ಪಾಟೀಲ್, ಚೇತನ ಆರಿಕಟ್ಟಿ, ಪಿ.ಮದನ್, ಜಿ.ಹರ್ಷ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಮುನೇಗೌಡ, ಉಪಾಧ್ಯಕ್ಷ ರವೀಂದ್ರ, ಕಾರ್ಯದರ್ಶಿ ಎನ್.ಬೈರಾರೆಡ್ಡಿ, ವಕೀಲರು, ನ್ಯಾಯಾಲಯ ಸಿಬ್ಬಂದಿ, ಎಸ್.ಬಿ.ಐ ಮತ್ತು ಕೆನರಾ ಬ್ಯಾಂಕ್ ವ್ಯವಸ್ಥಾಪಕರು, ಕಾನೂನು ವಿದ್ಯಾರ್ಥಿಗಳು, ಕಕ್ಷಿದಾರರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ತಾಲ್ಲೂಕು ರಾಜಕಾರಣದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕು ರಾಜಕಾರಣದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟದ ಕೆಲವು ನಾಯಕರುಗಳಿಗೆ ದಿಡೀರ್ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಮೇಲೆ ಅಧಿಕ ಪ್ರೀತಿ ಉಂಟಾಗಿರುವುದು ಅಚ್ಚರಿ ತಂದಿದೆ ಎಂದು ಕೆ.ಪಿ.ಸಿ.ಸಿ. ಮಾಹಿತಿ ಹಕ್ಕು ಮಾನವ ಹಕ್ಕು ಹಾಗೂ ಕಾನೂನು ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ. ಎಸ್. ಸಂದೀಪ್ ಚಕ್ರವರ್ತಿ ಆರೋಪಿಸಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರ ನೇತೃತ್ವದಲ್ಲಿ ನಿನ್ನೆ ನಡೆದ ಕಾರ್ಯಕ್ರಮದ ಬಗ್ಗೆ ವಿಶ್ಲೇಷಣೆ ನೀಡಿದವರು ಈ ಹಿಂದೆ ಪರಿಶಿಷ್ಟ ಜಾತಿಗೆ ಸೇರಿದ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಮೂವರು ಮಾಜಿ ಶಾಸಕರು ಮತ್ತು ಒಬ್ಬ ಜಿಲ್ಲಾ ಪಂಚಾಯತ್ ಸದಸ್ಯರ ವಿರುದ್ಧ ಯಾವ ಕಾರಣಕ್ಕಾಗಿ ಎಫ್. ಐ.ಆರ್. ದಾಖಲಾಗಿದ್ದು ಇಧಕ್ಕೆ ಉತ್ತರ ನೀಡಬೇಕು. ಹಾಗೂ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಪ್ರದೀಪ್ ಈಶ್ವರ ರವರು ರಾಜ್ಯದಲ್ಲಿಯ ವಿನೂತನ ಮಾದರಿ ಎಂಬಂತೆ ನಮ್ಮ ಊರಿಗೆ ನಮ್ಮ ಶಾಸಕರು ಕಾರ್ಯಕ್ರಮ ನಡೆಸುತ್ತಿರುವುದು ಕೆಲವರಿಗೆ ರಾಜಕೀಯವಾಗಿ ಉರಿ ಎಬ್ಬಿಸಿದೆ ನಮ್ಮ ಶಾಸಕರ ಜನಪ್ರಿಯತೆಯನ್ನು ಅವರು ಸಹಿಸಿಕೊಳ್ಳುತ್ತಿಲ್ಲ ಎಂದರು.ಇನ್ನು ರಾಜ್ಯದ ಜನತೆಗೆ ಚುನಾವಣಾ ಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯರವರು ನೀಡಿದ ಐದು ಗ್ಯಾರಂಟಿಗಳ ಯೋಜನೆ ಅತ್ಯಂತ ಸಕ್ರಮವಾಗಿ ಜಾರಿಗೆ ತಂದಿದ್ದು ಅವರು ಸಿದ್ದರಾಮಯ್ಯ ಹಾಗೂ ಅವರೇ ಅನ್ನ ರಾಮಯ್ಯ ಆಗಿದ್ದಾರೆ . ಕ್ಷೇತ್ರದ ಜನತೆ ಇವೆಲ್ಲವನ್ನು ಗಮನಿಸುತ್ತಿದ್ದಾರೆ ತಕ್ಕ ಸಮಯದಲ್ಲಿ ತಕ್ಕ ಪಾಠ ಕಲಿಸುತ್ತಾರೆ ಎಂದು ಎಂ ಎಸ್ ಸಂದೀಪ್ ಚಕ್ರವರ್ತಿ ತಿಳಿಸಿದ್ದಾ ರೆ

## ನಗರಸಭೆ ನಾಮನಿರ್ದೇನ ಸದಸ್ಯರಾಗಿ ಜಿ.ಅಣ್ಣಮ್ಮ ನೇಮಕ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ನಗರಸಭೆಗೆ ಐದು ಮಂದಿ ಕಾಂಗ್ರೆಸ್ ಮುಖಂಡರು ನಾಮನಿರ್ದೇನ ಸದಸ್ಯರಾಗಿ ನೇಮಕವಾಗಿದ್ದು 17ನೇ ವಾರ್ಡಿನ ಜಿ.ಅಣ್ಣಮ್ಮ ರವರು ಒಬ್ಬರಾಗಿದ್ದಾರೆ,ಇದೇ ವೇಳೆ ತಮ್ಮ ನೇಮಕ ಸಂಭಂದಪಟ್ಟಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಅಣ್ಣಮ್ಮ ಪಕ್ಷಕ್ಕಾಗಿ ದುಡಿಯುವ ಕಾರ್ಯಕರ್ತರಿಗೆ ಅವಕಾಶ ಸಿಗಲಿದೆ ಪಕ್ಷಕ್ಕೆ ಕೆಲಸಮಾಡಿ ಎಂದು ಪ್ರತಿ ಸಾರಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ ಸಿ ಸುಧಾಕರ್ ರವರು ಪ್ರೌತ್ಸಾಹಿಸುತ್ತಿದ್ದರು ಅವರಿಗೆ ಅನಂತ ಧನ್ಯವಾದಗಳು ಜತೆಗೆ ಕ್ಷೇತ್ರದ ಜನರ ಸಮಸ್ಯೆಗಳನ್ನು ಪರಿಹರಿಸಲು ಮನೆ ಬಾಗಿಲಿಗೆ ಹೋಗಿ ಅವರಲ್ಲಿ ಒಬ್ಬರಂತೆ ಬೆರೆತು ಅವರ ಕಷ್ಟಗಳನ್ನು ಸಮಸ್ಯೆಗಳನ್ನು ಆಲಿಸುತ್ತಿರುವ ಜನಪ್ರಿಯ ಶಾಸಕರಾದ ಪ್ರದೀಪ್ ಈಶ್ವರ್ ನನಗೆ ಸ್ಪೂರ್ತಿ ಅವರ ಹಾದಿಯಲ್ಲಿ ಸಾಗುವ ಸಂಕಲ್ಪ ಹೊಂದಿದ್ದೇನೆ,ಇನ್ನು ನನ್ನ ರಾಜಕೀಯ ಗುರುಗಳಾದ ಮಾಜಿ ಶಾಸಕ ಕೆ.ಪಿ.ಬಚ್ಚೇಗೌಡ,ಪ್ರತಿ ಹಂತದಲ್ಲೂ ನನ್ನ ಬೆನ್ನು ತಟ್ಟಿ ಮುಂದೆ ಸಾಗಲು ಸಹಕಾರ ನೀಡಿದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಕೆ ಎಂ ಮುನೇಗೌಡ ಹಾಗೂ ಕೆ ಸಿ ರಾಜಕಾಂತ್ ಜತೆಗೆ ಪಕ್ಷದ ಎಲ್ಲ ಹಿರಿಯರಿಗೆ ಧನ್ಯವಾದಗಳು ತಿಳಿಸುತ್ತೇನೆ ಎಂದರು.ಇನ್ನು ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು ಜಿ.ಅಣ್ಣಮ್ಮ ರವರಿಗೆ ಶುಭಕೋರಿದರು.

## ನೂತನ ಚಾಮರಾಜನಗರ ಜಿಲ್ಲಾಧ್ಯಕ್ಷರ ನೇಮಕ

**ಚಾಮರಾಜನಗರ:** ಸಮಿತಿಯ ನೂತನ ಚಾಮರಾಜನಗರ ಜಿಲ್ಲಾಧ್ಯಕ್ಷರಾಗಿ ಸುಪ್ರೀತ್ ಕುಮಾರ್ ಅವರನ್ನ ನೇಮಕ ಮಾಡಲಾಯಿತು. ಕಾರ್ಯಕ್ರಮ ದಲ್ಲಿ ರಾಜ್ಯ ಗೌರವ ಅಧ್ಯಕ್ಷರು ಗುರುಸ್ವಾಮಪ್ಪ, ರಾಜ್ಯ ಉಪಾಧ್ಯಕ್ಷರು ಕಿಲಗೆರೆ ಶ್ರೀಕಂಠಪ್ಪ, ಹರವೆ ಹೋಬಳಿ ಅಧ್ಯಕ್ಷರು ಕೊಟ್ಟಲವಾಡಿ ಶಾಂತಮಲ್ಲಿಕಾರ್ಜುನ, ತೆರಕಣಾಂಬಿ ಹೋಬಳಿ ಅಧ್ಯಕ್ಷರು ಪ್ರಸನ್ನ, ಸದಸ್ಯರುಗಳಾದ ಉತ್ತರಾಜಮ್ಮ,ಪುಷ್ಪ ,ರಾಜು ಹಾಗೂ ಕೊಡಸೂಗೆ ವಿಶ್ವ, ಲಕ್ಕೂರು ಬಸವರಾಜು, ಹಸಗೂಲಿ ಶಂಕ್ರಪ್ಪ, ತೆರಕಣಾಂಬಿ ಹುಂಡಿ ಶಿವಯ್ಯ, ಬಸವರಾಜಪ್ಪ ಹಾಜರಿದ್ದರು

## ಸಸಿ ನೆಡುವ ಮೂಲಕ ಆಚರಣೆ

**ಚಾಮರಾಜನಗರ:** ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಕರ್ನಾಟಕ ರಾಜ್ಯ ಮೂಲಭೂತ ಹಕ್ಕುಗಳ ರಕ್ಷಣೆ ಹಾಗೂ ಭ್ರಷ್ಟಾಚಾರ ನಿರ್ಮೂಲನಾ ಸಮಿತಿ (ರಿ)ವತಿಯಿಂದ ತಮ್ಮ ಕೇಂದ್ರ ಕಛೇರಿ ಆವರಣದಲ್ಲಿ ಸಸಿ ನೆಡುವ ಮೂಲಕ ಆಚರಣೆ ಮಾಡಲಾಯಿತು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಮಿತಿಯ ರಾಜ್ಯಾಧ್ಯಕ್ಷರಾದ ಲಕ್ಷ್ಮಿ ಮಹೇಶ್,ಮಹಿಳೆಯರು ಸಮಾಜದ ಯಲ್ಲಾ ರಂಗಗಳಲ್ಲಿ ಇಂದು ಉತ್ತಮ ಸಾಧನೆ ಮಾಡಿದ್ದಾರೆ, ದೇಶದ ಉನ್ನತ ಹುದ್ದೆಯಾದ ರಾಷ್ಟ್ರಪತಿ ಹುದ್ದೆಯನ್ನು ಮಹಿಳೆ ಅಲಂಕರಿಸಿರುವುದು ಹೆಮ್ಮೆಯ ವಿಷಯ, ಮಹಿಳೆಯರ ಮೇಲಿನ ದೌರ್ಜನ್ಯ, ಅತ್ಯಾಚಾರ ದಂತಹ ಪ್ರಕಾರಣಗಳನ್ನು ವಿಚಾರಣೆ ನೆಡೆಸಲು ಹೆಚ್ಚಿನ ಸಂಖ್ಯೆಯಲ್ಲಿ ಫಾಸ್ಟ್ ಟ್ರಾಕ್ ಕೋರ್ಟ್ಗಳನ್ನ ಸ್ಥಾಪಿಸಿ ಶೀಘ್ರ ನ್ಯಾಯಧಾನ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಗಮನ ವಹಿಸಬೇಕು ಎಂದು ಹೇಳಿದರು.



# ಬಿಸಿಯೂಟ ಅನುಷ್ಠಾನದ ಕುಂದುಕೊರತೆ ಕುರಿತು ತಾಲೂಕು ಶಿಕ್ಷಕರ ಸಂಘದ ಮನವಿ

**ಕೋಲಾರ:** ಪ್ರಧಾನ ಮಂತ್ರಿ ಪೋಷಣ್ ಅಭಿಯಾನದ (ಮದ್ಯಾಹ್ನ ಬಿಸಿಯೂಟ ಯೋಜನೆ) ಕಾರ್ಯಕ್ರಮ ಅನುಷ್ಠಾನದ ಕುಂದುಕೊರತೆಗಳ ಕುರಿತು ತಾಲ್ಲೂಕು ಶಿಕ್ಷಕರ ಸಂಘದ ವತಿಯಿಂದ ಕೋಲಾರ ಜಿಲ್ಲಾ ಪಂಚಾಯಿತಿ ಮುಖ್ಯ ನಿರ್ವಹಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಹಾಗೂ ಪೂರಕ ಕಾರ್ಯಕ್ರಮವಾದ ಪ್ರಧಾನ ಮಂತ್ರಿ ಪೋಷನ್ ಅಭಿಯಾನ ಮದ್ಯಾಹ್ನ ಬಿಸಿಯೂಟ ಯೋಜನೆ ಅನುಷ್ಟಾನವು ಸಂತೋಷದಾಯಕವಾದ ವಿಷಯ ಮುಂದುವರೆದು ಶಿಕ್ಷಕರು ಮದ್ಯಾಹ್ನ ಬಿಸಿಯೂಟ ಯೋಜನೆಯಡಿ ಪೂರಕ ಪೌಷ್ಟಿಕ ಆಹಾರವಾದ ಮೊಟ್ಟೆ, ಬಾಳೆಹಣ್ಣು, ತರಕಾರಿ ಇತ್ಯಾಧಿಗಳ ಖರೀದಿ ಹಾಗೂ ಇತರೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ತೊಂದರೆಯಾಗುತ್ತಿದೆ ಎಂದು ಆಗ್ರಹಿಸಿದರು.

ಇದರ ಜೊತೆಗೆ ಪ್ರಧಾನ ಮಂತ್ರಿ ಪೋಷಣ್ ಅಭಿಯಾನ ಮದ್ಯಾಹ್ನ ಬಿಸಿಯೂಟ ಯೋಜನೆಯಿಂದ ಸರಬರಾಜು ಆಗುತ್ತಿರುವ ತೊಗರಿಬೇಳೆ, ಕಳಪೆ ಮಟ್ಟದಾಗಿರುತ್ತದೆ. ಅದು ಸಕಾಲಕ್ಕೆ ಸರಬರಾಜು ಬರುತ್ತಿಲ್ಲ. ಗ್ಯಾಸ್‌ನ್ನು ಪ್ರತಿ ಮಾಹೆ ಖರೀದಿಸಲು ಮುಖ್ಯ ಶಿಕ್ಷಕರ ಜೇಬಿಗೆ ಕತ್ತರಿ ಬೀಳುತ್ತಿದೆ. ಈಗ ಸರಬರಾಜು ಆಗಿರುವ ತೊಗರಿಬೇಳೆಯು ತೀರಾ ಕಳಪೆಮಟ್ಟದಾಗಿರುತ್ತದೆ. ಹಾಗೂ ನವೆಂಬರ್ ತಿಂಗಳಿನಲ್ಲಿ ಸರಬರಾಜಾದ ಅಡುಗೆ ಎಣ್ಣೆ ಇದುವರೆಗೂ ಸರಬರಾಜು ಆಗಿರುವುದಿಲ್ಲ. ಮುಖ್ಯ ಶಿಕ್ಷಕರು ಇದರ ಬಾರವನ್ನು ಸಹ ಹೊರುತ್ತಿದ್ದಾರೆ ಎಂದು ಆಗ್ರಹಿಸಿದರು,

ಈ ಎಲ್ಲಾ ತೊಂದರೆಗಳ ನಡೆವೆಯು ಅಕ್ಷರ ದಾಸೋಹ ಕಾರ್ಯಕ್ರಮವನ್ನು ನಡೆಸಿಕೊಂಡು ಹೋಗುತ್ತಿದ್ದೇವೆ. ತಾವು ದಯಮಾಡಿ ಸಮಯಕ್ಕೆ ಸರಿಯಾಗಿ ಗುಣಮಟ್ಟದ ತೊಗರಿಬೇಳೆ, ಅಡುಗೆ ಎಣ್ಣೆ, ಗೋಧಿ ಹಾಗೂ ಅನಿಲ ಸಿಲೆಂಡರ್ ಗಳನ್ನು ನೇರವಾಗಿ ಶಾಲೆಗಳಿಗೆ ಸರಬರಾಜು ಮಾಡಿಸಲು ಸೂಕ್ತ ಮಾರ್ಗದರ್ಶನ ನೀಡಿ ಎಲ್ಲಾ ಶಿಕ್ಷಕರು ತಮ್ಮ ತಮ್ಮ ಶಾಲೆಗಳಲ್ಲಿ ಶೈಕ್ಷಣಿಕ ಪ್ರಗತಿಯಲ್ಲಿ ತೊಡಗಿಸಿಕೊಳ್ಳಲು ಅನುಕೂಲ ಮಾಡಿಕೊಡಬೇಕೆಂದು ಮಾನ್ಯ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳಿಗೆ ತಾಲ್ಲೂಕು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಎಂ ಎನ್ ಶ್ರೀನಿವಾಸ್ ಮೂರ್ತಿ, ಕಾರ್ಯದರ್ಶಿಗಳದ ವಿ ನಾರಾಯಣಸ್ವಾಮಿ (ಬೆಟ್ಟ), ಖಜಾಂಚಿಗಳಾದ ಸುನಂದಮ್ಮ ಆರ್, ಇನ್ನೂ ಮುಂತಾದವರು ಮನವಿ ಸಲ್ಲಿಸಿದರು,



**ತೊಗರಿಬೇಳೆ, ಅಡುಗೆ ಎಣ್ಣೆ, ಗೋಧಿ ಹಾಗೂ ಅನಿಲ ಸಿಲೆಂಡರ್‌ಗಳನ್ನು ನೇರವಾಗಿ ಶಾಲೆಗಳಿಗೆ ಸರಬರಾಜು ಮಾಡಿ**

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಎಂ. ನಾಗರಾಜ್, ರಾಜ್ಯ ಉಪಾಧ್ಯಕ್ಷ ಡಾ.ಇಂಚರಾ ನಾರಾಯಣಸ್ವಾಮಿ, ರಾಜ್ಯ ಸಂಘಟನಾ ಕಾರ್ಯದರ್ಶಿ ಸುರೇಂದ್ರ ಬಿ.ಎಂ, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಎಂ ಚಂದ್ರಪ್ಪ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಶಿವಕುಮಾರ್, ಪ್ರೌಢಶಾಲಾ ಸಹಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ನಾರಾಯಣರೆಡ್ಡಿ, ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸತೀಶ್, ಕೋಲಾರ ತಾಲೂಕು ಸಂಘದ ಕಾರ್ಯಾಧ್ಯಕ್ಷ ಆರ್. ನಾಗರಾಜ್, ಸಂಘಟನಾ ಕಾರ್ಯದರ್ಶಿ ಬಿ.ವಿ ನಂಜುಂಡಪ್ಪ, ಸಹ ಕಾರ್ಯದರ್ಶಿಗಳಾದ ವಿ.ಕೆ ಬಾಬು, ಮಂಜುಳಾ ಎ, ವಿ. ನಟರಾಜ್, ಟಿ.ಪಿ ವೆಂಕಟರವಣಪ್ಪ, ಅಮರನಾಥ, ರಾಜು, ಹೊಗರಿ ವೆಂಕಟೇಶ್, ಆರ್. ಪ್ರಸಾದ್ ಮುಂತಾದವರು ಹಾಜರಿದ್ದರು.

# ಸೆಹಗಲ್ ಸಂಸ್ಥೆಯಿಂದ ಮಹಿಳಾ ಸಂಘಗಳ ಆದಾಯ ಅಭಿವೃದ್ಧಿಯ ಕುರಿತು ಜಾಗೃತಿ

**ಕೋಲಾರ:** ಎಸ್.ಎಂ. ಸೆಹಗಲ್ ಪೌಂಡೇಶನ್ ಸಂಸ್ಥೆಯು ಈಗಾಗಲೇ ಕೋಲಾರ ಜಿಲ್ಲೆಯ ಅನೇಕ ಗ್ರಾಮಗಳಲ್ಲಿ ಸಮಾಜಾಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ ಇಂದು ಉತ್ತಮ ಗ್ರಾಮ ಇನಿಶಿಯೇಟಿವ್ ಕಾರ್ಯಕ್ರಮದಡಿಯಲ್ಲಿ, ಕೋಲಾರ ಜಿಲ್ಲೆಯ ಉಕ್ಕುಂದ ಗ್ರಾಮದ ಮಹಿಳಾ ಗುಂಪಿನವರಿಗೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಕಾರ್ಯಕ್ರಮದ ಯೋಜನೆಯ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ.

ಗ್ರಾಮ ಪಂಚಾಯಿತಿ ಸದಸ್ಯೆ ರತಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಕಾರ್ಯಕ್ರಮದ ಯೋಜನೆಯ ಕುರಿತು ಗ್ರಾಮ ಪಂಚಾಯಿತಿ ಹಂತದಲ್ಲಿ ಸಂಜೀವಿನಿ ಒಕ್ಕೂಟದಡಿಯಲ್ಲಿ ನೋಂದಾಯಿಸಿದ ಮಹಿಳಾ ಗುಂಪುಗಳಿಗೆ ಈಗಾಗಲೇ ಸಾಲ ಸೌಲಭ್ಯದ ವ್ಯವಸ್ಥೆ ಕಲ್ಪಸಲಾಗಿದೆ, ಈ ವ್ಯವಸ್ಥೆಯಿಂದ ಮಹಿಳಾ ಗುಂಪುಗಳಿಗೆ ಆರ್ಥಿಕ ವ್ಯವಸ್ಥೆಯಲ್ಲಿ ಸುಧಾರಣೆಯ ಜೊತೆ ವಿವಿಧ ರೀತಿಯ ಜೀವನೋಪಾಯ ಚಟುವಟಿಕೆಗೆ ಪಂಚಾಯಿತಿ ಹಾಗೂ ರಾಷ್ಟ್ರೀಯ ಬ್ಯಾಂಕ್‌ಗಳಿಂದ ಕಡಿಮೆ ಬಡ್ಡಿದರದಲ್ಲಿಯು ಸಹ ಸಾಲವನ್ನು ಪಡೆದುಕೊಳ್ಳಬಹುದು, ಇದರಿಂದ ಮಹಿಳಾ ಗುಂಪುಗಳ ಸುಧಾರಣೆ ಹಾಗೂ ಅಭಿವೃದ್ದಿಗೆ ಸಹಕಾರಿಯಾಗಿದೆ. ಎಂದರು.

ಎಸ್.ಎಂ. ಸೆಹಗಲ್ ಪೌಂಡೇಶನ್ ಸಂಸ್ಥೆಯ ವಿಶ್ವನಾಥ ಮಾತನಾಡಿ, ಗ್ರಾಮದ ಮಹಿಳಾ ಗುಂಪಿನವರಿಗೆ ರಾಗಿ ಸಂಸ್ಕರಣಾ ಘಟಕ ಹಾಗೂ ಸಾಂಬರು ಪುಡಿ ಮಾಡುವ ಯಂತ್ರಗಳನ್ನು ನೀಡಲಾಗಿದ್ದು ಇದರಿಂದ ಗುಂಪಿಗೆ ಆದಾಯ ಹೆಚ್ಚುವುದರೊಟ್ಟಗೆ ಮೌಲ್ಯವರ್ಧನೆ ಮುಂದಾಗಿದ್ದಾರೆ ಎಂದು ತಿಳಿಸಿದರು. ಹಾಗೆ ಗ್ರಾಮದ ಮಹಿಳೆಯರಿಗೆ ಸ್ಪರ್ಧೆ ಏರ್ಪಡಿಸಿ ಬಹುಮಾನವನ್ನು ವಿತರಿಸಲಾಯಿತು. ಗ್ರಾಮದ ಮಹಿಳೆಯರಿಗೆ ಮರುಬಳಕೆ ಮಾಡುವಂತಹ ಬಟ್ಟೆ ಪ್ಯಾಡ್‌ಗಳನ್ನು ಸಂಸ್ಥೆಯಿಂದ ಉಚಿತವಾಗಿ ವಿತರಿಸಲಾಯಿತು. ಅಂಗನವಾಡಿ ಕಾರ್ಯಕರ್ತೆ ನಾಗವೇಣಿ, ಶಾಲಾ ಮೂಖೋಪಾಧ್ಯಾಯನಿ ವಿಜಯಲಕ್ಷ್ಮಿ, ಸಂಪನ್ಮೂಲ ವ್ಯಕ್ತಿ ಶಿಲ್ಪ ಹಾಗೂ ಅಂಗನವಾಡಿ ಆಯಾ, ಗ್ರಾಮದ ಮಹಿಳಾ ಗುಂಪುಗಳು, ಊರಿನ ಮುಖಂಡರು ಹಾಜರಿದ್ದರು.



# ಸಿಹಿ ಹಂಚಿ ಸಂಭ್ರಮಾಚರಣೆ

**ಮಾಲೂರು:** 2025-26 ನೇ ಸಾಲಿನ ರಾಜ್ಯ ಬಜೆಟ್ನಲ್ಲಿ ಕೋಲಾರ ಜಿಲ್ಲೆಗೆ ಹಾಗೂ ಮಾಲೂರಿಗೆ ನೀಡಿರುವ ಕೊಡುಗೆಗೆ ಶಾಸಕ ಕೆ.ವೈ.ನಂಜೇಗೌಡರ ಪರಿ ಶ್ರಮಕ್ಕೆ ತಾಲ್ಲೂಕಿನ ಜನತೆ ಕೃತಜ್ಞತೆ ಸಲ್ಲಿಸಿದ್ದಾರೆ. ಪಟ್ಟಣದ ಮಾರಿಕಾಂಬಾ ವೃತ್ತದಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಆಚರಿಸಿದರು.

ಕೋಲಾರದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಆಧಾರದ ಮೇಲೆ ವೈದ್ಯಕೀಯ ಕಾಲೇಜು, ಮಾಲೂರು ತಾಲ್ಲೂಕು ಮಟ್ಟದ ಆಸ್ಪತ್ರೆ ಮೇಲ್ದರ್ಜೆಗೆ, 3190/- ಕೋಟಿ ಮೊತ್ತದ ದೇವನಹಳ್ಳಿ - ವಿಜಯಪುರ - ಹೆಚ್ ಕ್ರಾಸ್, ವೇಮಗಲ್ - ಮಾಲೂರು - ತಮಿಳುನಾಡು ಗಡಿಯವರೆಗೆ ಕೈಗಾರಿಕಾ ಸಂಪರ್ಕ ಕಲ್ಪಿಸುವ 123 ಕಿ.ಮೀ ರಸ್ತೆ ಅಭಿವೃದ್ಧಿ ಕಾಮಗಾರಿಯಡಿ ಪ್ರಸಕ್ತ ಸಾಲಿನಲ್ಲಿ 30 ಕಿ.ಮೀ ರಸ್ತೆಯನ್ನು ಪೂರ್ಣಗೊಳಿಸಲಾಗುವುದು. ಮಾಲಿನ್ಯವನ್ನು ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಜಿಲ್ಲೆಯ ಶಿವಾರಪಟ್ಟಣದ ಬಳಿ ಮಲ್ಟಿ ಸ್ಕೂಟರ್ ನೆಟ್ ಜಿರೋ ಸಾಸ್ ನೇಬಲ್ಟಿ ಇಂಡಸ್ಟ್ರಿ ಪಾರ್ಕ್ ಮಾದರಿಯಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿದೆ. ಶಾಸಕ ಕೆ.ವೈ.ನಂಜೇಗೌಡರು ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರ ಪರಿಶ್ರಮವಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ.ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಬೃತತಿ ಸುರೇಶ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ , ಅವರಿಗೆ ಶಾಸಕ ಕೆ.ವೈ.ನಂಜೇಗೌಡರ ಪರವಾಗಿ ತಾಲ್ಲೂಕಿನ ಜನತೆ ಧನ್ಯವಾದಗಳನ್ನು ಸಲ್ಲಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶೀ ಕೆ.ಎನ್.ಸುನೀಲ್ ನಂಜೇಗೌಡ, ಡಿಸಿಸಿ ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಜಿ.ಮಧುಸೂದನ್, ಪುರಸಭಾ ಅಧ್ಯಕ್ಷೆ ಕೋಮಲ, ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ಸದಸ್ಯ ರಾದ ವಿಜಯಲಕ್ಷ್ಮಿ,ಎನ್ .ವಿ.ಮುರಳಿಧರ್ ಆರ್.ವೆಂಕಟೇಶ್, ಇಂಮ್ತಿಯಾಜ್, , ತಾಲ್ಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಎಂ.ಎಂ.ತನ್ವೀರ್, ಸೇರಿದಂತೆ ಇತರರು ಇದ್ದರು.

# ಹೆಣ್ಣುಮಕ್ಕಳಿಗೆ ವಿಭಿನ್ನವಾದ ಶಿಕ್ಷಣ ನೀಡಿ ಮೂಡನಂಬಿಕೆಗಳಿಂದ ಹೊರ ತರಲಿ

**ಚಿತ್ರದುರ್ಗ:** ಮಕ್ಕಳಿದ್ದಾಗ ಶಿಕ್ಷಣ ನೀಡುವಾಗ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ವಿಭಿನ್ನವಾದ ಶಿಕ್ಷಣ ನೀಡುವ ವ್ಯವಸ್ಥೆ ಬರಬೇಕಾಗುತ್ತದೆ, ಅವರನ್ನ ಮೂಢನಂಬಿಕೆಗಳಿಂದ ಹೊರ ತರುವುದರ ಬಗ್ಗೆ ಪ್ರಯತ್ನಗಳಾಗಬೇಕು ಮತ್ತು ಅವರನ್ನ ಶೋಷಣೆ, ದೌರ್ಜನ್ಯ ಮುಂತಾದ ಅನಾಹುತಗಳಿಂದ ರಕ್ಷಣೆ ಮಾಡುವ ವ್ಯವಸ್ಥೆ ಬರಬೇಕಾಗಿದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಸ್ವಾಮಿ ಅವರು ವಿನಂತಿಸಿಕೊಂಡಿದ್ದಾರೆ. 10ನೇ ತರಗತಿವರೆಗೂ ಗಂಡು ಮತ್ತು ಹೆಣ್ಣಿಗೆ ಸಮನಾದ ಶಿಕ್ಷಣ ನೀಡುತ್ತಾ ಬರಬೇಕು, 10ನೇ ತರಗತಿಯ ನಂತರ ಹೆಣ್ಣು ಮಕ್ಕಳಿಗೆ ವಿಭಿನ್ನವಾದಂತ ಶಿಕ್ಷಣವನ್ನ ನೀಡಬೇಕಾಗುತ್ತದೆ, ಏಕೆಂದರೆ ಅವರು ಸಮಾಜವನ್ನು ಎದುರಿಸುವ ನಿಟ್ಟಿನಲ್ಲಿ ಮತ್ತು ಸ್ವಂತ ಕಾಲ ಮೇಲೆ ನಿಲ್ಲುವುದರ ಬಗ್ಗೆ, ಶೋಷಣೆಯಿಂದ ತಪ್ಪಿಸಿಕೊಳ್ಳುವುದರ ಬಗ್ಗೆ ಮತ್ತು ಸ್ವಾವಲಂಬಿ ಜೀವನ ಮಾಡುವುದರ ಬಗ್ಗೆ, ದೇವರ ಹೆಸರಲ್ಲಿ ಅವರನ್ನ ಮೂಢನಂಬಿಕೆಗಳಿಗೆ ತಳ್ಳುವುದರ ಬಗ್ಗೆ ಜಾಗೃತಗೊಳಿಸಬೇಕಾಗಿದೆ. ಅವರು ತಮ್ಮ ಆತ್ಮ ರಕ್ಷಣೆ ಮತ್ತು ದೇಹದ ಮೇಲಾಗುವುದು ದೌರ್ಜನ್ಯಗಳನ್ನು ತಡೆಯುವ ನಿಟ್ಟಿನಲ್ಲಿ ಅವರನ್ನು ಸಿದ್ಧಗೊಳಿಸಬೇಕಾಗಿದೆ ಎಂದರು. ಗಂಡು ಹೆಣ್ಣಿಗೆ ಏಕರೂಪದ ಶಿಕ್ಷಣ ನೀಡುತ್ತಿರುವುದರಿಂದ ಇಂದು ಹೆಣ್ಣು ಮಕ್ಕಳಿಗೆ ತಮ್ಮ ಕರ್ತವ್ಯಗಳನ್ನ ನಿಭಾಯಿಸುವುದರಲ್ಲಿ ಸೋಲುತ್ತಿದ್ದಾರೆ, ಹೆಣ್ಣುಮಕ್ಕಳಿಗೆ ಮನೆ ನಿರ್ವಹಣೆ ಮಾಡುವುದು, ಹಣ ಉಳಿತಾಯ ಮಾಡುವುದು, ದೌರ್ಜನ್ಯಗಳಿಂದ ಹೊರಬರುವುದು, ಮೂಢನಂಬಿಕೆಗಳಿಂದ ಆಗುವ ಶೋಷಣೆಗಳಿಂದ ಹೊರಬರುವುದರ ಬಗ್ಗೆ ಅವರಿಗೆ ತರಬೇತಿ ನೀಡಬೇಕಾಗುತ್ತದೆ ಎಂದರು. ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಹೆಣ್ಣು ಮಕ್ಕಳಿಗೆ ಅವರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ತರಬೇತಿಗಳನ್ನು ನೀಡಬೇಕಾಗುತ್ತದೆ, ಕೈಕಾಲುಗಳನ್ನು ಬಳಸಿ ದುಡಿಮೆ ಮಾಡುವುದರ ಬಗ್ಗೆ, ಹೆಣ್ಣು ಮಕ್ಕಳಿಗೆ ಹೆಚ್ಚಿನ ಆಸಕ್ತಿ ಇರುವುದರಿಂದ ಅವರಿಗೆ ಚರಕ, ದಾರ ಮಾಡುವುದರ ಬಗ್ಗೆ, ನೂಲು ತೆಗೆಯುವುದು, ಬಟ್ಟೆ ಮಾಡಿಕೊಳ್ಳುವುದು, ಬಟ್ಟೆ ಹೊಲಿಯುವುದು ಹಾಗೂ ಇನ್ನಿತರ ಉದ್ಯೋಗಗಳನ್ನ ನೀಡಿ ಅವರನ್ನು ಆರ್ಥಿಕವಾಗಿ ಅಭಿವೃದ್ಧಿಗೊಳಿಸಬೇಕಾಗಿದೆ ಎಂದರು. ಬಹಳಷ್ಟು ಕಡೆ ಹೆಣ್ಣು ಮಕ್ಕಳನ್ನು ದೇವರ ಹೆಸರಲ್ಲಿ ಶೋಷಣೆ ಮಾಡುತ್ತಿರುತ್ತಾರೆ, ಶಿಕ್ಷಣ ಇಲ್ಲದಂತ ಹೆಣ್ಣು ಮಕ್ಕಳನ್ನು ಹೆಚ್ಚು ಬಳಕೆ ಮಾಡಿಕೊಳ್ಳುತ್ತಿದ್ದಾರೆ, ಹಾಗೆ ಅಂತವರ ರಕ್ಷಣೆಗೋಸ್ಕರ ಶಿಕ್ಷಣದಲ್ಲಿ ಬಹಳಷ್ಟು ವಿಚಾರಗಳನ್ನು ಪ್ರಸ್ತುತಪಡಿಸಬೇಕಾಗಿದೆ, ತಲೆಯ ಮೇಲೆ ದೇವರನ್ನು ಹೊತ್ತುಕೊಂಡು ತಿರುಗುವುದು ಅಥವಾ ದೇವರ ಹೆಸರಿನಲ್ಲಿ ಅವರನ್ನ ವೈವಾಹಿಕ ಜೀವನದಿಂದ ಹೊರಗಿರಿಸುವುದು ಹಾಗೂ ದೇವರ ಸೇವೆಯನ್ನು ಅವರಿಗೆ ಕೂದಲನ್ನು ಬಿಟ್ಟುಕೊಳ್ಳುವುದು ಹಾಗೂ ಇನ್ನಿತರ ದೌರ್ಜನ್ಯಗಳನ್ನ ಅವರನ್ನು ರಕ್ಷಿಸಲು ಉತ್ತಮವಾದ ಶಿಕ್ಷಣ ನೀಡಬೇಕಾಗಿದೆ ಎಂದರು.

# ಬಡ್ಡಿ ದಂಧೆಕೋರರ ಹೆಡೆಮುರಿ ಕಟ್ಟಿ



**ಹುಳಿಯಾರು:** ರಾಜ್ಯ ಸರ್ಕಾರ ಮೈಕ್ರೋ ಫೈನಾನ್ಸ್ ಕಿರುಕುಳ ತಪ್ಪಿಸಲು ಸರ್ಕಾರ ಕಾನೂನು ಮಾಡಿದ್ದರೂ ಸಹ ಕೆಲ ಹಳ್ಳಿಗಳಲ್ಲಿ ಕೆಲವು ಬಡ್ಡಿ ದಂಧೆಕೋರರು ಜನರ ಪ್ರಾಣ ಹಿಂಡುತ್ತಿದ್ದಾರೆ. ಪೊಲೀಸರು ಅಂತವರ ಹೆಡೆಮುರಿ ಕಟ್ಟಲು ಮುಂದಾದಾಗ ಮಾತ್ರ ಜನರು ನೆಮ್ಮದಿಯಿಂದ ಬಾಳ್ವೆ ಮಾಡಲು ಸಾಧ್ಯ ಎಂದು ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಅಭಿಪ್ರಾಯಪಟ್ಟಿದ್ದಾರೆ.

ಹುಳಿಯಾರು ಪೊಲೀಸ್ ಠಾಣೆಗೆ ಮೈಕ್ರೋ ಫೈನಾನ್ಸ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಹೊಸಹಳ್ಳಿ ಚಂದ್ರಣ್ಣ ಬಣದ ರೈತ ಸಂಘದಿಂದ ಮನವಿ ಕೊಟ್ಟು ಅವರು ಮಾತನಾಡಿದರು.

ಮೈಕ್ರೋ ಫೈನಾನ್ಸ್‌ನವರ ಹಾವಳಿಯಿಂದಾಗಿ ರಾಜ್ಯದ ಜನರು ತತ್ತರಿಸಿ ಹೋಗಿದ್ದಾರೆ. ಇವರಿಗೆ ಯಾರ ಭಯವೂ ಇಲ್ಲದಂತಾಗಿದ್ದು, ಅಮಾಯಕರ ಜೀವ ಹಿಂಡುತ್ತಿದ್ದಾರೆ. ಬಡ್ಡಿಗೆ ಮೀಟರ್ ಬಡ್ಡಿ, ಚಕ್ರಬಡ್ಡಿ ಸೇರಿಸಿ ವಸೂಲಿ ಮಾಡುತ್ತಿದ್ದಾರೆ. ಇಂತಹವರ ವಿರುದ್ಧ ಸರ್ಕಾರ ಕಾನೂನು ತಂದಿದ್ದರೂ ಸಹ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲು ಪೊಲೀಸಲು ಏಕೆ ಮೀನಾಮೇಷ ನೋಡುತ್ತಿದ್ದಾರೋ ತಿಳಿಯದಾಗಿದೆ ಎಂದಿದ್ದಾರೆ.

ಬಲವಂತದ ಸಾಲ ವಸೂಲಿ ಮತ್ತು ಕಿರುಕುಳ ತಪ್ಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಮಸೂದೆ ಮಂಡಿಸಿರುವುದು ಸ್ವಾಗತಾರ್ಹ. ಮಸೂದೆಯಲ್ಲಿ ಪರವಾನಗಿ ಇಲ್ಲದ ಸಂಸ್ಥೆಗಳಿಂದ ಸಾಲ ಪಡೆದಿದ್ದನ್ನು ಕಟ್ಟುವ ಅಗತ್ಯ ಇಲ್ಲ ಎಂದು ಹೇಳಲಾಗಿದೆ. ಅಲ್ಲದೆ ಬಲವಂತದ ಸಾಲ ವಸೂಲಿಗೆ 10 ವರ್ಷ ಜೈಲು 5 ಲಕ್ಷ ದಂಡ ವಿಧಿಸಲಾಗುತ್ತದೆ. ಈ ಬಗ್ಗೆ ರಾಜ್ಯದಾದ್ಯಂತ ಜನ ಜಾಗೃತಿ ಮೂಡಿಸುವ ಅಗತ್ಯವಿದ್ದು ಬೀಟ್ ಪೊಲೀಸ್ ಮೂಲಕ ಹಳ್ಳಿಹಳ್ಳಿಗಳಲ್ಲಿ ಸಭೆ ನಡೆಸಿ ಅರಿವು ಮೂಡಿಸಬೇಕಿದೆ ಎಂದಿದ್ದಾರೆ. ಪ್ರತಿ ಪೊಲೀಸ್ ಠಾಣೆಯಲ್ಲಿ ತಮ್ಮ ವ್ಯಾಪ್ತಿಯ ಮೈಕ್ರೋ ಫೈನಾನ್ಸ್‌ಗಳ ಸಭೆ ನಡೆಸಿ ಅವರಲ್ಲಿರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ಪಡೆಯದ ಫೈನಾನ್ಸ್‌ಗಳನ್ನು ಗಂಟುಮೂಟೆ ಕಟ್ಟಿಸಬೇಕು. ಅನುಮತಿ ಪಡೆದಿರುವ ಫೈನಾನ್ಸ್‌ಗಳಿಗೆ ಮನೆಮುಂದೆ ಹೋಗಿ ಗಲಾಟೆ ಮಾಡದೆ ಪ್ರೀತಿವಿಶ್ವಾಸದಿಂದ ಸಾಲ ಕಟ್ಟಿಸಿಕೊಳ್ಳಬೇಕು. ಅದೂ ಆರ್‌ಬಿಐ ನಿಯಮದಂತೆ ಸ್ವಸಹಾಯ ಗುಂಪುಗಳಿಗೆ ವಾರ್ಷಿಕ ಶೇ.7 ರಿಂದ 8 ರಷ್ಟು ಮಾತ್ರ ಬಡ್ಡಿ ದರ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ರೈತ ಸಂಘದ ತಾಲೂಕು ಕಾರ್ಯಾಧ್ಯಕ್ಷ ಕರಿಯಪ್ಪ, ಹುಳಿಯಾರು ಹೋಬಳಿ ಅಧ್ಯಕ್ಷ ಹೂವಿನ ತಿಮ್ಮಯ್ಯ, ಭೈರಾಪುರ ಕುಮಾರಸ್ವಾಮಿ, ನರುವಗಲ್ಲು ಲಕ್ಕಮ್ಮ, ನಂದಿಹಳ್ಳಿ ರೇವಣ್ಣ, ಸೋಮಜ್ಜನಪಾಳ್ಯ ಪುಟ್ಟಯ್ಯ, ತಮ್ಮಡಿಹಳ್ಳಿ ಗೊಲ್ಲರಹಟ್ಟಿ ನಿಂಗಪ್ಪ, ಹುಳಿಯಾರು ಹನುಮಂತರಾಜು, ಸೀಗೇಬಾಗಿ ಜಗ್ಗಣ್ಣ, ಗಂಗಣ್ಣ, ಕುಮಾರಸ್ವಾಮಿ, ಮಂಜುನಾಥ್, ಆಶಾ, ಮಂಜಮ್ಮ, ವಾಣಿಶ್ರೀ, ರೇಷ್ಮಾ, ಚಂದ್ರಶೇಖರ ರಾವ್, ಪುಟ್ಟಿಬಾಯಿ ಮತ್ತಿತರರು ಇದ್ದರು.

# ದಸೂಡಿ ಶಾಲಾ ಮಕ್ಕಳಿಂದ ಸರಳ ವಿಜ್ಞಾನ ಪ್ರಯೋಗ

**ಹುಳಿಯಾರು:** ಹುಳಿಯಾರು ಹೋಬಳಿಯ ದಸೂಡಿ ಜಿಎಚ್‌ಪಿಎಸ್ ಶಾಲೆಯಲ್ಲಿ ಶುಕ್ರವಾರ ವಿಜ್ಞಾನ ವಸ್ತು ಪ್ರದರ್ಶನ ಏರ್ಪಡಿಸಲಾಗಿತ್ತು. 1ರಿಂದ 7ನೇ ತರಗತಿಯ ಆಯ್ದ ವಿದ್ಯಾರ್ಥಿಗಳು ಸರಳ ಹಾಗೂ ನೂತನ ಪ್ರಯೋಗಗಳನ್ನು ಪ್ರಸ್ತುತಪಡಿಸುವ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರರಾದರು.

ವಿದ್ಯಾರ್ಥಿ ರಂಜಿತ್ ಉಪಗ್ರಹ ಉಡಾವಣೆ ಹಾಗೂ ಜ್ವಾಲಮುಖಿ, ವಿದ್ಯಾರ್ಥಿ ಹರ್ಷಿತ ಹಗಲು ರಾತ್ರಿ, ವಿದ್ಯಾರ್ಥಿ ನೀತು ಚಂದ್ರ ಮತ್ತು ಸೂರ್ಯಗ್ರಹಣ, ವಿದ್ಯಾರ್ಥಿ ಸ್ವಾಮಿ ಸರ್ಕ್ಯೂಟ್ ಬಗ್ಗೆ, ವಿದ್ಯಾರ್ಥಿ ಮಹಾಲಕ್ಷ್ಮೀ ಮತ್ತು ಜೀವಿತ ಆಯಸ್ಕಾಂತದ ಬಗ್ಗೆ ವಿವರಣೆ ನೀಡಿದರು. ಎಸ್‌ಡಿಎಂಸಿ ಅಧ್ಯಕ್ಷ ವಸಂತ ಕುಮಾರ್ ಉದ್ಘಾಟಿಸಿ ಮಾತನಾಡಿ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರಾಥಮಿಕ ಶಾಲಾ ಹಂತದಲ್ಲಿಯೇ ಮಕ್ಕಳಿಗೆ ವೈಜ್ಞಾನಿಕ ಮನೋಭಾವ ಹಾಗೂ ವೈಚಾರಿಕತೆ ಬೆಳೆಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ವಿಜ್ಞಾನ ಮೇಳ ಆಯೋಜಿಸಿರುವುದು ಮಕ್ಕಳ ಕಲಿಕೆಗೆ ಪೂರಕವಾಗಿ ಎಂದರು. ಗ್ರಾಪಂ ಉಪಾಧ್ಯಕ್ಷ ನಾಗರಾಜು ಅವರು ಮಾತನಾಡಿ ಸಮಾಜದಲ್ಲಿ ಕಂಡುಬರುವ ಮೌಢ್ಯತೆ ಹಾಗೂ ಕಂದಾಚಾರಗಳನ್ನು ತೊಡೆದುಹಾಕಲು ವೈಜ್ಞಾನಿಕ ಮನೋಭಾವನೆ ಸಹಕಾರಿಯಾಗಲಿದೆ ಎಂದರಲ್ಲದೆ ಪ್ರಶ್ನೆ ಮಾಡದೆ ಏನನ್ನೂ ಒಪ್ಪಿಕೊಳ್ಳಲಾಗುವುದಿಲ್ಲ ಎನ್ನುವುದನ್ನು ವಿದ್ಯಾರ್ಥಿಗಳು ಮನಗಾಣಬೇಕಾಗಿದೆ ಎಂದರು. ಮುಖ್ಯ ಶಿಕ್ಷಕ ಮಹಾಲಿಂಗಯ್ಯ ಮಾತನಾಡಿ ವಿದ್ಯಾರ್ಥಿಗಳು ಬಾಲ್ಯದಿಂದಲೇ ವಿಜ್ಞಾನದ ಬಗ್ಗೆ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು. ವಿಜ್ಞಾನದ ನೂತನ ಆವಿಷ್ಕಾರಗಳ ಬಗ್ಗೆ ತಿಳಿದುಕೊಳ್ಳುವ ಆಸಕ್ತಿ ಹೆಚ್ಚಬೇಕು ಎಂದರು. ವಿಜ್ಞಾನ ಶಿಕ್ಷಕಿ ಲೀಲಾಂಬಿಕೆ, ಶಿಕ್ಷಕ ಮೃತ್ಯುಂಜಯ, ಅತಿಥಿ ಶಿಕ್ಷಕರಾದ ಜ್ಯೋತಿ, ಕವಿತಾ, ಗ್ರಾಪಂ ಫಯಾಜ್, ಉಪಸ್ಥಿತರಿದ್ದರು. ಬಲ್ಲಪ್ಪನಹಟ್ಟಿ, ಉಮ್ಲಾನಾಯ್ಕನತಾಂಡ್ಯ, ಮರೆನಡುಪಾಳ್ಯ, ಚಿತ್ರದೇವರಹಟ್ಟಿ, ಎಮ್ಮೆಕರಕನಹಟ್ಟಿ ಶಿಕ್ಷಕರು ಮತ್ತು ಮಕ್ಕಳು ಹಾಗೂ ದಸೂಡಿ ಪ್ರೌಢಶಾಲಾ ಮಕ್ಕಳು ವೀಕ್ಷಣೆ ಮಾಡಿದರು.




**ಹುಳಿಯಾರು ಹೋಬಳಿಯ ದಸೂಡಿ ಜಿಎಚ್‌ಪಿಎಸ್ ಶಾಲೆಯಲ್ಲಿ ಶುಕ್ರವಾರ ವಿಜ್ಞಾನ ವಸ್ತು ಪ್ರದರ್ಶನ ಏರ್ಪಡಿಸಲಾಗಿತ್ತು. 1ರಿಂದ 7ನೇ ತರಗತಿಯ ಆಯ್ದ ವಿದ್ಯಾರ್ಥಿಗಳು ಸರಳ ಹಾಗೂ ನೂತನ ಪ್ರಯೋಗಗಳನ್ನು ಪ್ರಸ್ತುತಪಡಿಸುವ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರರಾದರು.**

# ಸಂಜೆ ಟಿಪ್ಸ್

## ಹಿಮಾಲಯ ವೆಲ್ನೆಸ್ ಹಿಮಾಲಯ 1ಡರ್ವೊಮನ್ ಪ್ರಾಜೆಕ್ಟ್ ಪ್ರಾರಂಭ

ಈ ಅಂತಾರಾಷ್ಟ್ರೀಯ ಮಹಿಳಾ ದಿನದಂದು, ಭಾರತದ ನಂ.1 ಫೇಸ್ ವಾಷ್ ಬ್ರ್ಯಾಂಡ್ ಹಿಮಾಲಯ ವೆಲ್ನೆಸ್, ಯುವತಿಯರನ್ನು ಸಬಲಗೊಳಿಸುವ ನಿಟ್ಟಿನಲ್ಲಿ ಹಿಮಾಲಯ 1ಡರ್ವೊಮನ್ ಪ್ರಾಜೆಕ್ಟ್ ಪ್ರಾರಂಭಿಸಿದೆ. ಈ ಯೋಜನೆಯು ಅವರು ತಮ್ಮ ಕ್ಷೇತ್ರದಲ್ಲಿ 1 ಆಗಲು ಮತ್ತು ಸವಾಲುಗಳನ್ನು ಗೆಲ್ಲಲು ಪ್ರೇರೇಪಿಸುತ್ತದೆ.ಈ ಉದ್ದೇಶವನ್ನು ಸಾಕಾರಗೊಳಿಸಲು, ಹಿಮಾಲಯ 2024ರ ಯುವ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಹಿಳಾ ತಂಡದೊಂದಿಗೆ ಕೈಜೋಡಿಸಿ, ಮಹತ್ವಾಕಾಂಕ್ಷೆಯ ಯುವ ಕ್ರಿಕೆಟಿಗರಿಗೆ ಅವರ ಕ್ರೀಡಾ ಆದರ್ಶಗಳ ಮಾರ್ಗದರ್ಶನದಲ್ಲಿ ವಿಶೇಷ ತರಬೇತಿ ಒದಗಿಸುತ್ತದೆ. ಹಿಮಾಲಯ 1ಡರ್ವೊಮನ್ ಪ್ರಾಜೆಕ್ಟ್ ಯುವತಿಯರನ್ನು ನಿಜ ಜೀವನದ ಮಹಿಳಾಮಾದರಿಗಳೊಂದಿಗೆ, ವಿಶೇಷವಾಗಿ ಕ್ರೀಡೆ ಮತ್ತು ಇತರ ಕ್ಷೇತ್ರಗಳಲ್ಲಿ ಸಂಪರ್ಕಿಸಲು ನೆರವಾಗಿ, ಅವರ ಕನಸು ಮತ್ತು ಅವಕಾಶಗಳ ನಡುವಿನ ಅಂತರವನ್ನು ಕಡಿಮೆ ಮಾಡಲು ಉದ್ದೇಶಿಸಿದೆ.ಮಾರ್ಗದರ್ಶನ, ಸಂಪತ್ತಿನ ಲಭ್ಯತೆ, ಮತ್ತು ದೀರ್ಘಕಾಲದ ಬೆಂಬಲದೊಂದಿಗೆ, ಈ ಯೋಜನೆ ಮುಂದಿನ ತಲೆಮಾರಿನ ಮಹಿಳಾ ನಾಯಕರು ಮತ್ತು ಅಥ್ಲೀಟ್ಗಳನ್ನು ಪ್ರೇರೇಪಿಸಲು ಮತ್ತು ಬೆಳೆಸಲುಮುಂದಾಗಿದೆ. ಉದ್ಘಾಟನಾ ಕಾರ್ಯಕ್ರಮದ ಭಾಗವಾಗಿ, ಬೆಂಗಳೂರು ಮೂಲದ ಕ್ರಿಕೆಟ್ ಅಕಾಡೆಮಿಯ 15 ಯುವ ಮಹಿಳಾ ಕ್ರಿಕೆಟಿಗರಿಗೆ ವಿಶೇಷ ತರಬೇತಿ ಸೆಷನ್ಗೆ ಆಹ್ವಾನ ನೀಡಲಾಯಿತು. ಈಕಾರ್ಯಕ್ರಮದಲ್ಲಿ ಆರ್ಸಿಬಿ ತಂಡದ ಪ್ರಮುಖ ಆಟಗಾರರಾದ ಸ್ಮೃತಿ ಮಂದಾನ, ಎಲಿಸ್ ಪೆರ್ರಿ, ಶ್ರೇಯಂಕಾ ಪಾಟೀಲ್ ಹಾಗೂ ಇತರ ಸದಸ್ಯರು ಭಾಗವಹಿಸಿದ್ದರು.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

**59.ಸುಮಾರು 50 ವರ್ಷಗಳಿಂದ ಮೈಸೂರಿನಿಂದ ಪ್ರಕಟವಾಗುತ್ತಿರುವ ಸಂಸ್ಕೃತ ಭಾಷೆಯ ದಿನಪತ್ರಿಕೆಯ ಹೆಸರೇನು ?**

## ಥಟ್ ಅಂತ ದೋಸೆ ಮಾಡಿ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅಕ್ಕಿ ಹಿಟ್ಟು - 1 ಕಪ್, ಕಡಲೆ ಹಿಟ್ಟು - 1/4 ಕಪ್, ಮೊಸರು - 1/2 ಕಪ್, ಆಲೂಗಡ್ಡೆ- 1, ಒಣ ಮೆಣಸಿನಕಾಯಿ -5, ಅಡುಗೆ ಎಣ್ಣೆ, ಬೆಣ್ಣೆ, ರುಚಿಗೆ ಉಪ್ಪು

### ಮಾಡುವ ವಿಧಾನ

ಒಂದು ನಿಕ್ಸಿ ಜಾರ್ಗೆ ಅಕ್ಕಿ ಹಿಟ್ಟು ಹಾಕಿ ಹಾಗೂ ಅದಕ್ಕೆ ಕಡಲೆ ಹಿಟ್ಟು , ಅರ್ಧ ಕಪ್ ಮೊಸರು ಹಾಕಿಕೊಳ್ಳಿ. ಜೊತೆಗೆ ಸ್ವಲ್ಪ ನೀರು ಹಾಕಿಕೊಳ್ಳಿ. ಇದಕ್ಕು ಮೊದಲು 5 ಒಣ ಮೆಣಸಿನಕಾಯಿಯನ್ನು ಬಿಸಿ ನೀರಿನಲ್ಲಿ ನೆನೆಸಿಡಬೇಕು. ಈ ಮೆಣಸಿನಕಾಯಿಯನ್ನು ಇದೇ ಜಾರ್ಗೆ ಹಾಕಿಕೊಳ್ಳಿ.

ಬಳಿಕ ಇದಕ್ಕೆ ಸಿಪ್ಪೆ ತೆಗೆದು ಹೆಚ್ಚಿಕೊಂಡಿರುವ ಒಂದು ಆಲೂಗಡ್ಡೆಯನ್ನು ಸಣ್ಣದಾಗಿ ಕತ್ತರಿಸಿಕೊಂಡು ಹಾಕಿ. ಇದಕ್ಕೆ ಉಪ್ಪು ಸಹ ಹಾಕಿಕೊಂಡು ರುಬ್ಬಿಕೊಳ್ಳಿ. ರುಬ್ಬಿಕೊಳ್ಳುವಾಗ ಹೆಚ್ಚು ರುಬ್ಬಿಕೊಳ್ಳಬೇಡಿ. ದೋಸೆ ಹಿಟ್ಟಿನ ಹದ ಬರುವಂತೆ ರುಬ್ಬಿಕೊಳ್ಳಿ. ರುಬ್ಬಿಕೊಂಡ ಹಿಟ್ಟನ್ನು ಒಂದು ಪಾತ್ರೆಗೆ ಹಾಕಿಕೊಳ್ಳಿ.

ಈಗ ರೆಡಿ ಮಾಡಿಕೊಂಡ ಹಿಟ್ಟಿಗೆ ಸ್ವಲ್ಪ ಅಡುಗೆ ಸೋಡಾ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಈ ವೇಳೆ ಒಲೆ ಮೇಲೆ ದೋಸೆ ಕಾವಲಿ ಒಲೆ ಮೇಲೇ ಇಟ್ಟು ಅದಕ್ಕೆ ನೀರು ಚಿಮುಕಿಸಿ ಬಳಿಕ ಕಾವಲಿಯನ್ನು ಒರೆಸಿಕೊಂಡು ಅದಕ್ಕೆ ಹಿಟ್ಟು ಹಾಕಿಕೊಳ್ಳಿ. ಬಳಿಕ ದೋಸೆ ಮೇಲೆ ಬೆಣ್ಣೆಯನ್ನು ಸಣ್ಣದಾಗಿ ಕತ್ತರಿಸಿ ದೋಸೆ ಮೇಲೆ ಹಾಕಿಕೊಳ್ಳಿ. ದೋಸೆ ಎರಡೂ ಕಡೆ ಚೆನ್ನಾಗಿ ಕಾಯಿಸಿಕೊಳ್ಳಿ.

ಅದರಲ್ಲೂ ಒಂದು ಕಡೆ ದೋಸೆ ಬಣ್ಣ ಕೇಸರಿಗೆ ತಿರುಗುವಷ್ಟು ಕಾಯಿಸಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ಇನ್ಸ್ಟಂಟ್ ದೋಸೆ ರೆಡಿಯಾಗಿರುತ್ತದೆ.

## ದೀಪಿಕಾ ಪಡುಕೋಣೆ ಪುತ್ರಿಯ ಫೇಸ್ ರಿವೀಲ್



ಬಾಲಿವುಡ್ ಪವರ್ ಕಪಲ್ ದೀಪಿಕಾ ಪಡುಕೋಣೆ ಮತ್ತು ರಣವೀರ್ ಸಿಂಗ್ ಕಳೆದ ವರ್ಷ ಸೆಪ್ಟೆಂಬರ್ ತಿಂಗಳಲ್ಲಿ ಮುದ್ದಾದ ಹೆಣ್ಣು ಮಗುವಿಗೆ ಪೋಷಕರಾದರು. ತಮ್ಮ ಕಂದಮ್ಮಗೆ 'ದುವಾ ಪಡುಕೋಣೆ ಸಿಂಗ್' ಎಂದು ನಾಮಕರಣ ಕೂಡ ಮಾಡಿದ್ದರು.

ಸೆಪ್ಟೆಂಬರ್ 8, 2024 ರಂದು, ದೀಪಿಕಾ ಮುಂಬೈನ ಊಓ ರಿಲಯನ್ಸ್ ಆಸ್ಪತ್ರೆಯಲ್ಲಿ ತನ್ನ ಮಗಳಿಗೆ ಜನ್ಮ ನೀಡಿದ್ದರು. ಗಣೇಶ ಚತುರ್ಥಿಯ ಸಂದರ್ಭದಲ್ಲಿ ದೀಪಿಕಾ ಮತ್ತು ರಣವೀರ್ ಲಕ್ಷ್ಮಿಯನ್ನು ತಮ್ಮ ಮನೆಗೆ ಸ್ವಾಗತಿಸಿದರು.

ಅದಾದ ಬಳಿಕ ಸೋಶಿಯಲ್ ಮೀಡಿಯಾದಲ್ಲಿ ದುವಾ ಫೋಟೋ ಎನ್ನಲಾದ ಹಲವಾರು ಫೋಟೋಗಳು ವೈರಲ್ ಆಗಿದ್ದವು. ಅದರಂತೆ ಇದೀಗ ಮತ್ತೆ ಕೆಲವೊಂದಷ್ಟು ಫೋಟೋಗಳು ವೈರಲ್ ಆಗಿದ್ದು, ದೀಪಿಕಾ ಮಗುವಿನ ಫೋಟೋ ಎನ್ನಲಾಗಿದೆ. ಆದರೆ ಸರಿಯಾಗಿ ಗಮನಿಸಿದರೆ ಅದು ಎಐ ಜನರೇಟೆಡ್ ಫೋಟೋ ಆಗಿದೆ.

ಮಗು ಜನಿಸಿ 8 ತಿಂಗಳಾದರೂ ಸಹ ದೀಪಿಕಾ ಮತ್ತು ರಣವೀರ್ ತಮ್ಮ ಮನೆಗೆ ಪುಟ್ಟ ದೇವತೆಯ ಫೋಟೋವನ್ನು ಎಲ್ಲೂ ರಿವೀಲ್ ಮಾಡಿಲ್ಲ. ಆದರೆ ಮಗುವಿನ ಹೆಸರು ರಿವೀಲ್ ಮಾಡುವ ಸಂದರ್ಭದಲ್ಲಿ ಪುಟ್ಟ ಕಾಲುಗಳ ಫೋಟೋವನ್ನು ಶೇರ್ ಮಾಡಿದ್ದರು ಈ ಜೋಡಿ.



## ರಾಗಿ ತಿಂದವನೇ ಗಟ್ಟಿವಂತ



### ಹೆಲ್ತ್ ಟಿಪ್ಸ್

ರಾಗಿಯಿಂದ ತಯಾರಿಸಿದ ಸರಿ, ಗಂಜಿ, ಮುದ್ದೆ.. ಇತರೆ ಆಹಾರ ಪದಾರ್ಥಗಳಿಗಿಂತ ಅನೇಕ ಪ್ರಯೋಜನಗಳಿವೆ ಎಂಬುದಾಗಿ ವೈಜ್ಞಾನಿಕ ಸಂಶೋಧನೆಯಿಂದಲೂ ದೃಢಪಟ್ಟಿದೆ. ಹೀಗಾಗಿ ರಾಗಿ ಕೇವಲ ಆಹಾರವಲ್ಲದೇ.. ಅದೊಂದು ದೈಹಿಕ ಆರೋಗ್ಯ ಹೆಚ್ಚಿಸುವಂತದ್ದು ಎಂಬುದಾಗಿ ಅರಿಯಬೇಕಿದೆ.

ಅಡುಗೆಯಲ್ಲಿ ರಾಗಿಯನ್ನು ಬಳಕೆ ಮಾಡುವುದರಿಂದ ಕಬ್ಬಿಣದ ಅಂಶ ನಿಮ್ಮ ದೇಹಕ್ಕೆ ಸಿಗುವ ಮೂಲಕ, ಅನೆಮಿಯಾದಂತ ಖಾಯಿಲೆಯಿಂದ ರಕ್ಷಿಸುತ್ತದೆ

ರಾಗಿಯಲ್ಲಿ ಕ್ಯಾಲ್ಸಿಯಂ ಹೇರಳವಾಗಿ ಲಭ್ಯವಿರುದುದರಿಂದ, ಮಕ್ಕಳ ಬೆಳವಣಿಗೆಗೆ ಸಹಕಾರಿ

ಕ್ಯಾಲ್ಸಿಯಂ ಯುಕ್ತ ಆಹಾರ ರಾಗಿಯಾಗಿರುವುದರಿಂದ ಮೂಳೆಗಳ ಬೆಳವಣಿಗೆಗೆ ಉಪಯೋಗಕಾರಿ

ಮಕ್ಕಳಿಗೆ ರಾಗಿಯಿಂದ ತಯಾರಿಸಿದಂತ ಸರಿ, ಗಂಜಿ ಕೊಡೋದ್ರಿಂದ ಇದರಲ್ಲಿರುವ ಡೈಯಟ್ರಿ ಫೈಬರ್ ಅಂಶ ಮಕ್ಕಳಿಗೆ ಸಿಗುವ ಮೂಲಕ, ಮಗುವಿನಲ್ಲಿ ಜೀರ್ಣಕ್ರಿಯೆ ಹೆಚ್ಚುತ್ತದೆ

ರಾಗಿಯಲ್ಲಿ ಹೆಚ್ಚು ಪೌಷ್ಠಿಕಾಂಶ ಇರೋಂದ್ರಿ.. ಮಕ್ಕಳು ಸೇರಿದಂತೆ ಎಲ್ಲರ ಅನೇಕ ಆರೋಗ್ಯ ಕರ ಸಮಸ್ಯೆಯನ್ನು ದೂರ ಮಾಡುತ್ತದೆ.

ಅಲ್ಲದೇ ಡಯಾಬಿಟಿಸ್ ನಿಂದ ಬಳಲುತ್ತಿರುವವರು ರಾಗಿಯನ್ನು ಬಳಸಿ ಮುದ್ದೆಯನ್ನು ತಯಾರಿಸಿಯೂ ಊಟ ಮಾಡೋದ್ರಿಂದ ಸಕ್ಕರೆಯ ಅಂಶವನ್ನು ಹತೋಟಿಗೆ ತರಬಹುದಾಗಿದೆ. ಹೀಗಾಗಿ ರಾಗಿಯ ಬಳಕೆಯನ್ನು ನಿಮ್ಮ ಮನೆಯಲ್ಲಿ ಇಂದಿನಿಂದಲೇ ಬಳಕೆ ಮಾಡಿ.

## ವಿದ್ಯಾರ್ಥಿಗಳ ಕಲಿಕೆ ಅಗತ್ಯಗಳನ್ನು ಬೆಂಬಲಿಸಲು ಲಾಂಗ್ ಬುಕ್‌ಗಳ ಬೆಲೆ ಕಡಿಮೆ ಮಾಡಿದ ಯುವ

ವಿದ್ಯಾರ್ಥಿಗಳಿಗೆ ಗುಣಮಟ್ಟದ ಸ್ಟೇಷನರಿಯನ್ನು ಒದಗಿಸುವ ನಿಟ್ಟಿನಲ್ಲಿ ನವನೀತ್ ಎಜುಕೇಶನ್ನ ಸ್ಟೇಷನರಿ ಬ್ರ್ಯಾಂಡ್ ಯುವ ತನ್ನ ಎ4 ಸೈರ್ಝ್ ಲಾಂಗ್ ಬುಕ್ಗಳ ಬೆಲೆಯನ್ನು ಕಡಿಮೆ ಮಾಡಿದೆ. ಬುಕ್ಗಳ ಬಾಳಿಕೆಯ ಮೇಲೆ ಯಾವುದೇ ರಾಜಿ ಇಲ್ಲದೇ ಈ ದರ ಕಡಿತವನ್ನು ಮಾಡಲಾಗಿದೆ. ಕಚ್ಚಾ ಸಾಮಗ್ರಿ ವೆಚ್ಚದಲ್ಲಿ ಇಳಿಕೆಯಿಂದ ಈ ನಿರ್ಧಾರ ಮಾಡಲಾಗಿದ್ದು, ಇದರಿಂದಾಗಿ ವಿದ್ಯಾರ್ಥಿಗಳಿಗೆ ಮತ್ತು ವೃತ್ತಿಪರರಿಗೆ ಪ್ರಯೋಜನವಾಗಲಿದೆ.

ವಿದ್ಯಾರ್ಥಿಗಳ ಅಗತ್ಯಗಳನ್ನು ಪೂರೈಸುವ ನಿಟ್ಟಿನಲ್ಲಿ ಈ ಲಾಂಗ್ ಬುಕ್ಗಳು ಈಗ ಹೋಲಿಕೆ ಇಲ್ಲದ ಬೆಲೆಯಲ್ಲಿ ಲಭ್ಯವಿವೆ. 172 ಪುಟಗಳಿಗೆ ರೂ. 65 ಮತ್ತು 140 ಪುಟಗಳಿಗೆ ರೂ. 55 ದರದಲ್ಲಿ ಲಭ್ಯವಿದ್ದು, ಪ್ರತಿ ದಿನದ ಬರವಣಿಗೆ ಅಗತ್ಯಗಳಿಗೆ ಸ್ಮಾರ್ಟ್ ಆಯ್ಕೆಯನ್ನು ನೀಡುತ್ತದೆ. ಶಿಕ್ಷಣ ಮತ್ತು ಸುಲಭ ಲಭ್ಯತೆಯ ಮೇಲೆ ಹೆಚ್ಚಿನ ಗಮನ ಹರಿಸಿರುವ ಯುವ, ತನ್ನ ಉತ್ಪನ್ನ ಸರಣಿಯನ್ನು ವಿಸ್ತರಿಸುತ್ತಲೇ ಇದೆ ಮತ್ತು ಬಜೆಟ್ ಮೇಲೆ ಯಾವುದೇ ಹೊರೆ ಹಾಕದೇ ಉತ್ತಮ ಬರವಣಿಗೆ ಅನುಭವವನ್ನು ವಿದ್ಯಾರ್ಥಿಗಳಿಗೆ ಒದಗಿಸುವ ಗುರಿ ಹಾಕಿಕೊಂಡಿದೆ.




ಬೆಲೆ ಇಳಿಕೆಯ ಬಗ್ಗೆ ಮಾತನಾಡಿದ ಯುವ ಸ್ಟೇಷನರಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಅಭಿಜಿತ್ ಸನ್ಯಾಲ್ ''ಕಚ್ಚಾ ಸಾಮಗ್ರಿ ಬೆಲೆಯಲ್ಲಿ ಇಳಿಕೆಯಿಂದಾಗಿ ನಮ್ಮ ಲಾಂಗ್ ಬುಕ್ಗಳನ್ನು ಇನ್ನಷ್ಟು ಕೈಗೆಟಕುವಂತೆ ಮಾಡುವ ಅವಕಾಶ ಲಭ್ಯವಾಗಿದೆ. ಶಿಕ್ಷಣವನ್ನು ಬೆಂಬಲಿಸುವ ಬ್ರ್ಯಾಂಡ್ ಆಗಿರುವ ನಾವು ಉತ್ತಮ ದರದಲ್ಲಿ ಉನ್ನತ ಗುಣಮಟ್ಟದ ಸ್ಟೇಷನರಿಯು ಪ್ರತಿ ವಿದ್ಯಾರ್ಥಿಗೂ ಸುಲಭವಾಗಿ ಸಿಗಬೇಕು ಎಂದು ನಾವು ನಂಬಿದ್ದೇವೆ.''

ಕಡಿಮೆ ಬೆಲೆಯಲ್ಲಿ ಉತ್ತಮ ಗುಣಮಟ್ಟದ ಸ್ಟೇಷನರಿಯನ್ನು ಒದಗಿಸುವ ಮೂಲಕ ಇಡೀ ದೇಶದಲ್ಲಿ ಶಿಕ್ಷಣಕ್ಕೆ ಉತ್ತೇಜನ ನೀಡುವುದು ಮತ್ತು ಕೈಗೆಟಕುವ ದರದಲ್ಲಿ ಕಲಿಕೆ ಸಂಪನ್ಮೂಲಗಳನ್ನು ಒದಗಿಸುವುದಕ್ಕೆ ತನ್ನ ಬದ್ಧತೆಯನ್ನು ಮತ್ತೊಮ್ಮೆ ಯುವ ಸಾಬೀತುಪಡಿಸಿದೆ. ಯುವ ಎ4 ಲಾಂಗ್ ಬುಕ್ ಮತ್ತು ಇತರ ಸ್ಟೇಷನರಿ ಉತ್ಪನ್ನಗಳು ಎಲ್ಲ ಪ್ರಮುಖ ರಿಟೇಲ್ ಸ್ಟೋರ್ಗಳು ಮತ್ತು ಆನ್ಲೈನ್ ಪ್ಲಾಟ್ಫಾರಂಗಳಲ್ಲಿ ಲಭ್ಯವಿವೆ. ಇದರಿಂದಾಗಿ ವಿದ್ಯಾರ್ಥಿಗಳು ಮತ್ತು ವೃತ್ತಿಪರರು ವಿಶ್ವಾಸಾರ್ಹ ಹಾಗೂ ಉನ್ನತ ಗುಣಮಟ್ಟದ ಬರವಣಿಗೆ ಸಾಮಗ್ರಿಗಳನ್ನು ಪಡೆಯುತ್ತಾರೆ.

## ಮೊಡವೆಗೆ ಮನೆಮದ್ದು

### ಬ್ಯೂಟಿ ಟಿಪ್ಸ್



ಯಾವುದೇ ಮಚ್ಚೆ, ಕಲೆ ಅಥವಾ ಕಲೆಗಳನ್ನು ಮನೆ ಮದ್ದಿನಿಂದ ವಾಸಿ ಮಾಡಬಹುದು ಆದರೆ ಚಿಕಿತ್ಸೆಯನ್ನು ಬೇಗನೆ ಶುರು ಮಾಡಬೇಕಾಗುತ್ತದೆ. ಹಾಗಾಗಿ ನಿಮ್ಮಗೆ ಇತ್ತೀಚೆಗೆ ಮೊಡವೆ ಕಲೆಗಳು ಬಂದಿದ್ದಾರೆ ಈ ಕೂಡಲೇ ಮೇಲಿನ ಯಾವುದಾದರೂ ಒಂದು ಮನೆ ಮದ್ದನ್ನು ಬಳಸಲು ಮೊದಲು ಮಾಡಿ. ಮೊದವೆಗಳು ಒಣಗಿದ ಕೂದಲೆ ಯಾವುದಾದರೂ ಒಂದು ಮನೆ ಮದ್ದನ್ನು ಬಳಸಲು ಪ್ರಾರಂಭಿಸಿ. ಇದರಿಂದ ಕಲೆಗಳು ನೆಲೆಯಾಗದಂತೆ ತಡೆಯಬಹುದು.

ಅರಿಶಿನ, ಜ್ಯೇಷ್ಟಮಧು ಹಾಗೂ ಶ್ರೀಗಂಧದ ಔಶಧಿಗಳು ಹಳೆಯ ಕಲೆಗಳನ್ನು ಸಹ ವಾಸಿಮಾಡಲು ಬಹಳ ಪ್ರಭಾವಿಗಳು. ಆದರೆ ಸಂಪೂರ್ಣವಾಗಿ ಕಲೆಗಳು ಮಾಯವಾಗಲು ತಿಂಗಳಿಗಿಂತ ಹೆಚ್ಚು ಸಮಯವಾಗಬಹುದು. ಇದಕ್ಕಾಗಿ ನೀವು ಇದನ್ನು ಚಾಚು ತಪ್ಪದೆ ಚಿಕಿತ್ಸೆಯನ್ನು ಪಾಲಿಸಬೇಕಾಗಿಬರುತ್ತದೆ. ಮನೆ ಮದ್ದಿನ ಪ್ರಭಾವ ನಿಮ್ಮ ಚರ್ಮದ ಬಗೆ ಹಾಗು ವಯಸ್ಸಿನ ಮೇಲೆ ಆಧಾರವಾಗಿರುತ್ತದೆ. ಹೆಚ್ಚಾಗುವ ವಯ್ಯಸ್ಸಿನೊಂದಿಗೆ ಚರ್ಮದ ಪುನ್ನರುಜ್ಜೀವನಗೊಳ್ಳುವ ಶಕ್ತಿಯು ಕಡಿಮೆಯಾಗುತ್ತಾ ಬರುತ್ತದೆ. ಆದ್ದರಿಂದ ಕಲೆಗಳು ಹಾಗೂ ಕಚ್ಚುಗಳು ಕಡಿಮೆಯಾಗುವುದಕ್ಕೆ ಸ್ವಲ್ಪ ಹೆಚ್ಚು ಸಮಯ ಹಿಡಿಯಬಹುದು.

ಮನೆ ಮದ್ದಿನಿಂದ ಸಂಪೂರ್ಣವಾಗಿ ಮಚ್ಚೆ ಹಾಗೂ ಕಲೆಗಳು ಮಾಯವಾಗಲು ಅದನ್ನು ಚಾಚು ತಪ್ಪದೆ ನಿರಂತರವಾಗಿ ಕಟ್ಟುನಿಟ್ಟಾಗಿ ಪಾಲಿಸಬೇಕಾಗಿಬರುತ್ತದೆ. ಇದರಿಂದ ಉತ್ತಮ ಫಲಿತಾಂಶವನ್ನು ಪಡೆಯಬಹುದು.

ಮನೆ ಮದ್ದಿನ ಅತಿ ಮುಖ್ಯವಾದ ಗುಣವೇನೆಂದರೆ ಇದರಿಂದ ಯಾವುದೇ ಅಡ್ಡ ಪರಿಣಾಮಗಳಿರುವುದಿಲ್ಲ ಹಾಗೂ ಹೆಚ್ಚು ಹಣವು ಪೋಲಾಗುವುದಿಲ್ಲ.

ಮೇಲೆ ಹೇಳಿರುವ ಮನೆ ಮದ್ದುಗಳನ್ನು ಬಳಸುವ ಕಾಲಕ್ಕೆ ಹೊಸದಾಗಿ ತಯಾರಿಸಿಕೊಳ್ಳುವುದು ಒಲ್ಲೆಯಾದು?ದರಿಂದಾ ಔಷಧಿ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ. ಜ್ಯೇಷ್ಟಮಧು ಹಾಗೂ ಮತ್ತು ಕೆಲವು ಮನೆ ಮದ್ದುಗಳು ನಿಮ್ಮ ಚರ್ಮವನ್ನು ಸೂಕ್ಷ್ಮಸಂವೇದಿಯಾಗಿಸಬಹುದು ಹಾಗಾಗಿ ಇದನ್ನು ಬಳಸುವಾಗ, ಆಚೆ ಹೋಗುವ ಮುನ್ನ ಒಳ್ಳೆಯ ಸನ್ ಸ್ಕ್ರೀನ್ ಬಳಸಿ.

## ಕಣ ಕಣದಲ್ಲಿ ಕೇಸರಿ ಎಂದ ಮೂವರು ಬಾಲಿವುಡ್ ಸ್ಟಾರ್ ನಟರಿಗೆ ನೋಟಿಸ್



ಜೈಪುರ: ಕಣ ಕಣದಲ್ಲಿ ಕೇಸರಿ ಎಂದು ಗುಟ್ಕಾ ಜಾಹೀರಾತು ನೀಡುತ್ತಿದ್ದ ಬಾಲಿವುಡ್ ನಟರಾದ ಶಾರುಖ್ ಖಾನ್, ಅಜಯ್ ದೇವಗನ್ ಮತ್ತು ಟೈಗರ್ ಶ್ರಾಫ್‌ಗೆ ಸಂಕಷ್ಟ ಎದುರಾಗಿದೆ. ಗಂಭೀರ ಕಾನೂನು ಪ್ರಕರಣವೊಂದರಲ್ಲಿ ಜೈಪುರ ಜಿಲ್ಲಾ ಗ್ರಾಹಕ ಆಯೋಗ ಸಂಖ್ಯೆ-2 ಮೂವರು ನಟರಿಗೆ ನೋಟಿಸ್ ಜಾರಿ ಮಾಡಿದೆ.

ಮೂವರು ನಟರ ಜೊತೆಗೆ ಗುಟ್ಕಾ ತಯಾರಿಕಾ ಕಂಪನಿ ಜೆಬಿ ಇಂಡಸ್ಟ್ರೀಸ್‌ಗೆ ಸಹ ಸಮನ್ಸ್ ಕಳುಹಿಸಲಾಗಿದೆ. ಆಯೋಗವು ಎಲ್ಲರೂ ಇದೇ ಮಾರ್ಚ್ 19ರಂದು ಹಾಜರಾಗುವಂತೆ ಸೂಚನೆ ನೀಡಿದೆ. ಗುಟ್ಕಾ ಉತ್ಪನ್ನವು ಆರೋಗ್ಯಕ್ಕೆ ಹಾನಿಕಾರಕವಾಗಿದ್ದರೂ ಅದರಲ್ಲಿ ಕೇಸರಿ ಇದೆ ಎಂದು ದಾರಿತಪ್ಪಿಸುವ ಹೇಳಿಕೆಗಳನ್ನು ನೀಡುವ ಜಾಹೀರಾತು ಪ್ರಕಟಿಸಲಾಗುತ್ತಿದೆ ಎಂದು ಆರೋಪಿಸಿ ಜೈಪುರ ನಿವಾಸಿ ಯೋಗೇಂದ್ರ ಸಿಂಗ್ ಬಡಿಯಾಲ್ ಜಿಲ್ಲಾ ಗ್ರಾಹಕ ಆಯೋಗಕ್ಕೆ ದೂರು ನೀಡಿದ್ದು, ದೂರಿನ ಅನ್ವಯ ನೋಟಿಸ್ ನೀಡಲಾಗಿದೆ.

ಮೂವರು ಬಾಲಿವುಡ್ ನಟರು ಈ ಗುಟ್ಕಾ ಬ್ರ್ಯಾಂಡ್ ಅನ್ನು ಪ್ರಚಾರ ಮಾಡುತ್ತಿದ್ದು, ಗ್ರಾಹಕರನ್ನು ಖರೀದಿಸುವಂತೆ ಆಕರ್ಷಿಸುತ್ತಿದ್ದಾರೆ. ಗುಟ್ಕಾ ಉತ್ಪನ್ನವು ಆರೋಗ್ಯಕ್ಕೆ ಹಾನಿಕಾರಕವಾಗಿದ್ದರೂ ಅದರಲ್ಲಿ ಕೇಸರಿ ಇದೆ ಎಂದು ದಾರಿತಪ್ಪಿಸುತ್ತಿದ್ದಾರೆ. ಈ ದಾರಿತಪ್ಪಿಸುವ ಜಾಹೀರಾತು ಗ್ರಾಹಕ ಸಂರಕ್ಷಣಾ ಕಾಯ್ದೆ 2019 ಅನ್ನು ಉಲ್ಲಂಘಿಸುತ್ತದೆ ಮತ್ತು ಸಾರ್ವಜನಿಕರನ್ನು ದಾರಿತಪ್ಪಿಸುತ್ತದೆ ಎಂದು ಅರ್ಜಿಯಲ್ಲಿ ಉಲ್ಲೇಖಿಸಿದೆ. ಈ ಮೂವರು ನಟರು ಬಹಳ ಸಮಯದಿಂದ ಪಾನ್ ಮಸಾಲಾ ಮತ್ತು ಗುಟ್ಕಾ ಕಂಪನಿಯ ಜಾಹೀರಾತಿನಲ್ಲಿ ಕಾಣಿಸಿಕೊಂಡಿದ್ದಾರೆ. ''ಟೇಸ್ಟ್ ಆಫ್ ಬಿಗ್ ಬ್ರಾಂಡ್ಸ್'' ಎಂಬ ಟ್ಯಾಗ್‌ಲೈನ್ ಅಡಿಯಲ್ಲಿ ಈ ಜಾಹೀರಾತುಗಳು ಇದನ್ನು ''ಕೇಸರ್'' ಉತ್ಪನ್ನವೆಂದು ಪ್ರಚಾರ ಮಾಡುತ್ತವೆ. ಆದರೆ ವಾಸ್ತವದಲ್ಲಿ ಇದು ಗುಟ್ಕಾ ಉತ್ಪನ್ನಗಳ ಪ್ರಚಾರವಾಗಿದೆ ಎಂದು ಯೋಗೇಂದ್ರ ಸಿಂಗ್ ಹೇಳಿದ್ದಾರೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಅನಗತ್ಯ ಚರ್ಚೆಗಳಿಂದ ದೂರವಿರಿ, ನೂತನ ವಾಹನ ಖರೀದಿಯಿಂದ ಸಂತಸ, ಶ್ರಮಕ್ಕೆ ತಕ್ಕ ಪ್ರತಿಫಲ.

**ವೃಷಭ:** ಪ್ರೀತಿಪಾತ್ರರಿಂದ ಕಿರಿಕಿರಿ ಸಾಧ್ಯತೆ, ಚಿನ್ನ ಬೆಳ್ಳಿ ಖರೀದಿಯಲ್ಲಿ ಲಾಭ, ದೈಹಿಕ ಕಸರತ್ತಿನವರು ಕಾಳಜಿ ವಹಿಸಬೇಕು.

**ಮಿಥುನ:** ಜೀವನದಲ್ಲಿ ಅಭದ್ರತೆಯಿಂದ ಮಾನಸಿಕ ಒತ್ತಡ, ವಾಹನ ಚಲಾಯಿಸುವಾಗ ಎಚ್ಚರಿಕೆ ಅಗತ್ಯ, ಹೊಸ ಕೆಲಸಗಳನ್ನು ಆರಂಭಿಸಲು ಸುಸಮಯ.

**ಕರ್ಕಾಟಕ:** ಒತ್ತಡ ಜೀವನದಿಂದ ಸ್ವಲ್ಪ ಬಿಡುವು ದೊರೆಯಲಿದೆ, ಸಹೋದ್ಯೋಗಿಗಳ ಬೆಂಬಲ ಸಿಗಲಿದೆ, ಹಣಕಾಸಿನ ಸಮಸ್ಯೆಗಳು ಪರಿಹಾರವಾಗಲಿದೆ.

**ಸಿಂಹ:** ನೂತನ ಗೃಹನಿರ್ಮಾಣಕ್ಕೆ ಚಾಲನೆ, ಶಿಕ್ಷಣಕ್ಕೆ ವಿದೇಶದಲ್ಲಿ ಅವಕಾಶ, ಸಂಗಾತಿಯ ಆರೋಗ್ಯದಲ್ಲಿ ಏರುಪೇರು.

**ಕನ್ಯಾ:** ಕಟ್ಟಡ ಕಟ್ಟುವ ಗುತ್ತಿಗೆದಾರರಿಗೆ ನಷ್ಟ, ಕೆಲಸದ ನಿಮಿತ್ತ ಕೊಂಚ ಅಲೆದಾಟ, ಕೃಷಿ ಕ್ಷೇತ್ರದಲ್ಲಿ ಒಳ್ಳೆಯ ಪ್ರತಿಫಲ.

**ತುಲಾ:** ಪ್ರತಿಭೆಗೆ ತಕ್ಕ ಸ್ಥಾನಮಾನ, ಗೃಹಾಲಂಕಾರಕ್ಕೆ ಧನವ್ಯಯ, ಉದ್ಯೋಗ ಸ್ಥಾನದಲ್ಲಿ ಸ್ಥಿರ ವಾತಾವರಣ.

**ವೃಶ್ಚಿಕ:** ವಿವಾದಗಳಿಂದ ದೂರವಿದ್ದಷ್ಟು ಕ್ಷೇಮ, ಉತ್ಪನ್ನಗಳ ಗುಣಮಟ್ಟಕ್ಕೆ ಜನರಿಂದ ಶ್ಲಾಘನೆ, ಜೇನು ಸಾಕಾಣೆಯಿಂದ ಹೆಚ್ಚಿನ ಲಾಭ.

**ಧನುಸ್ಸು:** ಕೊಟ್ಟ ಸಾಲ ತಿರುಗಿ ಬರುವುದಿಲ್ಲ, ಆಸ್ತಿ ವಿಚಾರದಲ್ಲಿ ಎಚ್ಚರ ಅಗತ್ಯ, ವಿಚ್ಛೇದಿತರಿಗೆ ಮರುವಿವಾಹ ಸಾಧ್ಯತೆ.

**ಮಕರ:** ಅಡಿಕೆ ಮತ್ತು ತೆಂಗು ವ್ಯಾಪಾರದಲ್ಲಿ ಲಾಭ, ಐಷಾರಾಮಿ ವಸ್ತುಗಳ ಖರೀದಿಗೆ ದುಂದು ವೆಚ್ಚ, ಉನ್ನತ ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಕುಂಭ:** ಸೇವಾಕಾರ್ಯಗಳಲ್ಲಿ ತೊಡಗಿಸಿಕೊಳ್ಳುವಿರಿ, ಕುಟುಂಬದಲ್ಲಿ ಜಗಳ, ಸಹನೆಯಿಂದ ವರ್ತಿಸಿ, ಹಣ ಹೂಡಿಕೆಯಲ್ಲಿ ಎಚ್ಚರ ವಹಿಸಿ.

**ಮೀನ:** ಮುದ್ರಣಕಾರರಿಗೆ ಹೆಚ್ಚು ಬೇಡಿಕೆ, ಸರ್ಕಾರಿ ಕಚೇರಿಗಳ ಕೆಲಸಕ್ಕಾಗಿ ಓಡಾಟ, ಹಿರಿಯರ ಆಶೀರ್ವಾದದಿಂದ ಶುಭ.

## ವಿಶ್ವ ಮೂತ್ರಪಿಂಡ ದಿನ




ಮೂತ್ರಪಿಂಡದ ಕಾಯಿಲೆಗಳು ಮತ್ತು ಅವು ವ್ಯಕ್ತಿಯ ಜೀವನದ ಮೇಲೆ ಹೇಗೆ ಪರಿಣಾಮ ಬೀರುತ್ತವೆ ಎಂಬುದರ ಕುರಿತು ಜಾಗೃತಿ ಮೂಡಿಸಲು ಮಾರ್ಚ್ 9 ರಂದು ವಿಶ್ವ ಮೂತ್ರಪಿಂಡ ದಿನವನ್ನು ಆಚರಿಸಲಾಗುತ್ತದೆ. ಮಾನವ ದೇಹವು ಸರಿಯಾಗಿ ಕಾರ್ಯನಿರ್ವಹಿಸಲು ಮೂತ್ರಪಿಂಡದ ಅಗತ್ಯವಿದೆ ಮತ್ತು ಆರೋಗ್ಯಕರ ಮೂತ್ರಪಿಂಡವಿಲ್ಲದೆ, ಸರಳವಾದ ಕೆಲಸಗಳು ಸಹ ಕಠಿಣ ಕೆಲಸವಾಗುತ್ತವೆ. ಪರಿಣಾಮವಾಗಿ, ಮೂತ್ರಪಿಂಡದ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲು ಈ ದಿನದಂದು ಪ್ರಪಂಚದಾದ್ಯಂತ ನೂರಾರು ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಇದರಲ್ಲಿ ಸಾರ್ವಜನಿಕ ತಪಾಸಣೆಗಳು, ವಿಚಾರ ಸಂಕಿರಣಗಳು ಮತ್ತು ಮ್ಯಾರಥಾನ್ಗಳು ಸೇರಿವೆ. ಮೂತ್ರಪಿಂಡದ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಜನರು ದೀರ್ಘ ಮತ್ತು ರೋಗ-ಮುಕ್ತ ಜೀವನವನ್ನು ಹೇಗೆ ನಡೆಸಬಹುದು ಎಂಬುದು ಇದರ ಗುರಿಯಾಗಿದೆ.

ವಿಜ್ಞಾನವು ಇಂದಿನ ಸ್ಥಿತಿಯನ್ನು ತಲುಪುವ ಮೊದಲೇ ನಾಗರಿಕತೆಗಳು ಮಾನವ ದೇಹದಲ್ಲಿ ಮೂತ್ರಪಿಂಡಗಳ ಅಸ್ತಿತ್ವದ ಬಗ್ಗೆ ತಿಳಿದಿದ್ದವು. ಅದಕ್ಕಾಗಿಯೇ ಬೈಬಲ್ನಲ್ಲಿ ಮೂತ್ರಪಿಂಡಗಳನ್ನು 30 ಕ್ಕೂ ಹೆಚ್ಚು ಬಾರಿ ಉಲ್ಲೇಖಿಸಲಾಗಿದೆ. ಪ್ರೊಫೆಸರ್ ಗ್ಯಾರಾಬೆಡ್ ಎಕ್ನೊಯಾನ್ ಪ್ರಕಾರ, ಅಂಗವು ಭಾವನೆಗಳು, ಬಯಕೆ ಮತ್ತು ಬುದ್ಧಿವಂತಿಕೆಯನ್ನು ಪ್ರತಿನಿಧಿಸುತ್ತದೆ. ಈಜಿಪ್ಟಿನ ಎಬರ್ಸ್ ಪ್ಯಾಪಿರಸ್ ಮೂತ್ರಪಿಂಡಗಳ ಪ್ರಾಚೀನ ವಿವರಣೆಯನ್ನು ಒಳಗೊಂಡಿದೆ. ಜರ್ಮನ್ ಈಜಿಪ್ಟ್ ಶಾಸ್ತ್ರಜ್ಞ ಜಾರ್ಜ್ ಎಬರ್ಸ್ ಇದನ್ನು ಕ್ರಿ.ಪೂ. 1550 ರ ಹಿಂದಿನಿಂದ ಕಂಡುಹಿಡಿದರು. ಈ ಖಾತೆಯು ಪ್ರಾಚೀನ ವೈದ್ಯರು ಮಾಡಿದ ಅವಲೋಕನಗಳನ್ನು ಒಳ ಗೊಂಡಿರುವುದರಿಂದ ಮಹತ್ವದ್ದಾಗಿದೆ. ಆಶ್ಚರ್ಯಕರವಾಗಿ, ಇದು ಮೂತ್ರಪಿಂಡದ ಚೀಲಗಳು ಮತ್ತು ಕಲ್ಲುಗಳಂತಹ ಸ್ಥಿತಿಗಳನ್ನು ಹೊಂದಿರುವ ಮಾನವ ಮಮ್ಮಿಗಳ ಚಿತ್ರಗಳನ್ನು ಸಹ ಒಳಗೊಂಡಿದೆ. ಮೂತ್ರಪಿಂಡಗಳ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು 2006 ರಲ್ಲಿ ವಿಶ್ವ ಮೂತ್ರಪಿಂಡ ದಿನವನ್ನು ಸ್ಥಾಪಿಸಲಾಯಿತು. ಇಂಟರ್ನ್ಯಾಷನಲ್ ಸೊಸೈಟಿ ಆಫ್ ನೆಫ್ರಾಲಜಿ ಮತ್ತು ಇಂಟರ್ನ್ಯಾಷನಲ್ ಫೆಡರೇಶನ್ ಆಫ್ ಕಿಡ್ನಿ ಫೌಂಡೇಶನ್ಸ್ ಈ ದಿನವನ್ನು ರಚಿಸಲು ಸಹಕರಿಸಿದವು, ಇದು ಮೂತ್ರಪಿಂಡದ ಆರೋಗ್ಯದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವ ಜಾಗತಿಕ ಅಭಿಯಾನವಾಗಿ ಕಾರ್ಯನಿರ್ವಹಿಸುತ್ತದೆ. ಈ ದಿನವು ಮೂತ್ರಪಿಂಡದ ಕಾಯಿಲೆಗಳ ಹರಡುವಿಕೆ ಮತ್ತು ಅತ್ಯುತ್ತಮ ಮೂತ್ರಪಿಂಡದ ಆರೋಗ್ಯವನ್ನು ಕಾಪಾಡಿಕೊಳ್ಳುವ ಪ್ರಾಮುಖ್ಯತೆಯನ್ನು ಎತ್ತಿ ತೋರಿಸುತ್ತದೆ. ದೀರ್ಘಕಾಲದ ಮೂತ್ರಪಿಂಡ ಕಾಯಿಲೆಗೆ ಅಪಾಯಕಾರಿ ಅಂಶಗಳಾಗಿ ಮಧುಮೇಹ ಮತ್ತು ಅಧಿಕ ರಕ್ತದೊತ್ತಡದ ಮಹತ್ವವನ್ನು ಒತ್ತಿಹೇಳುವುದು, ಜೊತೆಗೆ ಎಲ್ಲಾ ಮಧುಮೇಹ ಮತ್ತು ಅಧಿಕ ರಕ್ತದೊತ್ತಡ ರೋಗಿಗಳ ವ್ಯವಸ್ಥಿತ ಅ.ಏ.ಆ. ತಪಾಸಣೆಯನ್ನು ಪ್ರೋತ್ಸಾಹಿಸುವುದು ದಿನದ ಇತರ ಗುರಿಗಳಲ್ಲಿ ಸೇರಿವೆ.

ಸಂಜೆ ಮುಗಿಲು
ಭಾನುವಾರ
9.3.2025



# ಮೆಕ್ಸಿಕೊ, ಕೆನಡಾ ಮೇಲೆ ಸದ್ಯ ಸುಂಕ ಹೇರಿಕೆ ಇಲ್ಲ; ಒಂದು ತಿಂಗಳ ವಿನಾಯಿತಿ ನೀಡಿದ ಟ್ರಂಪ್



**ವಾಷಿಂಗ್ಟನ್:** ಅಮೆರಿಕದ ಉತ್ಪನ್ನಗಳ ಮೇಲಿನ ಆಮದು ಸುಂಕಕ್ಕೆ ಪ್ರತಿ ಸುಂಕ ಹೇರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕಠಿಣ ನಿರ್ಧಾರಕ್ಕೆ ಗಡಿ ವ್ಯಾಪಾರ ಸಮರ ಭೀತಿ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಮೆಕ್ಸಿಕೊದ ಮೇಲಿನ ಶೇ 25ರಷ್ಟು ಸುಂಕ ಮತ್ತು ಕೆನಡಾ ಮೇಲೆ ಹೆಚ್ಚುವರಿ ಪ್ರತಿ ಸುಂಕ ವಿಧಿಸುವ ಕ್ರಮವನ್ನು ಒಂದು ತಿಂಗಳು ಮುಂದೂಡಲು ಅವರು ಮುಂದಾಗಿದ್ದಾರೆ.

ಫೆಂಟನಿಲ್ ಡ್ರಗ್ ಕಳ್ಳಸಾಗಣೆ ನಿಲ್ಲಿಸುವ ಉದ್ದೇಶದಿಂದ ಪ್ರತಿ ಸುಂಕಗಳನ್ನು ವಿಧಿಸಲಾಗುತ್ತಿದೆ ಎಂದು ಶ್ವೇತಭವನ ತಿಳಿಸಿದೆ. ಈ ಸುಂಕದಿಂದ ದಶಕಗಳಿಂದಿರುವ ಉತ್ತರ ಅಮೆರಿಕದ ವ್ಯಾಪಾರ ಸಹಭಾಗಿತ್ವದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಹೆಚ್ಚಿದೆ. ಅಲ್ಲದೇ ಷೇರು ಮಾರುಕಟ್ಟೆ ಮುಳುಗಡೆಗೂ ಕಾರಣವಾಗಲಿದೆ ಎಂಬುದನ್ನು ಅಮೆರಿಕ ಗ್ರಾಹಕರು ಎಚ್ಚರಿಸಿದ್ದಾರೆ.

ಫೆಂಟನಿಲ್ ಜೊತೆಗೆ ವ್ಯಾಪಾರ ಕೊರತೆ ಸರಿಪಡಿಸುವ ಮೂಲಕ ಸುಂಕಗಳನ್ನು ಪರಿಹರಿಸಬಹುದು ಎಂದು ಟ್ರಂಪ್ ಹೇಳಿದ್ದು, ಪರಸ್ಪರ ಸುಂಕ ವಿಧಿಸುವ ಕ್ರಮವನ್ನು ಏಪ್ರಿಲ್ 2ರಿಂದ ಜಾರಿಗೆ ತರಲು ಚಿಂತಿಸಲಾಗುತ್ತಿದೆ ಎಂದಿದ್ದಾರೆ.

ಬಹುತೇಕ ಸುಂಕಗಳು ಏಪ್ರಿಲ್ ಎರಡನೇ ವಾರದಿಂದ ಜಾರಿಗೆ ಬರಲಿವೆ. ಇದೀಗ ನಾವು ಮೆಕ್ಸಿಕೊ ಮತ್ತು ಕೆನಡಾದಿಂದ ಕೆಲವು ಸಣ್ಣ ಮತ್ತು ತಾತ್ಕಾಲಿಕ ವಸ್ತುಗಳ ಮೇಲೆ ಹೆಚ್ಚಿನ ಹಣವನ್ನು ಪಡೆಯುತ್ತಿದ್ದೇವೆ. ಆದರೆ, ಮತ್ತೊಂದು ತಿಂಗಳ ಬಳಿಕ ಶೇ 25ರಷ್ಟು ಸುಂಕ ವಿಸ್ತರಣೆಗೆ ಯಾವುದೇ ವಿನಾಯಿತಿ ಇರುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# ಮಹಿಳೆಯರ ವಿರುದ್ಧದ ಅಪರಾಧ ತಡೆಗೆ ಕಠಿಣ ಕಾನೂನು ರೂಪಿಸಿದ್ದೇವೆ: ಮೋದಿ

**ಗಾಂಧಿನಗರ:** ನಮ್ಮ ಸರಕಾರ ಅತ್ಯಾಚಾರದಂತಹ ಘೋರ ಅಪರಾಧಗಳಲ್ಲಿ ತೊಡಗುವವರಿಗೆ ಮರಣದಂಡನೆ ವಿಧಿಸಲು ನಿಯಮ ರೂಪಿಸುವುದರೊಂದಿಗೆ ಮಹಿಳೆಯರ ಸುರಕ್ಷೆಗೆ ಅತ್ಯಂತ ಹೆಚ್ಚಿನ ಆದ್ಯತೆ ನೀಡಿದೆ. ಮಹಿಳೆಯರ ವಿರುದ್ಧದ ಅಪರಾಧವನ್ನು ತಡೆಗಟ್ಟಲು ಕಠಿಣ ಕಾನೂನು ಹಾಗೂ ನಿಯಮಗಳನ್ನು ರೂಪಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ವಸಾಹತುಶಾಹಿ ಯುಗದ ಕ್ರಿಮಿನಲ್ ಕಾನೂನು (ಭಾರತೀಯ ದಂಡ ಸಂಹಿತೆ) ಬದಲಿಗೆ ಜಾರಿಗೆ ತರಲಾದ ಭಾರತೀಯ ನ್ಯಾಯ ಸಂಹಿತೆ (ಬಿಎನ್ ಎಸ್) ಮಹಿಳಾ ಸುರಕ್ಷೆಗೆ ಸಂಬಂಧಿಸಿದ ಕಾನೂನಿನ ನಿಯಮಗಳನ್ನು ಸುದೃಢಗೊಳಿಸಿದೆ. ದೂರು ದಾಖಲಿಸುವುದನ್ನು ಸುಲಭಗೊಳಿಸಿದೆ ಹಾಗೂ ನ್ಯಾಯ ನೀಡುವುದನ್ನು ತ್ವರಿತಗೊಳಿಸಿದೆ ಎಂದರು.

ಅಂತರ ರಾಷ್ಟ್ರೀಯ ಮಹಿಳಾ ದಿನದ ಹಿನ್ನೆಲೆಯಲ್ಲಿ ಗುಜರಾತ್ನ ನವಸಿರಿ ಜಿಲ್ಲೆಯ ವಂಶಿ



ಬೊರ್ಸಿ ಗ್ರಾಮದಲ್ಲಿ ಬೃಹತ್ ಜನಸಂದಣಿಯನ್ನು ಉದ್ದೇಶಿಸಿ ಮಾತನಾಡಿದ ಮೋದಿ, ದೇಶದ ತ್ವರಿತ ಪ್ರಗತಿಗೆ ಭಾರತ ಮಹಿಳಾ ನೇತೃತ್ವದ ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿದೆ ಎಂದರು.

## ಟಿಬೆಟ್ ನಲ್ಲಿ 4.0 ತೀವ್ರತೆಯ ಭೂಕಂಪ

**ಟಿಬೆಟ್:** ಟಿಬೆಟ್ನಲ್ಲಿ ಭಾನುವಾರ ರಿಕ್ಟರ್ ಮಾಪಕದಲ್ಲಿ 4.0 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರದ ಹೇಳಿಕೆ ತಿಳಿಸಿದೆ. ಎನ್ಸಿಎಸ್ ಪ್ರಕಾರ, ಭೂಕಂಪವು 10 ಕಿ.ಮೀ ಆಳದಲ್ಲಿ ಸಂಭವಿಸಿದೆ. ಇದಕ್ಕೂ ಮುನ್ನ ಶನಿವಾರ, ಈ ಪ್ರದೇಶದಲ್ಲಿ ಮತ್ತೊಂದು ಭೂಕಂಪ ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ 5.2 ರಷ್ಟಿತ್ತು. ಮಾರ್ಚ್ 4 ರಂದು ರಿಕ್ಟರ್ ಮಾಪಕದಲ್ಲಿ 4.2 ತೀವ್ರತೆಯ ಭೂಕಂಪ ಟಿಬೆಟ್ನಲ್ಲಿ ಸಂಭವಿಸಿತ್ತು. ಎನ್ಸಿಎಸ್ ಪ್ರಕಾರ, ಭೂಕಂಪವು 5 ಕಿ.ಮೀ ಆಳದಲ್ಲಿ ಸಂಭವಿಸಿದೆ.




## ಟ್ರಂಪ್ ಪ್ರಸ್ತಾವಕ್ಕೆ ಇರಾನ್ ತಿರಸ್ಕಾರ

**ಟೆಹರಾನ್:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ತಮ್ಮ ವಿರುದ್ಧ ಗರಿಷ್ಠ ಒತ್ತಡ ಅಭಿಯಾನವನ್ನು ಜಾರಿಗೊಳಿಸುತ್ತಿದ್ದಾರೆ ಎಂದು ಆಪಾದಿಸಿ, ಆ ದೇಶದ ಜತೆಗೆ ಅಣ್ವಸ್ತ್ರ ಮಾತುಕತೆಯನ್ನು ಪುನರಾರಂಭಿಸುವ ಪ್ರಸ್ತಾವವನ್ನು ಇರಾನ್ ತಳ್ಳಿಹಾಕಿದೆ. ಇದಕ್ಕೂ ಮುನ್ನ ಟ್ರಂಪ್ ಇರಾನ್ ಗೆ ಪತ್ರ ಬರೆದು, ಇರಾನ್ ಮುಖಂಡರು ಮಾತುಕತೆಗೆ ಮುಂದಾಗಬೇಕು ಇಲ್ಲವೇ ಮಿಲಿಟರಿ ದಾಳಿ ಎದುರಿಸಲು ಸಜ್ಜಾಗಬೇಕು ಎಂದು ಹೇಳಿದ್ದರು. ಅವರಿಗೆ ನಾವು ಪತ್ರ ಬರೆದು ಅವರು ಒಪ್ಪಂದ ಮಾಡಿಕೊಳ್ಳುವ ನಿರೀಕ್ಷೆಯನ್ನು ವ್ಯಕ್ತಪಡಿಸಿದ್ದೆವು. ಏಕೆಂದರೆ ನಾವು ಮಿಲಿಟರಿ ದಾಳಿ ನಡೆಸಿದರೆ ಅವರ ಪಾಲಿಗೆ ಅದು ಭಯಾನಕವಾಗಲಿದೆ ಎಂದು ಟ್ರಂಪ್ ಫಾಕ್ಸ್ ಬ್ಯುಸಿನೆಸ್ ಜತೆ ಮಾತನಾಡಿದ ವೇಳೆ ಸ್ಪಷ್ಟಪಡಿಸಿದ್ದರು. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ ಎಎಫ್ಪಿ ಜತೆ ಮಾತನಾಡಿ, ಜಂಟಿ ಸಮಗ್ರ ಕ್ರಿಯಾ ಯೋಜನೆ ಒಪ್ಪಂದದ ಬಗ್ಗೆ ಇತರ ಸಂಧಾನಕಾರರ ಸಂಪರ್ಕವನ್ನು ಇರಾನ್ ಮುಂದುವರಿಯಲಿದೆ. ಆದರೆ ಟ್ರಂಪ್ ನಮ್ಮ ಮೇಲೆ ಆರ್ಥಿಕ ನಿರ್ಬಂಧ ವಿಧಿಸುವ ನಿರ್ಧಾರವನ್ನು ಪುನರುಚ್ಚರಿಸಿದರೆ ಆ ದೇಶದ ಜತೆಗೆ ಮಾತುಕತೆ ನಡೆಸುವುದಿಲ್ಲ ಎಂದು ಹೇಳಿಕೆ ನೀಡಿದ್ದಾರೆ.





# ಪಿಂಕ್ ಆಟೋಗಳಿಗೆ ಚಾಲನೆ ನೀಡಿದ ಸಿಎಂಸ್ಟಾಲಿನ್

**ಚೆನ್ನೈ :** ಮಹಿಳಾ ದಿನಾಚರಣೆ ನಿಮಿತ್ತ ಚೆನ್ನೈನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಎಂ. ಕೆ ಸ್ಟಾಲಿನ್ ಅವರು ಮಹಿಳೆಯರಿಗಾಗಿ 250 ಪಿಂಕ್ ಆಟೋಗಳಿಗೆ ಇಂದು ಚಾಲನೆ ನೀಡಿದರು.

ಬಳಿಕ ನೆಹರೂ ಒಳಾಂಗಣ ಕ್ರೀಡಾಂಗಣದಲ್ಲಿ ಮಹಿಳಾ ಕಾರ್ಯಪಡೆಯಿಂದ ಸಾಹಸ ಪ್ರದರ್ಶನ ನಡೆಯಿತು. ಇದರ ಬೆನ್ನಲ್ಲೇ ಮುಖ್ಯಮಂತ್ರಿ ಎಂ. ಕೆ ಸ್ಟಾಲಿನ್ ಸಭೆ ಉದ್ದೇಶಿಸಿ ಮಾತನಾಡಿದರು. ತಮ್ಮ ಮನೆಗಳನ್ನು ಮಾತ್ರವಲ್ಲದೇ ಜಗತ್ತನ್ನು ಸಶಕ್ತಗೊಳಿಸುವ ಮಹಿಳೆಯರಿಗೆ, ನಿಮ್ಮ ಸಹೋದರ ಮುತ್ತುವೇಲ್ ಕರುಣಾನಿಧಿ ಸ್ಟಾಲಿನ್ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಹೃತ್ಪೂರ್ವಕ ಶುಭಾಶಯಗಳನ್ನು ಸಲ್ಲಿಸುತ್ತೇನೆ ಎಂದಿದ್ದಾರೆ. ಮಾರ್ಚ್ 1 ನನ್ನ ಜನ್ಮದಿನ ಮತ್ತು ಮಾರ್ಚ್ 8 ಅಂತಾರಾಷ್ಟ್ರೀಯ ಮಹಿಳಾ ದಿನ. ಮಹಿಳೆಯರ ಸಾಧನೆಗಳನ್ನು ಆಚರಿಸುವ ಇದೇ ತಿಂಗಳಲ್ಲಿ ನಾನು ಜನಿಸಿದ್ದಕ್ಕೆ ಹೆಮ್ಮೆ ಮತ್ತು ಸಂತೋಷವಾಗುತ್ತಿದೆ. ಈ ದಿನವು ಸಮಾಜದ ಅರ್ಧದಷ್ಟು ಭಾಗವಾಗಿರುವ ಮಹಿಳೆಯರಿಗೆ ಸೇರಿದೆ. ದ್ರಾವಿಡ ಚಳವಳಿಯ ಮೂಲಭೂತ ಗುರಿ ಎಂದರೆ, ಯಾವುದೇ ಜಾತಿ ಅಥವಾ ಲಿಂಗ ವ್ಯತ್ಯಾಸಗಳಿಲ್ಲದ ಸಮಾಜವನ್ನ ನಿರ್ಮಿಸುವುದು. ಇದು ನಿಜವಾದ ಸಾಮಾಜಿಕ ನ್ಯಾಯ. ದ್ರಾವಿಡ ಚಳವಳಿಯ ಸಂಸ್ಥಾಪಕ ಪೆರಿಯಾರ್ ಅವರು ಮಹಿಳಾ ವಿಮೋಚನೆಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟರು. ಮಹಿಳೆಯ ಅಧೀನತೆ ಕೊನೆಗೊಂಡಾಗ ಮಾತ್ರ ಮಾನವನ ಗುಲಾಮಗಿರಿ ನಿರ್ಮೂಲನೆ ಸಾಧ್ಯ ಎಂದು ಒತ್ತಿ ಹೇಳಿದ್ದರು ಎಂದರು.



ದ್ರಾವಿಡ ಚಳವಳಿಯ ಮುಂಚೂಣಿಯಲ್ಲಿರುವ ಜಸ್ಟಿಸ್ ಪಾರ್ಟಿಯ ಆಡಳಿತದಲ್ಲಿ ಮಹಿಳೆಯರಿಗೆ ಮೊದಲ ಬಾರಿಗೆ ಮತದಾನದ ಹಕ್ಕನ್ನು ನೀಡಲಾಯಿತು. ಪೆರಿಯಾರ್ ಮಾರ್ಗ ಅನುಸರಿಸಿದ ಅಣ್ಣಾ, ಸ್ವಾಭಿಮಾನದ ವಿವಾಹಗಳಿಗೆ ಕಾನೂನು ಮಾನ್ಯತೆ ನೀಡಿದರು. ಕರುಣಾನಿಧಿ ಅವರು ಪೆರಿಯಾರ್ ಅವರ ನಿರ್ಣಯವನ್ನು ಜಾರಿಗೆ ತರುವ ಮೂಲಕ ಮಹಿಳೆಯರ ಆಸ್ತಿಯ ಹಕ್ಕುಗಳನ್ನು ಖಾತ್ರಿಪಡಿಸಿದರು. ಮಹಿಳೆಯರಿಗಾಗಿ ಪೊಲೀಸ್ ಪಡೆ, ಮಹಿಳಾ ಸ್ವಸಹಾಯ ಸಂಘಗಳಲ್ಲಿ ನೇಮಕಾತಿ, ಸ್ಥಳೀಯ ಆಡಳಿತದಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೆ ತಂದರು ಎಂದರು.

# ಮಹಿಳೆಯರು ಆರೋಗ್ಯದ ಕಾಳಜಿಗೆ ಸಮಯ ನೀಡಬೇಕು: ನೀತಾ ಅಂಬಾನಿ



'ಮಹಿಳೆ ಸದಾ ತನ್ನವರು, ತನ್ನ ಕುಟುಂಬದವರ ಏಳಿಗೆ, ಆರೈಕೆಯಲ್ಲಿಯೇ ಮುಳುಗಿರುತ್ತಾಳೆ. ಈ ಕಾರಣಗಳಿಂದ ಆಕೆ ತನ್ನ ಬಗ್ಗೆ, ತನ್ನ ಆರೋಗ್ಯದ ಬಗ್ಗೆ ಗಮನ ಕೊಡುವುದನ್ನೇ ಮರೆಯುತ್ತಾಳೆ. ಇದರಿಂದ 60ವರ್ಷ ವಯಸ್ಸಾಗುತ್ತಿದ್ದಂತೆಯೇ ದೇಹ ದುರ್ಬಲವಾಗುತ್ತದೆ. ಹೀಗಾಗದಂತೆ ಮಹಿಳೆಯರು ತಮ್ಮ ಬಗ್ಗೆ ತಾವೇ ಕಾಳಜಿ ವಹಿಸಿಕೊಳ್ಳಬೇಕು' ಎಂದು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ರಿಲಯನ್ಸ್ ಫೌಂಡೇಶನ್ ಅಧ್ಯಕ್ಷೆ ನೀತಾ ಅಂಬಾನಿ ಅವರು ಮಹಿಳೆಯರಿಗೆ ಕರೆ ನೀಡಿದರು.

'ನಿಮಗಾಗಿ ನೀವು ಕೊನೆಯ ಬಾರಿಗೆ ಏನನ್ನಾದರೂ ಮಾಡಿದ್ದು ಯಾವಾಗ? ನಿಮ್ಮ ಕುಟುಂಬಕ್ಕಾಗಿ ಅಲ್ಲ, ನಿಮ್ಮ ಕೆಲಸಕ್ಕಾಗಿ ಅಲ್ಲ, ಬೇರೆ ಯಾರಿಗಾಗಿಯೂ ಅಲ್ಲ. ನಿಮಗಾಗಿ? ನೆನಪಿಲ್ಲವೇ! ನಾವು ನಮ್ಮ ಬಗ್ಗೆ ಕಾಳಜಿ ವಹಿಸದಿದ್ದರೆ, ಯಾರು ಮಾಡುತ್ತಾರೆ' ಎಂದು ದೇಶದ ಎಲ್ಲಾ ಮಹಿಳೆಯರನ್ನೂ ನೀತಾ ಪ್ರಶ್ನಿಸುತ್ತಾರೆ.

'ನಿಮ್ಮ 50ನೇ ಮತ್ತು 60ನೇ ವಯಸ್ಸಿನಲ್ಲಿ ಆರೋಗ್ಯ ಮತ್ತು ಯೋಗಕ್ಷೇಮದ ಬಗ್ಗೆ ಗಮನ ಹರಿಸುವುದು ಮುಖ್ಯ. 30 ವರ್ಷದ ನಂತರ, ಮಹಿಳೆಯರು ಪ್ರತಿ ದಶಕಕ್ಕೆ ಸುಮಾರು ಮೂರರಿಂದ ಎಂಟು ಪ್ರತಿಶತದಷ್ಟು ಸ್ನಾಯು ದ್ರವ್ಯರಾಶಿಯನ್ನು ಕಳೆದುಕೊಳ್ಳುತ್ತಾರೆ ಮತ್ತು ಇದು ವೇಗಗೊಳ್ಳುತ್ತದೆ. ನಾವು ವಯಸ್ಸಾದಂತೆ, ನಮ್ಮ ದೇಹವು ಅನೇಕ ಬದಲಾವಣೆಗಳಿಗೆ ಒಳಗಾಗುತ್ತದೆ. ಸ್ನಾಯುವಿನ ಮೂಳೆ ಸಾಂದ್ರತೆಯನ್ನು ಕಳೆದುಕೊಳ್ಳುತ್ತೇವೆ, ಸಮತೋಲನ ಚಲನಶೀಲತೆ ಶಕ್ತಿ, ಚಯಾಪಚಯ ಮತ್ತು ಸಹಿಷ್ಣುತೆ ಕಡಿಮೆಯಾಗುತ್ತದೆ. ಆದ್ದರಿಂದ ನಮ್ಮನ್ನು ನಾವು ನೋಡಿಕೊಳ್ಳುವುದು, ಸದೃಢವಾಗಿರುವುದು ಇನ್ನೂ ಮುಖ್ಯವಾಗುತ್ತದೆ ಎಂದು ನೀತಾ ಅವರು ಮಹಿಳೆಯರಿಗೆ ಸಲಹೆ ನೀಡುತ್ತಾರೆ. ಕಾಲಿನ ವ್ಯಾಯಾಮ ನನಗೆ ಬಹಳ ಇಷ್ಟ. ನಾನು ಆರು ವರ್ಷದವಳಾಗಿದ್ದಾಗಿನಿಂದ ಭರತನಾಟ್ಯವನ್ನು ಅಭ್ಯಾಸ ಮಾಡುತ್ತಿದ್ದೇನೆ. ಈಗ ಪ್ರತಿ ದಿನವೂ ದೇಹದ ವಿಭಿನ್ನ ಭಾಗದ ಮೇಲೆ ಕೇಂದ್ರೀಕರಿಸುತ್ತಿದ್ದೇನೆ. ನಾನು ವಾರದಲ್ಲಿ ಐದರಿಂದ ಆರು ದಿನ ವರ್ಕೌಟ್ ಮಾಡುತ್ತೇನೆ. ಚಲನಶೀಲತೆ, ನಮ್ಯತೆ, ಯೋಗ ಮತ್ತು ಕೋರ್ಸ್, ಪ್ರವೃತ್ತಿಗಳು ನನ್ನ ದೈನಂದಿನ ದಿನಚರಿಯ ಒಂದು ಭಾಗವಾಗಿವೆ. ಕೆಲವು ದಿನಗಳಲ್ಲಿ ನಾನು ಈಜುತ್ತೇನೆ ಮತ್ತು ವಿವಿಧ ವ್ಯಾಯಾಮಗಳನ್ನು ಮಾಡುತ್ತೇನೆ. ತದನಂತರ ನಾನು ನನ್ನನ್ನು ಸಂತೋಷವಾಗಿ ಇರಿಸಲು ಒಂದು ಗಂಟೆಗಳವರೆಗೆ ನೃತ್ಯ ಮಾಡುತ್ತೇನೆ. ನಾನು ಪ್ರಯಾಣಿಸುತ್ತಿರುವಾಗ ಅಥವಾ ದೇಹ ದಂಡಿಸಲಹ ಬೇರೆ ಏನೂ ಲಭ್ಯವಿಲ್ಲದಿದ್ದರೆ ನಾನು ವಾಕ್ ಮಾಡುತ್ತೇನೆ. ನಾನು ಐದು ಸಾವಿರದಿಂದ ಏಳು ಸಾವಿರ ಹೆಜ್ಜೆಗಳವರೆಗೆ ವಾಕ್ ಮಾಡುತ್ತೇನೆ' ಎಂದು ತಮ್ಮ ದಿನಚರಿಯಲ್ಲಿ ಆರೋಗ್ಯದ ಕಾಳಜಿ ಮಾಡುವ ಕುರಿತು ತಿಳುಸುತ್ತಾರೆ

ವಾರಕ್ಕೆ ನಾಲ್ಕು ಬಾರಿ, ದಿನಕ್ಕೆ ಕೇವಲ 30 ನಿಮಿಷಗಳ ಕಾಲ ಆದ್ಯತೆಯ ಮೇರೆಗೆ ನಿಮ್ಮ ಬಗ್ಗೆ, ನಿಮ್ಮ ದೇಹದ ಬಗ್ಗೆ, ಆರೋಗ್ಯದ ಬಗ್ಗೆ ಗಮನ ಕೊಡಿ. ನೀವು ಬಲಶಾಲಿಯಾಗಿದ್ದಾಗ, ನಿಮ್ಮನ್ನು ತಡೆಯಲಾಗುವುದಿಲ್ಲ. ಆದ್ದರಿಂದ, ಆ ಮೊದಲ ಹೆಜ್ಜೆಯನ್ನು ತೆಗೆದುಕೊಳ್ಳಿ... ಎಂದು ನೀತಾ ಅವರು ದೇಶದ ಎಲ್ಲಾ ಮಹಿಳೆಯರಿಗೂ ಆರೋಗ್ಯ ಕಾಳಜಿ ಮಾಡುವಂತೆ ಕರೆ ನೀಡಿದ್ದಾರೆ.

# ಅಶ್ಲೀಲ ವಿಡಿಯೋ ಡೌನ್ಲೋಡ್ ಮಾಡುವವರಿಗೆ ಎಚ್ಚರ!

**ತಮಿಳುನಾಡು:** ರಾಜ್ಯ ಸರ್ಕಾರದ ಅಡಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯಲ್ಲಿ ಸ್ಥಿರತೆಯ ಕೊರತೆಯಿಂದಾಗಿ ಲೈಂಗಿಕ ಅಪರಾಧಗಳು ಹೆಚ್ಚುತ್ತಿವೆ ಎಂದು ಪ್ರತಿಪಕ್ಷಗಳು ಆರೋಪಿಸುತ್ತವೆ. ಹೀಗಾಗಿ ಲೈಂಗಿಕ ಅಪರಾಧಗಳನ್ನು ತಡೆಯಲು ತಮಿಳುನಾಡು ಸರ್ಕಾರ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ.

ಈ ಬಗ್ಗೆ ಸೈಬರ್ ಅಪರಾಧ ತಡೆ ಘಟಕದ ಪೊಲೀಸ್ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ. ಲೈಂಗಿಕ ಕಿರುಕುಳ, ಅಪಹರಣ ಮತ್ತು ಕಿರುಕುಳದಂತಹ ಅಪರಾಧಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ 43,000 ಜನರನ್ನು ಪೊಲೀಸ್ ಕಣ್ಗಾವಲಿನಲ್ಲಿ ಇರಿಸಲಾಗಿದೆ ಎಂದು ಅವರು ಹೇಳಿದ್ದಾರೆ.. ಅಲ್ಲದೆ, ವೆಬ್‌ಸೈಟ್‌ಗಳಿಂದ ಅಶ್ಲೀಲ ವೀಡಿಯೊಗಳು ಮತ್ತು ಚಿತ್ರಗಳನ್ನು ಡೌನ್‌ಲೋಡ್ ಮಾಡುವವರಿಗೂ ಪೊಲೀಸರು ಎಚ್ಚರಿಕೆ ನೀಡಿದ್ದಾರೆ.



ವಾಣಿಜ್ಯ ಉದ್ದೇಶಕ್ಕಾಗಿ ಅಶ್ಲೀಲ ವೀಡಿಯೊಗಳನ್ನು ಡೌನ್‌ಲೋಡ್ ಮಾಡಿ ಇತರರಿಗೆ ಕಳುಹಿಸಿದರೆ 10 ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ. ಅಶ್ಲೀಲ ವೀಡಿಯೊಗಳನ್ನು ಡೌನ್ ಲೋಡ್ ಮಾಡಿದ್ದಕ್ಕಾಗಿ ಇದುವರೆಗೆ 13,000 ಜನರಿಗೆ ಎಚ್ಚರಿಕೆ ನೀಡಲಾಗಿದೆ. ಸೈಬರ್ ಅಪರಾಧ ತಡೆ ವಿಭಾಗವು ವೆಬ್‌ಸೈಟ್‌ಗಳ ಮೇಲೆ ನಿರಂತರವಾಗಿ ನಿಗಾ ಇಡುತ್ತಿದ್ದು, ಜನರು ಎಚ್ಚರದಿಂದಿರಬೇಕು ಎಂದು ಪೊಲೀಸರು ತಿಳಿಸಿದ್ದಾರೆ.

## ಕಾಂಗ್ರೆಸ್‌ನಲ್ಲಿ ಎರಡು ಬಣಗಳಿವೆ ಪಕ್ಷದ ವೇದಿಕೆಯಲ್ಲೇ ರಾಹುಲ್ ಗಾಂಧಿ ಅಸಮಾಧಾನ

**ಅಹಮದಾಬಾದ್:** ಗುಜರಾತ್ ಕಾಂಗ್ರೆಸ್‌ನಲ್ಲಿ ಎರಡು ಬಣಗಳಿವೆ. ಒಂದು ಸಾರ್ವಜನಿಕರೊಂದಿಗೆ ಇದ್ದರೆ, ಇನ್ನೊಂದು ಸಾರ್ವಜನಿಕರಿಂದ ದೂರವಿರುತ್ತದೆ. ಕಾಂಗ್ರೆಸ್ ಪಕ್ಷವು 20-30 ಜನರನ್ನು ಹೊರಹಾಕಬೇಕಾಗಿದ್ದರೂ ಸಹ ಹಾಗೆ ಮಾಡಲು ಯಾವುದೇ ಹಿಂಜರಿಕೆ ಇರಬಾರದು. ಪಕ್ಷದಲ್ಲಿ ಹಲವು ಸಿಂಹಗಳಿವೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಅಹಮದಾಬಾದ್‌ನಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಿದ್ಧತೆ ನಡೆಸುತ್ತಿರುವ ಪಕ್ಷದ ಕಾರ್ಯಕರ್ತರು ಮತ್ತು ನಾಯಕರನ್ನು ಉದ್ದೇಶಿಸಿ ಮಾತನಾಡಿದ ಅವರು, ತಮ್ಮದೇ ಪಕ್ಷದ ನಾಯಕರ ವಿರುದ್ಧ ಅಸಮಾಧಾನ ಹೊರಹಾಕಿದರು.

ಗುಜರಾತ್ ಪ್ರದೇಶ ಕಾಂಗ್ರೆಸ್ ನಾಯಕರು ನಿರ್ದೇಶನ ನೀಡುವಲ್ಲಿ ವಿಫಲರಾಗಿದ್ದಾರೆ ಎಂಬುದನ್ನು ಒಪ್ಪಿಕೊಳ್ಳುವುದರಲ್ಲಿ ತಮಗೆ ಯಾವುದೇ ಸಮಸ್ಯೆ ಇಲ್ಲ. ಸ್ಥಳೀಯ ನಾಯಕರ ಹೃದಯದಲ್ಲಿ ಏನಿದೆ ಎಂಬುದನ್ನು ತಿಳಿದುಕೊಳ್ಳುವುದು ಮತ್ತು ಅರ್ಥಮಾಡಿಕೊಳ್ಳುವುದು ನನ್ನ ಗುರಿಯಾಗಿತ್ತು. ಈ ಸಂಭಾಷಣೆಯಲ್ಲಿ, ಸಂಘಟನೆ, ಗುಜರಾತ್ ರಾಜಕೀಯ ಮತ್ತು ಇಲ್ಲಿನ ಸರ್ಕಾರದ ಕಾರ್ಯವೈಖರಿಗೆ ಸಂಬಂಧಿಸಿದ ಹಲವು ವಿಷಯಗಳು ಬೆಳಕಿಗೆ ಬಂದವು ಎಂದರು. ಗುಜರಾತ್‌ನ ಕಾಂಗ್ರೆಸ್ ಸಂಘಟನೆಗಳಲ್ಲಿ ಹಲವು ವಿಭಜನೆಗಳಿವೆ. ಒಬ್ಬರು ಸಾರ್ವಜನಿಕರನ್ನು ಗೌರವಿಸುತ್ತಾರೆ, ಸಾರ್ವಜನಿಕ ಸಮಸ್ಯೆಗಳಿಗೆ ಧ್ವನಿ ಎತ್ತುತ್ತಾರೆ ಮತ್ತು ಕಾಂಗ್ರೆಸ್ ಪಕ್ಷದ ಸಿದ್ಧಾಂತವನ್ನು ಹೃದಯದಲ್ಲಿ ಇಟ್ಟುಕೊಂಡಿದ್ದಾರೆ. ಇನ್ನೊಂದು ಗುಂಪು ಸಾರ್ವಜನಿಕರನ್ನು ಗೌರವಿಸುವುದಿಲ್ಲ. ಈ ಎರಡು ರೀತಿಯ ಪಕ್ಷದ ನಾಯಕರನ್ನು ಬೇರ್ಪಡಿಸದ ಹೊರತು, ಇಲ್ಲಿಯ ಜನರು ಕಾಂಗ್ರೆಸ್ ಅನ್ನು ನಂಬಲು ಸಾಧ್ಯವಿಲ್ಲ ಎಂದು ಹೇಳಿದರು.



# ಮಣಿಪುರದಲ್ಲಿ ಮತ್ತೆ ಹಿಂಸಾಚಾರ: ಓರ್ವ ಸಾವು

**ಗುವಾಹಟಿ:** ಇಂಫಾಲ್ ಮತ್ತು ಗುಡ್ಡಗಾಡು ಜಿಲ್ಲೆಗಳ ನಡುವಿನ ಬಸ್ ಸೇವೆಗಳನ್ನು ಪುನರಾರಂಭಿಸುವುದನ್ನು ವಿರೋಧಿಸಿ ಕುಕಿ-ಝೋ ಬುಡಕಟ್ಟು ಸಂಘಟನೆಗಳು ವಿವಿಧ ಜಿಲ್ಲೆಗಳಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆ ಹಿಂಸಾರೂಪ ಪಡೆದಿದೆ. ಪ್ರತಿಭಟನೆ ವೇಳೆ ಉಂಟಾದ ಘರ್ಷಣೆಯಲ್ಲಿ ಓರ್ವ ಪ್ರತಿಭಟನಾಕಾರ ಸಾವನ್ನಪ್ಪಿದ್ದು, 27 ಭದ್ರತಾ ಸಿಬ್ಬಂದಿ ಸೇರಿದಂತೆ ಕನಿಷ್ಠ 43 ಜನರು ಗಾಯಗೊಂಡಿದ್ದಾರೆ. ರಾಜ್ಯ ಸಾಮಾನ್ಯ ಸ್ಥಿತಿಗೆ ಮರಳುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಅನಾನುಕೂಲತೆಗಳನ್ನು ನಿವಾರಿಸಲು ಮಣಿಪುರ ರಾಜ್ಯ ಸಾರಿಗೆ ನಿಗಮವು ಭದ್ರತಾ ಬೆಂಗಾವಲಿನಲ್ಲಿ ಬಸ್ ಸೇವೆಗಳನ್ನು ಪುನರಾರಂಭಿಸಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕಳೆದ 22 ತಿಂಗಳುಗಳಿಂದ ಜನಾಂಗೀಯ ಹಿಂಸಾಚಾರಕ್ಕೆ ಸಾಕ್ಷಿಯಾಗಿದ್ದ ಪ್ರಕ್ಷುಬ್ಧ ರಾಜ್ಯದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮುಕ್ತ ಸಂಚಾರಕ್ಕೆ ಅವಕಾಶ ಕಲ್ಪಿಸುವಂತೆ ಸೂಚನೆ ನೀಡಿದ ಒಂದು ವಾರದ ನಂತರ ಇದೀಗ ಮತ್ತೆ ಘರ್ಷಣೆ ಉಂಟಾಗಿದೆ. ಮಣಿಪುರದ ಕಾಂಗ್ಪೋಕ್ಪಿ ಜಿಲ್ಲೆಯಲ್ಲಿ ಶನಿವಾರ ರಾಜ್ಯ ಆಡಳಿತವು ಇಂಫಾಲದಿಂದ ಕಾಂಗ್ಪೋಕ್ಪಿ ಜಿಲ್ಲೆಯ ಮೂಲಕ ಸೇನಾಪತಿಗೆ ಮತ್ತು ಇಂಫಾಲದಿಂದ ಬಿಷ್ಣುಪುರದ ಮೂಲಕ ಚುರಚಂದ್ಪುರಕ್ಕೆ ಬಸ್ ಸೇವೆಗಳನ್ನು ಪುನರಾರಂಭಿಸಿದಾಗ ಹೊಸ ಹಿಂಸಾಚಾರ ಭುಗಿಲೆದ್ದಿದೆ ಎಂದು ಮೂಲಗಳು ತಿಳಿಸಿವೆ.



# 10 ಭಾರತೀಯ ಕಾರ್ಮಿಕರು ಇಸ್ರೇಲ್‌ಗೆ

**ನವದೆಹಲಿ:** ವೆಸ್ಟ್ ಬ್ಯಾಂಕ್‌ನಲ್ಲಿ ಕಾಣೆಯಾಗಿದ್ದ 10 ಮಂದಿ ಭಾರತೀಯರನ್ನು ಇಸ್ರೇಲ್ಗೆ ಸುರಕ್ಷಿತವಾಗಿ ಕರೆತರಲಾಗಿದೆ ಎಂದು ವಿದೇಶಾಂಗ ಇಲಾಖೆ ಸಚಿವಾಲಯ ತಿಳಿಸಿದೆ. ಈ ಕುರಿತು ಮಾಹಿತಿ ನೀಡಿರುವ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತೀಯರನ್ನು ಪತ್ತೆ ಹಚ್ಚಲು ಇಸ್ರೇಲ್ ಅಧಿಕಾರಿಗಳು ಪ್ರಯತ್ನಿಸಿದರು ಎಂದು ತಿಳಿಸಿದ್ದಾರೆ. ಇವರೆಲ್ಲಾ ವೆಸ್ಟ್ ಬ್ಯಾಂಕ್ನಲ್ಲಿ ಇದ್ದರು. ಅವರನ್ನು ಇಸ್ರೇಲ್ಗೆ ಕರೆತರಲಾಗಿದೆ. ಅವರು ವೆಸ್ಟ್ ಬ್ಯಾಂಕ್ಗೆ ಹೇಗೆ ಹೋದರು ಎಂಬ ಕುರಿತು ತನಿಖೆ ನಡೆಸಲಾಗುವುದು. ಇಸ್ರೇಲ್ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಇಸ್ರೇಲ್ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ಜೈಸ್ವಾಲ್ ಮಾಹಿತಿ ನೀಡಿದ್ದಾರೆ. ಭಾರತೀಯರ ಸುರಕ್ಷತೆ ಮತ್ತು ಯೋಗಕ್ಷೇಮಕ್ಕಾಗಿ ನಮ್ಮ ರಾಯಭಾರ ಕಚೇರಿ ಇಸ್ರೇಲಿ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ. ವೆಸ್ಟ್ ಬ್ಯಾಂಕ್ಗೆ ಹೋಗಿದ್ದ ಎಲ್ಲಾ 10 ಭಾರತೀಯರನ್ನು ಇಸ್ರೇಲ್ಗೆ ಕರೆತರಲಾಗಿದ್ದು, ನೋಡಿಕೊಳ್ಳಲಾಗುತ್ತಿದೆ ಎಂದರು.



# ಮೆಡಿಟರೇನಿಯನ್ ಕರಾವಳಿಯ ಅಲಾವೈಟ್‌ನಲ್ಲಿ ಸಿರಿಯನ್ ಪಡೆಗಳಿಂದ ಭಾರೀ ಘರ್ಷಣೆ: 500ಕ್ಕೂ ಹೆಚ್ಚು ನಾಗರಿಕರ ಹತ್ಯೆ



**ಬೈರುತ್:** ಇತ್ತೀಚಿನ ದಿನಗಳಲ್ಲಿ ಸರ್ಕಾರ ಮತ್ತು ಮಿತ್ರಪಕ್ಷಗಳು 500ಕ್ಕೂ ಹೆಚ್ಚು ಧಾರ್ಮಿಕ ಅಲ್ಪಸಂಖ್ಯಾತ ನಾಗರಿಕರನ್ನು ಕೊಂದಿವೆ ಎಂದು ಯುದ್ಧ ವೀಕ್ಷಕರು ವರದಿ ಮಾಡಿದ ನಂತರ, ಮೆಡಿಟರೇನಿಯನ್ ಕರಾವಳಿಯ ಅಲಾವೈಟ್ ಹೃದಯಭಾಗದಲ್ಲಿ ಸಿರಿಯನ್ ಭದ್ರತಾ ಪಡೆಗಳನ್ನು ಭಾರೀ ಪ್ರಮಾಣದಲ್ಲಿ ನಿಯೋಜಿಸಲಾಗಿದೆ.

ಕಳೆದ ಗುರುವಾರ ಸಿರಿಯಾದ ಹೊಸ ಅಧಿಕಾರಿಗಳು ಮತ್ತು ಪದಚ್ಯುತ ಅಧ್ಯಕ್ಷ ಬಶರ್ ಅಲ್-ಅಸ್ಸಾದ್‌ಗೆ ನಿಷ್ಠರಾಗಿರುವ ಬಂದೂಕುಧಾರಿಗಳ ನಡುವೆ ಮಾರಕ ಘರ್ಷಣೆಗಳು ಭುಗಿಲೆದ್ದ ನಂತರ ಇಲ್ಲಿನ ನಿವಾಸಿಗಳು ನಾಗರಿಕರ ಹತ್ಯೆಗಳ ಬಗ್ಗೆ ವರದಿ ಮಾಡುತ್ತಲೇ ಇದ್ದರು.

ಸಿರಿಯಾದ ಕರಾವಳಿ ಪ್ರದೇಶಗಳಲ್ಲಿ ಮತ್ತು ಲಟಾಕಿಯಾ ಪರ್ವತಗಳಲ್ಲಿ ಭದ್ರತಾ ಪಡೆಗಳು ಮತ್ತು ಮಿತ್ರಪಕ್ಷಗಳ ಗುಂಪುಗಳಿಂದ 532 ಅಲಾವೈಟ್ ನಾಗರಿಕರು ಕೊಲ್ಲಲ್ಪಟ್ಟರು ಎಂದು ಸಿರಿಯನ್ ಮಾನವ ಹಕ್ಕುಗಳ ವೀಕ್ಷಣಾಲಯ ವರದಿ ಮಾಡಿದೆ.

ಕಳೆದ ಗುರುವಾರದಿಂದ ಒಟ್ಟು 745 ಮಂದಿ ನಾಗರಿಕರು ಮೃತಪಟ್ಟಿದ್ದಾರೆ. ಹೋರಾಟದಲ್ಲಿ ಹೊಸ ಸರ್ಕಾರದ ಭದ್ರತಾ ಪಡೆಗಳ 93 ಸದಸ್ಯರು ಮತ್ತು 120 ಅಸ್ಸಾದ್ ಪರ ಹೋರಾಟಗಾರರು ಮೃತಪಟ್ಟಿದ್ದಾರೆ ಎಂದು ವೀಕ್ಷಣಾಲಯ ಅಂಕಿಅಂಶಗಳು ಹೇಳುತ್ತವೆ.

ಸುವ್ಯವಸ್ಥೆಯನ್ನು ಪುನಃಸ್ಥಾಪಿಸಲು ಭದ್ರತಾ ಪಡೆಗಳು ಲಟಾಕಿಯಾಕ್ಕೆ ಹಾಗೂ ದಕ್ಷಿಣಕ್ಕೆ ಜಬ್ಲೆಹ್ ಮತ್ತು ಬನಿಯಾಸ್ ಗೆ ನಿಯೋಜಿಸಲ್ಪಟ್ಟಿವೆ ಎಂದು ಅಧಿಕೃತ ಸನಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

# ಅರ್ಜೆಂಟೀನಾದಲ್ಲಿ ಭಾರಿ ಮಳೆ: ಹದಿಮೂರು ಮಂದಿ ಸಾವು

ಅರ್ಜೆಂಟೀನಾದ ಬಂದರು ನಗರ ಬಹಿಯಾ ಬ್ಲಾಂಕಾ ಕೆಲವೇ ಗಂಟೆಗಳಲ್ಲಿ ಒಂದು ವರ್ಷದ ಮೌಲ್ಯದ ಮಳೆಯಿಂದ ಹಾನಿಗೊಳಗಾಗಿದ್ದು, 13 ಜನರು ಸಾವನ್ನಪ್ಪಿದ್ದಾರೆ ಮತ್ತು ನೂರಾರು ಜನರನ್ನು ತಮ್ಮ ಮನೆಗಳಿಂದ ಓಡಿಸಿದ್ದಾರೆ ಎಂದು ಅಧಿಕಾರಿಗಳು ಶನಿವಾರ ತಿಳಿಸಿದ್ದಾರೆ.

ನಾಲ್ಕು ಮತ್ತು ಒಂದು ವರ್ಷದ ಇಬ್ಬರು ಬಾಲಕಿಯರು ಶುಕ್ರವಾರದ ಚಂಡಮಾರುತದಿಂದ ಪ್ರವಾಹದಲ್ಲಿ ಕೊಚ್ಚಿಹೋದ ನಂತರ ಕಾಣೆಯಾಗಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ತಿಳಿಸಿವೆ.

ಪ್ರವಾಹವು ಆಸ್ಪತ್ರೆಯ ಕೊಠಡಿಗಳನ್ನು ನೀರಿನಲ್ಲಿ ಮುಳುಗಿಸಿತು, ನೆರೆಹೊರೆಗಳನ್ನು ದ್ವೀಪಗಳಾಗಿ ಪರಿವರ್ತಿಸಿತು ಮತ್ತು ನಗರದ ಕೆಲವು ಭಾಗಗಳಿಗೆ ವಿದ್ಯುತ್ ಕಡಿತಗೊಳಿಸಿತು. ಬಹಿಯಾ ಬ್ಲಾಂಕಾ ನಾಶವಾಗಿದೆ ಎಂದು ರಾಷ್ಟ್ರೀಯ ಭದ್ರತಾ ಸಚಿವ ಪೆಟ್ರೀಷಿಯಾ ಬುಲ್ರಿಚ್ ಹೇಳಿದ್ದಾರೆ.

ಸಾವಿನ ಸಂಖ್ಯೆ ಶನಿವಾರ 13 ಕ್ಕೆ ಏರಿದೆ, ಇದು ಶುಕ್ರವಾರ 10 ರಿಂದ ಹೆಚ್ಚಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ರಾಜಧಾನಿ ಬ್ಯೂನಸ್ ಐರಿಸ್ನ ನೈಋತ್ಯಕ್ಕೆ 600 ಕಿಲೋಮೀಟರ್ (370 ಮೈಲಿ) ದೂರದಲ್ಲಿರುವ 350,000 ನಿವಾಸಿಗಳ ಈ ನಗರದಲ್ಲಿ ಹೆಚ್ಚಿನ ಸಾವುನೋವುಗಳು ಸಂಭವಿಸುವ ಸಾಧ್ಯತೆಯಿದೆ ಎಂದು ಮೇಯರ್ ಕಚೇರಿ ತಿಳಿಸಿದೆ.



ಕಾಣೆಯಾದ ಹುಡುಗಿಯರು ''ನೀರಿನಿಂದ ಕೊಚ್ಚಿಹೋಗಿರಬಹುದು'' ಎಂದು ಬುಲ್ರಿಚ್ ರೇಡಿಯೋ ಮಿತ್ರೆಗೆ ತಿಳಿಸಿದರು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಡಾಕ್ಯುಮೆಂಟರಿ ರೂಪದಲ್ಲಿ ಬರಲಿದೆ ಅನಾರೋಗ್ಯದ ವಿರುದ್ಧ ಶಿವಣ್ಣನ ಹೋರಾಟ

ಶಿವರಾಜ್ ಕುಮಾರ್ ಕಳೆದ ಮೂರು ನಾಲ್ಕು ತಿಂಗಳಿನಿಂದಲೂ ವಿಶ್ರಾಂತಿಯಲ್ಲಿದ್ದು, ಇದೀಗ ಚಿತ್ರೀಕರಣಕ್ಕೆ ಮರಳಿದ್ದಾರೆ. ಶಿವರಾಜ್ ಕುಮಾರ್ ಅವರು ಅನಾರೋಗ್ಯದ ವಿರುದ್ಧ ಕಳೆದ ಕೆಲ ತಿಂಗಳಿನಿಂದಲೂ ಹೋರಾಡುತ್ತಲೇ ಇದ್ದರು. ಇದೀಗ ಚಿಕಿತ್ಸೆ, ಶಸ್ತ್ರಚಿಕಿತ್ಸೆ, ವಿಶ್ರಾಂತಿ ಎಲ್ಲವನ್ನೂ ಮುಗಿಸಿ ಇದೀಗ ಸಿನಿಮಾ ಚಿತ್ರೀಕರಣಕ್ಕೆ ಮರಳಿದ್ದಾರೆ. ಚಿಕಿತ್ಸೆಗೆ ಹೋಗುವ ಮೊದಲು ಅನಾರೋಗ್ಯದ ಬಗ್ಗೆ ಹೆಚ್ಚಿಗೇನೂ ಮಾಧ್ಯಮಗಳ ಬಳಿ ಹೇಳಿಕೊಂಡಿರದಿದ್ದ ಶಿವರಾಜ್ ಕುಮಾರ್ ಇದೀಗ ಕೆಲ ಮಾಧ್ಯಮಗಳಿಗೆ ಸಂದರ್ಶನ ನೀಡಿ ಅನಾರೋಗ್ಯ ಮತ್ತು ಅದರಿಂದ ಚೇತರಿಕೆ, ಅನಾರೋಗ್ಯದ ವಿರುದ್ಧ ನಡೆದ ಹೋರಾಟದ ಕುರಿತು ಕೆಲ ಮಾಹಿತಿ ಹಂಚಿಕೊಂಡಿದ್ದಾರೆ. ಮಹತ್ವದ ಅಂಶವೆಂದರೆ ಶಿವರಾಜ್ ಕುಮಾರ್ ಅವರ ಈ ಹೋರಾಟ ಡಾಕ್ಯುಮೆಂಟರಿ ರೂಪದಲ್ಲಿ ಪ್ರೇಕ್ಷಕರ ಮುಂದೆ ಬರಲಿದೆ.

ಇತ್ತೀಚೆಗೆ ಮಾಧ್ಯಮವೊಂದಕ್ಕೆ ನೀಡಿರುವ ಸಂದರ್ಶನದಲ್ಲಿ ಈ ಬಗ್ಗೆ ಮಾತನಾಡಿರುವ ನಟ ಶಿವರಾಜ್ ಕುಮಾರ್ ಅವರು, ನನಗೆ ಚಿಕಿತ್ಸೆ ನೀಡಿದ ವೈದ್ಯರು ನೀಡಿರುವ ಐಡಿಯಾದಂತೆ ನನ್ನ




ಈ ಅನಾರೋಗ್ಯದ ವಿರುದ್ಧ ಹೋರಾಟವನ್ನು ಡಾಕ್ಯುಮೆಂಟರಿ ರೂಪದಲ್ಲಿ ಹೊರತರುವ ಆಲೋಚನೆ ಇದೆ ಎಂದಿದ್ದಾರೆ. ಶಿವರಾಜ್ ಕುಮಾರ್ ಅವರು ಅಮೆರಿಕದ ಫ್ಲೋರಿಡಾದಲ್ಲಿರುವ ಮಿಯಾಮಿ ಕ್ಯಾನ್ಸರ್ ಇನ್‌ಸ್ಟಿಟ್ಯೂಟ್‌ನಲ್ಲಿ ಚಿಕಿತ್ಸೆ ಪಡೆದರು. ತಮಿಳು ಮೂಲದ ವೈದ್ಯರೊಬ್ಬರು ಶಿವಣ್ಣನಿಗೆ ಚಿಕಿತ್ಸೆ ನೀಡಿದರು. ಅವರೇ ನೀಡಿರುವ ಸಲಹೆಯಂತೆ ಇದೀಗ ಅವರ ಕ್ಯಾನ್ಸರ್ ವಿರುದ್ಧದ ಹೋರಾಟವನ್ನು ಡಾಕ್ಯುಮೆಂಟರಿ ರೂಪದಲ್ಲಿ ಹೊರತರುವ ಆಲೋಚನೆ ಶಿವಣ್ಣ ಹಾಗೂ ಗೀತಕ್ಕನಿಗೆ ಮೂಡಿದೆ.

ಶಿವರಾಜ್ ಕುಮಾರ್ ಅವರು ಮೂತ್ರಕೋಶದ ಕ್ಯಾನ್ಸರ್‌ನಿಂದ ಬಳಲುತ್ತಿದ್ದರು. ಈ ಕ್ಯಾನ್ಸರ್ ಬಂದವರ ರಿಕವರಿ ಅಷ್ಟು ಸುಲಭವಲ್ಲ. ಅಲ್ಲದೆ ಕ್ಯಾನ್ಸರ್ ಎಂದೊಡನೆ ಎಷ್ಟೋ ಮಂದಿ ಹೆದರಿ ಆತ್ಮವಿಶ್ವಾಸವನ್ನೇ ಕಳೆದುಕೊಳ್ಳುತ್ತಾರೆ. ಈಗ ಶಿವಣ್ಣ ತಮ್ಮ ಕ್ಯಾನ್ಸರ್ ವಿರುದ್ಧದ ಹೋರಾಟವನ್ನು ಡಾಕ್ಯುಮೆಂಟರಿ ರೂಪದಲ್ಲಿ ಹೊರತರುವ ಮೂಲಕ ಕ್ಯಾನ್ಸರ್ ರೋಗಿಗಳಿಗೆ, ಕ್ಯಾನ್ಸರ್ ಕುರಿತು ತಪ್ಪು ಕಲ್ಪನೆ ಇರುವ ವ್ಯಕ್ತಿಗಳಿಗೆ ಜಾಗೃತಿ ಮೂಡಿಸಲು ಮತ್ತು ಸ್ಫೂರ್ತಿ ಮೂಡಿಸಲೆಂದು ಈ ಡಾಕ್ಯುಮೆಂಟರಿಯನ್ನು ಹೊರಗೆ ತರುತ್ತಿದ್ದಾರೆ.

ಕ್ಯಾನ್ಸರ್‌ನಿಂದ ಗುಣಮುಖರಾಗಿರುವ ನಟ ಶಿವರಾಜ್ ಕುಮಾರ್ ಇದೀಗ ಚಿತ್ರೀಕರಣಕ್ಕೆ ಮರಳಿದ್ದಾರೆ. ತಮ್ಮ 131ನೇ ಸಿನಿಮಾದ ಚಿತ್ರೀಕರಣವನ್ನು ಶಿವಣ್ಣ ಪ್ರಾರಂಭ ಮಾಡಿದ್ದಾರೆ. ಇದರ ಜೊತೆಗೆ ತೆಲುಗಿನ ರಾಮ್ ಚರಣ್ ಸಿನಿಮಾದಲ್ಲಿಯೂ ನಟಿಸಲು ರೆಡಿಯಾಗಿದ್ದು, ಇತ್ತೀಚೆಗಷ್ಟೆ ಲುಕ್ ಟೆಸ್ಟ್ ಮಾಡಿಸಿ ಲುಕ್ ಫೈನಲ್ ಮಾಡಿಕೊಂಡಿದ್ದಾರೆ. ಈ ಸಿನಿಮಾದಲ್ಲಿ ಬಾಲಿವುಡ್ ಬೆಡಗಿ ಜಾನ್ವಿ ಕಪೂರ್ ನಾಯಕಿಯಾಗಿ ನಟಿಸುತ್ತಿದ್ದು, ಸಿನಿಮಾವನ್ನು ಬುಚ್ಚಿಬಾಬು ಸನಾ ನಿರ್ದೇಶನ ಮಾಡುತ್ತಿದ್ದಾರೆ.

# ಸದ್ದಿಲ್ಲದೆ ಆರಂಭ ಆಯ್ತು 'ಡೆವಿಲ್' ಸಿನಿಮಾ ಶೂಟ್



ಎಲ್ಲವೂ ಅಂದುಕೊಂಡಂತೆ ನಡೆದಿದ್ದರೆ ನಟ ದರ್ಶನ್ ಅವರ ನಟನೆಯ 'ಡೆವಿಲ್' ಸಿನಿಮಾ 2024ರಲ್ಲೇ ರಿಲೀಸ್ ಆಗುತ್ತಿತ್ತು. ಆದರೆ, ಒಂದು ಹಂತದ ಶೂಟಿಂಗ್ ಪೂರ್ಣಗೊಳಿಸಿದ ತಂಡ ಸುಮ್ಮನೆ ಕೂರಬೇಕಾಯ್ತು. ಇದಕ್ಕೆ ಕಾರಣ ಆಗಿದ್ದು ರೇಣುಕಾಸ್ವಾಮಿ ಕೊಲೆ ಕೇಸ್. ಈ ಪ್ರಕರಣದಲ್ಲಿ ದರ್ಶನ್ ಅವರು ಜೈಲು ಸೇರಿದ್ದರಿಂದ ಚಿತ್ರದ ಶೂಟಿಂಗ್ ಸಂಪೂರ್ಣವಾಗಿ ನಿಂತೇ ಹೋಗಿತ್ತು. ಈಗ ಪ್ರಕಾಶ್ ವೀರ್ ನಿರ್ದೇಶನದ ಈ ಸಿನಿಮಾದ ಶೂಟಿಂಗ್ ಮತ್ತೆ ಆರಂಭ ಆಗಿದೆ. ಈ ವಿಚಾರ ಕೇಳಿ ದರ್ಶನ್ ಫ್ಯಾನ್ಸ್ ಖುಷಿಪಟ್ಟಿದ್ದಾರೆ.

'ಶ್ರೀ ಜೈ ಮಾತ ಕಂಬೈನ್ಸ್' ಬ್ಯಾನರ್ ಅಡಿಯಲ್ಲಿ 'ಡೆವಿಲ್' ಸಿನಿಮಾ ರೆಡಿ ಆಗುತ್ತಿದೆ. ಈ ಚಿತ್ರಕ್ಕೆ ಪ್ರಕಾಶ್ ವೀರ್ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ದರ್ಶನ್ ಈ ಚಿತ್ರಕ್ಕೆ ಹೀರೋ. ಚಿತ್ರದ ಎರಡನೇ ಹಂತದ ಚಿತ್ರೀಕರಣ ಬೆಂಗಳೂರಿನಲ್ಲಿ ಆರಂಭವಾಗಿದೆ. ಸಂಪೂರ್ಣ ಸಿದ್ಧತೆ ಮಾಡಿಕೊಂಡು ಶೂಟ್ ಆರಂಭಿಸಲಾಗಿದೆ.

## ದರ್ಶನ್ ಎಂಟ್ರಿಗೂ ಸಮಯ ನಿಗದಿ

**ದರ್ಶನ್ ಭಾಗಿ ಯಾವಾಗ?:** ನಟ ದರ್ಶನ್ ಅವರಿಗೆ ಬೆನ್ನು ನೋವು ಅತಿಯಾಗಿ ಕಾಡುತ್ತಿದೆ. ಆದಾಗ್ಯೂ, ದರ್ಶನ್ ಅವರು ಎರಡನೇ ಹಂತದ ಚಿತ್ರೀಕರಣದಲ್ಲಿ ಭಾಗಿ ಆಗಲಿದ್ದಾರೆ. ಮುಂದಿನ ವಾರದಿಂದ ಚಿತ್ರೀಕರಣದಲ್ಲಿ ದರ್ಶನ್ ಅವರು ಭಾಗಿಯಾಗಲಿದ್ದಾರೆ. ಅವರ ಆರೋಗ್ಯವನ್ನು ಪರಿಗಣಿಸಿ ಯಾವುದೇ ಆಕ್ಷನ್ ದೃಶ್ಯಗಳನ್ನು ಇಲ್ಲಿ ಶೂಟ್ ಮಾಡುತ್ತಿಲ್ಲ. ಕೇವಲ ಮಾತಿನ ಭಾಗದ ಚಿತ್ರೀಕರಣ ಮಾತ್ರ ನಡೆಯಲಿದೆ.

ದರ್ಶನ್ ಅವರಿಗೆ ಎದ್ದು ಓಡಾಡೋದು ಕಷ್ಟವಾಗಿದೆ. ಹೀಗಾಗಿ, ಅವರಿಗೆ ಫಿಸಿಯೋ ಥೆರೆಪಿ ಮಾಡಿಸಲಾಗುತ್ತಿದೆ. ಸದ್ಯದ ಮಟ್ಟಿಗೆ ಆಕ್ಷನ್ ದೃಶ್ಯ ಮಾಡಬಾರದು ಎಂದು ವೈದ್ಯರು ಸೂಚನೆ ನೀಡಿದ್ದಾರೆ. 'ಸಾಹಸ ಸನ್ನಿವೇಶಗಳ ಚಿತ್ರೀಕರಣವಾಗಲಿ ಅಥವಾ ಬೇರೆ ಯಾವುದೇ ರಿಸ್ಕ್ ಇರುವ ಸನ್ನಿವೇಶಗಳ ಚಿತ್ರೀಕರಣ ಈಗ ಮಾಡುವುದಿಲ್ಲ' ಎಂದು ನಿರ್ದೇಶಕ ಪ್ರಕಾಶ್ ವೀರ್ ತಿಳಿಸಿದ್ದಾರೆ.

**ಹೊರ ರಾಜ್ಯದಲ್ಲೂ ಶೂಟ್:** ಎರಡನೇ ಹಂತದ ಶೂಟ್ ಬೆಂಗಳೂರಿನ ಜೊತೆಗೆ ಮೈಸೂರು, ಹೈದರಾಬಾದ್ ಹಾಗೂ ರಾಜಸ್ಥಾನದಲ್ಲಿ ನಡೆಯಲಿದೆ. ದರ್ಶನ್ ಕೂಡ ಈ ಭಾಗಕ್ಕೆ ತೆರಳಲಿದ್ದಾರೆ. ದೇಶದ ಯಾವುದೇ ಭಾಗಕ್ಕೆ ಬೇಕಿದ್ದರೂ ಅವರು ಈಗ ತೆರಳಬಹುದಾಗಿದೆ.

ದರ್ಶನ್‌ಗೆ ಜೊತೆಯಾಗಿ ನಾಯಕಿ ರಚನಾ ರೈ ನಟಿಸುತ್ತಿದ್ದಾರೆ. ತುಳಸಿ, ಅಚ್ಯುತಕುಮಾರ್, ಮಹೇಶ್ ಮಂಜ್ರೇಕರ್, ಶ್ರೀನಿವಾಸ ಪ್ರಭು, ಶೋಭ್‌ರಾಜ್ ಮುಂತಾದ ಕಲಾವಿದರು ಎರಡನೇ ಹಂತದ ಚಿತ್ರೀಕರಣದಲ್ಲಿ ಭಾಗವಹಿಸಲಿದ್ದಾರೆ. ಸುಧಾಕರ್.ಎಸ್.ರಾಜ್ ಛಾಯಾಗ್ರಹಣ, ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆ, ಮೋಹನ್ ಬಿ ಕೆರೆ ಕಲಾ ನಿರ್ದೇಶನ ಹಾಗೂ ರಾಮ್-ಲಕ್ಷ್ಮಣ್ ಸಾಹಸ ನಿರ್ದೇಶನ ಚಿತ್ರಕ್ಕೆ ಇದೆ.



# ರಾಧಿಕಾ ಪಂಡಿತ್ ಜನ್ಮದಿನವನ್ನು ಅದ್ದೂರಿಯಾಗಿ ಆಚರಿಸಿದ ಯಶ್



ನಟಿ ರಾಧಿಕಾ ಪಂಡಿತ್ ಅವರು ಮಾರ್ಚ್ 7ರಂದು ಬರ್ತ್‌ಡೇ ಆಚರಿಸಿಕೊಂಡರು. ಅವರಿಗೆ ಸೋಶಿಯಲ್ ಮೀಡಿಯಾದಲ್ಲಿ ಶುಭಾಶಯಗಳ ಮಹಾಪೂರವೇ ಹರಿದು ಬಂದಿದೆ. ಈ ಮೊದಲು ಯಶ್ ಬರ್ತ್‌ಡೇನ ರಾಧಿಕಾ ಪಂಡಿತ್ ಅವರು ಗೋವಾದ ಬೀಚ್ ಪಕ್ಕ ಆಚರಿಸಿದ್ದರು. ಅದೇ ರೀತಿ ಯಶ್ ಅವರು ಪತ್ನಿ ಬರ್ತ್‌ಡೇನ ಸೆಲೆಬ್ರೇಟ್ ಮಾಡಿದ್ದಾರೆ. ಈ ಫೋಟೋ ಹಾಗೂ ವಿಡಿಯೋಗಳು ವೈರಲ್ ಆಗಿ ಗಮನ ಸೆಳೆದಿವೆ. ರಾಧಿಕಾ ಹಾಗೂ ಯಶ್ ಜೋಡಿಯನ್ನು ನೋಡಿ ಫ್ಯಾನ್ಸ್ ಸಂಭ್ರಮಿಸಿದ್ದಾರೆ.

ರಾಧಿಕಾ ಹಾಗೂ ಯಶ್ ಅವರು ಪ್ರೀತಿಸಿ ಮದುವೆ ಆದವರು. ಧಾರಾವಾಹಿಯಲ್ಲಿ ನಟಿಸುತ್ತಿದ್ದ ಕಾಲದಿಂದಲೇ ಇದ್ದ ಪರಿಚಯ ವರ್ಷಗಳು ಕಳೆದಂತೆ ಪ್ರೀತಿಗೆ ತಿರುಗಿತು. ಇಬ್ಬರೂ ಆ ಬಳಿಕ ಮದುವೆ ಆಗುವ ನಿರ್ಧಾರ ತೆಗೆದುಕೊಂಡು. ಕಳೆದ 9 ವರ್ಷಗಳಿಂದ ಇವರು ಹಾಯಾಗಿ ಸಂಸಾರ ನಡೆಸುಕೊಂಡು ಬರುತ್ತಿದ್ದಾರೆ. ಈ ದಂಪತಿಗೆ ಇಬ್ಬರು ಮಕ್ಕಳು ಕೂಡ ಇದ್ದಾರೆ. ಈಗ ರಾಧಿಕಾ ಜನ್ಮದಿನದ ಫೋಟೋ ವೈರಲ್ ಆಗಿದೆ.



ರಾಧಿಕಾ ಪಂಡಿತ್ ಅವರು ಚಿತ್ರರಂಗದಿಂದ ದೂರವೇ ಇದ್ದಾರೆ. ವಿವಾಹದ ಬಳಿಕ ಅವರು ನಟನೆಯಲ್ಲಿ ಅಷ್ಟಾಗಿ ಆಕ್ಟೀವ್ ಆಗಿಲ್ಲ. ಅವರು ಮತ್ತೆ ಸಿನಿಮಾಗಳನ್ನು ಮಾಡಲಿ ಎಂದು ಫ್ಯಾನ್ಸ್ ಬಯಸುತ್ತಾ ಇದ್ದಾರೆ. ಆದರೆ, ಸದ್ಯಕ್ಕಂತೂ ಅದು ನೆರವೇರುವುದು ಅನುಮಾನವೇ.

ಯಶ್ ಸಿನಿಮಾ ವಿಚಾರಕ್ಕೆ ಬರೋದಾದರೆ 'ಟಾಕ್ಸಿಕ್' ಸಿನಿಮಾ ಶೂಟ್‌ನಲ್ಲಿ ಬ್ಯುಸಿ ಇದ್ದಾರೆ. 'ರಾಮಾಯಣ' ಸಿನಿಮಾದಲ್ಲಿ ಯಶ್ ರಾವಣನ ಪಾತ್ರ ಮಾಡುತ್ತಿದ್ದಾರೆ. ಈ ಚಿತ್ರಕ್ಕೆ ಅವರು ನಿರ್ಮಾಪಕ ಕೂಡ ಹೌದು.

# ಚಾಂಪಿಯನ್ಸ್ ಪಟ್ಟಕ್ಕಾಗಿ ದುಬೈನಲ್ಲಿ ಗುದ್ದಾಟ

## ಟ್ರೋಫಿ ಗೆದ್ದು ಇತಿಹಾಸ ನಿರ್ಮಿಸಲು ಟೀಂ ಇಂಡಿಯಾ ಸನ್ನದ್ಧ

**ದುಬೈ:** ಹೈವೋಲ್ಟೇಜ್ ಪಂದ್ಯಕ್ಕೆ ಕೌಂಟ್ ಡೌನ್ ಶುರುವಾಗಿದೆ. ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಫೈನಲ್‌ನಲ್ಲಿಂದು ಭಾರತ ಪಡೆ ನ್ಯೂಜಿಲೆಂಡ್ ತಂಡವನ್ನ ಇಂದು ಎದುರಿಸಲಿದೆ. 25 ವರ್ಷಗಳ ಬಳಿಕ ಎರಡು ತಂಡಗಳು ಫೈನಲ್ ನಲ್ಲಿ ಮುಖಾಮುಖಿಯಾಗುತ್ತಿದ್ದು, ವಿಶ್ವ ಕ್ರಿಕೆಟ್ ಚಾಂಪಿಯನ್‌ಶಿಪ್‌ಗಾಗಿ ಎರಡು ತಂಡಗಳು ಸೆಣಸಾಡಲಿವೆ. ಇಡೀ ವಿಶ್ವದ ಚಿತ್ತವೇ ಇವತ್ತು ದುಬೈನತ್ತ ನೆಟ್ಟಿದೆ. ಚಾಂಪಿಯನ್ಸ್ ಪಟ್ಟಕ್ಕಾಗಿ ಇಂದು ದುಬೈ ರಣಾಂಗಣದಲ್ಲಿ ಮಹಾಕದನವೇ ನಡೆಯಲಿದೆ. ಒಂದೆಡೆ ಸೋಲಿಗೆ ಪ್ರತೀಕಾರವಾದರೆ, ಮತ್ತೊಂದೆಡೆ 12 ವರ್ಷಗಳ ಬಳಿಕ ಚಾಂಪಿಯನ್ ಪಟ್ಟಕ್ಕೇರಲು ಟೀ ಇಂಡಿಯಾ ಸನ್ನದ್ಧವಾಗಿದೆ.

ಬರೋಬ್ಬರಿ 25 ವರ್ಷಗಳ ಬಳಿಕ ಸೀಮಿತ ಓವರ್‌ಗಳ ಐಸಿಸಿ ಟೂರ್ನಿಯ ಫೈನಲ್ ಹಣಾಹಣಿಯಲ್ಲಿ ಭಾರತ ಹಾಗೂ ನ್ಯೂಜಿಲೆಂಡ್ ಮುಖಾಮುಖಿಯಾಗ್ತಿವೆ. ಎರಡು ಬಲಿಷ್ಠ ಪಡೆಗಳ ಗುರಿ ಒಂದೇ ಅದು ಚಾಂಪಿಯನ್ಸ್ ಪಟ್ಟ. ಗೆದ್ದು ಇತಿಹಾಸ ನಿರ್ಮಾಣಕ್ಕೆ ಎರಡು ತಂಡಗಳು ತುದಿಗಾಲಲ್ಲಿ ನಿಂತಿವೆ.

ಸೆಮಿಫೈನಲ್‌ನಲ್ಲಿ ಒಂದು ಕಡೆ ನ್ಯೂಜಿಲೆಂಡ್ ತಂಡವು ದಕ್ಷಿಣ ಆಫ್ರಿಕಾ ಎದುರು ಅಧಿಕಾರಯುತ ಗೆಲುವು ಸಾಧಿಸಿ ಫೈನಲ್‌ಗೆ ಲಗ್ಗೆಯಿಟ್ಟರೆ, ಮತ್ತೊಂದು ಕಡೆ ಟೀಂ ಇಂಡಿಯಾ ದುಬೈನಲ್ಲಿ ನಡೆದ ಪಂದ್ಯದಲ್ಲಿ



ಆಸ್ಟ್ರೇಲಿಯಾ ಎದುರು 4 ವಿಕೆಟ್ ರೋಚಕ ಗೆಲುವು ಸಾಧಿಸಿದೆ. ಈ ಗೆಲುವು ಎರಡು ತಂಡಗಳ ಮನೋಬಲ ಹೆಚ್ಚಿಸಿರೋದು ಸುಳ್ಳಲ್ಲ. ಇಂದಿನ ಪಂದ್ಯದಲ್ಲಿ ಭಾರತವೇ ಗೆಲ್ಲುವ ಫೇವರಿಟ್. ಇಡೀ ಟೂರ್ನಿಯನ್ನ ಒಂದೇ ಮೈದಾನದಲ್ಲಿ ಆಡಿರುವ ಭಾರತ ತಂಡಕ್ಕೆ ಪಿಚ್ ಹೆಚ್ಚು ಅನುಕೂಲವಾಗುವ ಸಾಧ್ಯತೆ ಇದೆ. ಜೊತೆಗೆ ಲೀಗ್ ಹಂತದಲ್ಲಿ ಇದೇ ಮೈದಾನದಲ್ಲಿ ಟೀಂ ಇಂಡಿಯಾ ನ್ಯೂಜಿಲೆಂಡ್ ತಂಡವನ್ನ 44 ರನ್‌ಗಳಿಂದ ಮಣಿಸಿತ್ತು. ಸದ್ಯ ಭಾರತ ತಂಡದ ಎಲ್ಲಾ ವಿಭಾಗವು ಅದ್ಭುತ ಪ್ರದರ್ಶನ ತೋರುತ್ತಿದೆ.

ಬ್ಯಾಟಿಂಗ್ ವಿಭಾಗದಲ್ಲಿ ಕಳೆದ ಪಂದ್ಯದಲ್ಲಿ ಮಿಂಚಿದ್ದ ಕೊಹ್ಲಿ, ಶ್ರೇಯಸ್ ಅಯ್ಯರ್, ಹಾರ್ದಿಕ್ ಪಾಂಡ್ಯ, ಕೆ.ಎಲ್.ರಾಹುಲ್ ಭಾರತ ತಂಡದ ಬ್ಯಾಟಿಂಗ್ ಬೆನ್ನೆಲುಬು. ಕಳೆದ ಪಂದ್ಯದಲ್ಲಿ ಲಯ ಕಳೆದುಕೊಂಡಿದ್ದ ರೋಹಿತ್ ಶರ್ಮಾ ಮತ್ತು ಗಿಲ್ ಕ್ಲಿಕ್ ಆದರೆ, ಕಿವೀಸ್ ಪಡೆ ಬೌಲರ್‌ಗಳ ಬೆಂಡೆತ್ತಬಹುದು. ಇನ್ನೂ ಬೌಲಿಂಗ್ ವಿಭಾಗಕ್ಕೆ ಬರುವುದಾದರೆ, ಪಿಚ್ ಕೊಂಚ ಸ್ಪಿನ್ನರ್ ಸ್ನೇಹಿ. ಅದೇ ಕಾರಣಕ್ಕೆ ಆಸ್ಟ್ರೇಲಿಯಾ ವಿರುದ್ಧದ ಸೆಮಿಫೈನಲ್ಸ್‌ನಲ್ಲಿ ಇಬ್ಬರು ಫಾಸ್ಟ್ ಬೌಲರ್ ಜೊತೆ ನಾಲ್ವರು ಸ್ಪಿನ್ನರ್ ಗಳು ಕಣಕ್ಕಿಳಿದಿದ್ದರು. ಇಂದು ಕೂಡ ಅದೇ ಬೌಲಿಂಗ್ ಪಡೆ ಕಣಕ್ಕಿಳಿಯುವ ಸಾಧ್ಯತೆ ಇದೆ. ಸದ್ಯ ಶಮಿ, ಮಿಸ್ಟ್ರಿ ಸ್ಪಿನ್ನರ್ ವರುಣ್ ಚಕ್ರವರ್ತಿ ಭರ್ಜರಿ ಫಾರ್ಮ್‌ನಲ್ಲಿದ್ದು, ಕಿವೀಸ್‌ಗೆ ತಲೆನೋವಾಗಬಹುದು. ನ್ಯೂಜಿಲೆಂಡ್ ಕೂಡ ಕಡಿಮೆ ಇಲ್ಲ. ಸೆಮಿಸ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಭರ್ಜರಿ ಜಯ ಸಾಧಿಸಿತ್ತು. ಬ್ಯಾಟಿಂಗ್‌ನಲ್ಲಿ ರಚಿನ್ ರವೀಂದ್ರ, ಕಾನ್ವೆ, ಕೇನ್ ವಿಲಿಯಮ್ಸ್, ಮಿಚೆಲ್ ಕೊಂಚ ಕಾಡಬಹುದು.

**ಉಭಯ ತಂಡಗಳ ಸಮಬಲ:** ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತ-ನ್ಯೂಜಿಲೆಂಡ್ 2 ಪಂದ್ಯಗಳಾಡಿದ್ದು, ಸಮಬಲ ಸಾಧಿಸಿವೆ. ಇಂದಿನ ಪಂದ್ಯ ಗೆದ್ದವರು ಮುನ್ನಡೆ ಸಾಧಿಸಲಿದ್ದಾರೆ.

ಕೊನೆಯ ಪಂದ್ಯ ಗೆದ್ದು ಭಾರತ ತಂಡ ದಾಖಲೆ ಬರೆಯುವ ತವಕದಲ್ಲಿದೆ. ಭಾರತೀಯ ಕಾಲಮಾನ ಪ್ರಕಾರ ಮಧ್ಯಾಹ್ನ 2:30ಕ್ಕೆ ಪಂದ್ಯ ಆರಂಭವಾಗಲಿದ್ದು, ಟಾಸ್ ಕೂಡ ಪ್ರಮುಖ ಪಾತ್ರ ವಹಿಸಲಿದೆ. ಭಾರತ 3ನೇ ಬಾರಿ ಕಪ್ ಗೆಲ್ಲಲಿ ಅಂತ ಅಭಿಮಾನಿಗಳು ಶುಭಹಾರೈಸುತ್ತಿದ್ದಾರೆ.

## ವಕ್ಫ್ ಅಕ್ರಮದಲ್ಲಿ ಹಾಲಿ, ಮಾಜಿ ಸಚಿವರೂ ಶಾಮೀಲು

# ದಾಖಲೆ ಇದೆ ಎಂದ ಲೆಹರ್ ಸಿಂಗ್

**ಬೆಂಗಳೂರು:** ವಕ್ಫ್ ಅಕ್ರಮದಲ್ಲಿ ಹಾಲಿ, ಮಾಜಿ ಸಚಿವರೂ ಶಾಮೀಲಾಗಿದ್ದಾರೆ ಎಂದು ಬಿಜೆಪಿ ರಾಜ್ಯಸಭಾ ಸದಸ್ಯ ಲೇಹರ್ ಸಿಂಗ್ ಸಿರೋಯಾ ಗಂಭೀರ ಆರೋಪಮ ಮಾಡಿದ್ದಾರೆ. ಇದಕ್ಕೆ ಸಂಬಂಧಿಸಿದ ದಾಖಲೆಗಳೂ ಇವೆ ಎಂದು ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ತಂದಿರುವ ದಾಖಲೆಗಳು ರಾಜ್ಯ ಸರ್ಕಾರ ಲೋಕಾಯುಕ್ತಕ್ಕೆ ಕೊಟ್ಟಿರುವ ದಾಖಲೆಗಳು. ಒಟ್ಟು 40 ಸಾವಿರ ಪುಟಗಳ ದಾಖಲೆ ಇದೆ. ವಕ್ಫ್ ಆಸ್ತಿಗಳ ತನಿಖೆಗೆ ಸರ್ಕಾರವು ಜಸ್ಟೀಸ್ ಎನ್. ಆನಂದ್ ಸಮಿತಿ ರಚಿಸಿತ್ತು. ಜಸ್ಟೀಸ್ ಆನಂದ್ ಎಲ್ಲಾ ಡಿಸಿಗಳಿಗೆ ಪತ್ರ ಬರೆದಿದ್ದರು. ಡಿಸಿಗಳು ಜಸ್ಟೀಸ್ ಆನಂದ್ ಸಮಿತಿಗೆ ಕೊಟ್ಟಿರುವ ಮಾಹಿತಿ ಇದು ಎಂದು ಹೇಳಿದ್ದಾರೆ.

ಪ್ರತಿ ಜಿಲ್ಲೆಗಳಲ್ಲಿ ಯಾವ್ಯಾವ ರೀತಿ ಹಗರಣ ಆಗಿದೆ ಎಂಬುದು ಈ ದಾಖಲೆಗಳಲ್ಲಿ ಇದೆ. ಬಹಳ ದೊಡ್ಡ ದೊಡ್ಡ ರಾಜಕಾರಣಿಗಳ ಹೆಸರು ಕೂಡ ಈ ದಾಖಲೆಗಳಲ್ಲಿದೆ. ಹಾಲಿ ಸಚಿವರು, ಮಾಜಿ ಸಚಿವರ ಹೆಸರುಗಳು ಕೂಡಾ ಈ ದಾಖಲೆಗಳಲ್ಲಿದೆ. ನಾನು ಯಾವುದೇ ರಾಜಕಾರಣಿಗಳ ಹೆಸರು ಬಹಿರಂಗಪಡಿಸುವುದಿಲ್ಲ ಎಂದು ಲೆಹರ್ ಸಿಂಗ್ ಹೇಳಿದ್ದಾರೆ.

**ದಾಖಲೆಗಳನ್ನಿಟ್ಟುಕೊಂಡು ಸುಮ್ಮನೆ ಕುಳಿತ ಸರ್ಕಾರ: ಸಿಂಗ್:** ದಾಖಲೆಗಳನ್ನು ಆಧರಿಸಿ ಜಸ್ಟೀಸ್ ಆನಂದ್



50 ಪುಟಗಳ ವರದಿ ತಯಾರಿಸಿದ್ದರು. ರಾಜ್ಯ ಸರ್ಕಾರ ಈ ದಾಖಲೆಗಳನ್ನು ಇಟ್ಟುಕೊಂಡು ಸುಮ್ಮನೆ ಕುಳಿತಿದೆ. ಇಷ್ಟು ದಾಖಲೆಗಳನ್ನು ಅಧ್ಯಯನ ಮಾಡಲು ನನ್ನಿಂದ ಸಾಧ್ಯವಿಲ್ಲ. ಈ ದಾಖಲೆಗಳನ್ನು ಸೋಮವಾರ ನಾನು ದೆಹಲಿಗೆ ತೆಗೆದುಕೊಂಡು ಹೋಗುತ್ತೇನೆ. ಕೇಂದ್ರ ಕಾನೂನು ಸಚಿವರಿಗೆ ಮತ್ತು ವಕ್ಫ್ ಆಸ್ತಿ ಕುರಿತ ಜೆಪಿಸಿಗೆ ದಾಖಲೆಗಳನ್ನು ಹಸ್ತಾಂತರ ಮಾಡುತ್ತೇನೆ ಎಂದು ಅವರು ಹೇಳಿದ್ದಾರೆ.

**ಮಾನ ಮರ್ಯಾದಿ ಇದ್ದರೆ ನೋಟಿಸ್ ನೀಡಬೇಕಿತ್ತು:** ಸರ್ಕಾರಕ್ಕೆ ಮಾನ ಮರ್ಯಾದೆ ಇದ್ದಿದ್ದರೆ, ಮುಸ್ಲಿಮರ ಬಗ್ಗೆ ಕಳಕಳಿ ಇದ್ದಿದ್ದರೆ ಆಸ್ತಿ ಕಬಳಿಸಿದವರಿಗೆ ನೋಟಿಸ್ ಕೊಡಬೇಕಿತ್ತು. ರಾಜ್ಯ ಸರ್ಕಾರಕ್ಕೆ ಧೈರ್ಯ ಇದ್ದರೆ ಜಸ್ಟೀಸ್ ಆನಂದ್ ಸಮಿತಿ ವರದಿಯನ್ನು ಸದನದಲ್ಲಿ ಮಂಡಿಸಬೇಕು. ಈ ಬಗ್ಗೆ ಒತ್ತಡ ಹಾಕುವಂತೆ ನಾನು ವಿಪಕ್ಷ ನಾಯಕರಿಗೂ ಮನವಿ ಮಾಡುತ್ತೇನೆ ಎಂದು ಲೆಹರ್ ಸಿಂಗ್ ಹೇಳಿದರು.

ನಮ್ಮ ಶಾಸಕರು ಸದನದಲ್ಲಿ ವಿಷಯ ಎತ್ತಲಿ ಎಂದು ನಾನು ಆಗ್ರಹಿಸುತ್ತೇನೆ. ಕಲಬುರಗಿಯಿಂದ ಕಳುಹಿಸಿರುವ ದಾಖಲೆಗಳಲ್ಲಿ ಅಲ್ಲಿನ ಡಿಸಿ ಆಗಿದ್ದ ರಜನೀಶ್ ಗೋಯೆಲ್ ಅವರ ಸಹಿ ಇದೆ. ಕೆಲವು ದಾಖಲೆಗಳು ಮಿಸ್ಸಿಂಗ್ ಎಂದು ವರದಿ ಕೊಟ್ಟಿದ್ದಾರೆ. ಇದು ಕ್ರಿಮಿನಲ್ ಕೇಸ್ ಆಗಬೇಕು, ರಾಜ್ಯಪಾಲರು ಈ ಬಗ್ಗೆ ಗಮನ ಹರಿಸಬೇಕು. ಕಾಂಗ್ರೆಸ್ ಅನ್ನು ಪೂರ್ತಿ ನಾಶ ಮಾಡಿ ಹೋಗೋಣ ಎಂದು ಸಿಎಂ ಸಿದ್ದರಾಮಯ್ಯ ಸಾಹೇಬರ ಮನಸ್ಸಿನಲ್ಲಿ ಬಂದು ಬಿಟ್ಟಿದೆ ಎಂದು ಅನ್ನಿಸುತ್ತದೆ ಎಂದು ಲೆಹರ್ ಸಿಂಗ್ ಆಕ್ರೋಶ ವ್ಯಕ್ತಪಡಿಸಿದರು.

ದಯವಿಟ್ಟು ಟೋಪಿ ಬಿಡಬೇಡಿ ಎಂದು ಮುಸ್ಲಿಮರಲ್ಲಿ ಮನವಿ ಮಾಡುತ್ತೇನೆ. ಕಾಂಗ್ರೆಸ್ ನಿಮಗೆ ಬಹಳ ಕಾಲದಿಂದ ಟೋಪಿ ಹಾಕುತ್ತಲೇ ಬಂದಿದೆ. ಸೋನಿಯಾ ಗಾಂಧಿ, ರಾಹುಲ್ ಗಾಂಧಿಗೆ ಕರ್ನಾಟಕ ಬಗ್ಗೆ ಕಾಳಜಿ ಇದ್ದರೆ ಆನಂದ್ ಸಮಿತಿ ವರದಿಯ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಲಿ ಎಂದು ಅವರು ಆಗ್ರಹಿಸಿದ್ದಾರೆ.

# ಕೊನೆಯಲ್ಲಿ ಸ್ನೇಹ್ ರಾಣಾ ಹೋರಾಟ ವ್ಯರ್ಥ ವಿರೋಚಿತ ಸೋಲಿನೊಂದಿಗೆ ಆರ್‌ಸಿಬಿ ಮನೆಗೆ

**ಲಕ್ನೋ:** ಕೊನೆಯಲ್ಲಿ ಸ್ನೇಹ್ ರಾಣಾ ಭರ್ಜರಿ ಸಿಕ್ಸರ್, ಬೌಂಡರಿ ಆಟದ ಹೊರತಾಗಿಯೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಹಿಳಾ ತಂಡ ಯುಪಿ ವಾರಿಯರ್ಸ್ ವಿರುದ್ಧ 12 ರನ್‌ಗಳ ವಿರೋಚಿತ ಸೋಲು ಕಂಡಿದೆ. ಈ ಮೂಲಕ ಡಬ್ಲ್ಯುಪಿಎಲ್ ಪ್ಲೇ ಆಫ್ ರೇಸ್‌ನಿಂದ ಹೊರಬಿದ್ದಿದೆ. ಮಾರ್ಚ್ 11 ರಂದು ಮುಂಬೈ ಇಂಡಿಯನ್ಸ್ ವಿರುದ್ಧ ಬಾಕಿ ಇರುವ ಒಂದು ಪಂದ್ಯವನ್ನಾಡಿ 2025ರ ಮಹಿಳಾ ಪ್ರೀಮಿಯರ್ ಲೀಗ್ ಅಭಿಯಾನಕ್ಕೆ ವಿದಾಯ ಹೇಳಲಿದೆ.

ಕೊನೆಯ 12 ಎಸೆತಗಳಲ್ಲಿ ಆರ್‌ಸಿಬಿ ಗೆಲುವಿಗೆ 42 ರನ್‌ಗಳ ಅಗತ್ಯವಿತ್ತು. ಈ ವೇಳೆ ಕ್ರೀಸ್‌ನಲ್ಲಿದ್ದ ಸ್ನೇಹ್‌ರಾಣಾ ನಿರೀಕ್ಷೆಗೂ ಮೀರಿದ ಬ್ಯಾಟಿಂಗ್ ಪ್ರದರ್ಶಿಸಿದರು. ದೀಪ್ತಿ ಶರ್ಮಾ ಅವರ ಬೌಲಿಂಗ್ ಗೆ ಒಂದೇ ಓವರ್‌ನಲ್ಲಿ 28 ರನ್ (1, 4, 6, 6, 5ಟಿಫ, 6) ರನ್ ಸಿಡಿಸಿದರು. ಆದ್ರೆ 19ನೇ ಓವರ್‌ನ ಕೊನೇ ಎಸೆತದಲ್ಲಿ ಸಿಕ್ಸರ್ ಸಿಡಿಸಲು ಯತ್ನಿಸಿ ಕ್ಯಾಚ್ ನೀಡಿದರು. ಅಲ್ಲಿಯವರೆಗೂ ಗೆಲುವಿನ ಕನಸು ಕಂಡಿದ್ದ ಆರ್‌ಸಿಬಿ ಆಸೆಗೆ ತಣ್ಣೀರು ಎರಚಿದಂತಾಯ್ತು.



ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ್ದ ಯುಪಿ ತಂಡ 5 ವಿಕೆಟ್ ನಷ್ಟಕ್ಕೆ 225 ರನ್ ಗಳಿಸಿತ್ತು. ಬೃಹತ್ ಮೊತ್ತದ ಗುರಿ ಬೆನ್ನತ್ತಿದ್ದ ಆರ್ ಸಿಬಿ 19.3 ಓವರ್‌ಗಳಲ್ಲಿ 123ರನ್ ಗಳಿಗೆ ಆಲೌಟ್ ಆಗಿ ಸೋಲೊಪ್ಪಿಕೊಂಡಿತು. ಆರಂಭದಿಂದಲೇ ಸ್ಫೋಟಕ ಬ್ಯಾಟಿಂಗ್ ಮಾಡಲು ಆರಂಭಿಸಿದ ಆರ್ ಸಿಬಿ ಒಂದೆಡೆ ವಿಕೆಟ್ ಕಳೆದುಕೊಳ್ಳುತ್ತಾ ಸಾಗಿತು. ಆದ್ರೆ, ನಿರ್ಣಾಯಕ ಪಂದ್ಯದಲ್ಲಿ ನಾಯಕಿ ಸ್ಮೃತಿ ಮಂಧಾನ, ಎಲ್ಲಿಸ್ ಪೆರ್ರಿ ಅವರ ಬ್ಯಾಟಿಂಗ್ ವೈಫಲ್ಯಕ್ಕೆ ತಂಡ ಬೆಲೆ ತೆರಬೇಕಾಯಿತು.

**ರಿಚಾ, ರಾಣಾ ಹೋರಾಟ ವ್ಯರ್ಥ:** ಒಂದೆಡೆ ವಿಕೆಟ್ ಕಳೆದುಕೊಂಡಿದ್ದ ಆರ್‌ಸಿಬಿಗೆ ರಿಚಾ ಘೋಷ್ ಬ್ಯಾಟಿಂಗ್‌ನಲ್ಲಿ ಬಲ ತುಂಬಿದ್ದರು. ಕೇವಲ 33 ಎಸೆತಗಳಲ್ಲಿ 69 ರನ್ (6 ಬೌಂಡರಿ, 5 ಸಿಕ್ಸ್) ಗಳಿಸಿ ಔಟಾದರು. ಇದರೊಂದಿಗೆ ಪೆರ್ರಿ 28 ರನ್, ಜಾರ್ಜಿಯಾ 17 ರನ್, ಶಬ್ನೇನಿ ಮೇಘನಾ 27 ರನ್, ಕೊನೆಯಲ್ಲಿ ಸ್ನೇಹ್ ರಾಣಾ 6 ಎಸೆತಗಳಲ್ಲಿ 26 ರನ್ ಕೊಡುಗೆ ನೀಡಿದರು.

**ಡಬ್ಲ್ಯುಪಿಎಲ್ ಇತಿಹಾಸದಲ್ಲೇ ದಾಖಲೆಯ ರನ್:** ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಯುಪಿ ವಾರಿಯರ್ಸ್ ತಂಡ ಆರಂಭದಿಂದಲೇ ಆರ್‌ಸಿಬಿ ಬೌಲರ್‌ಗಳನ್ನು ಹಿಗ್ಗಾಮುಗ್ಗಾ ಬೆಂಡೆತ್ತಲು ಶುರು ಮಾಡಿತು. ಹೀಗಾಗಿ ನಿಗದಿತ 20 ಓವರ್‌ಗಳಲ್ಲಿ ಐದು ವಿಕೆಟ್ ನಷ್ಟಕ್ಕೆ 225 ರನ್‌ಗಳ ಬೃಹತ್ ಮೊತ್ತ ಪೇರಿಸಿತು. ಇದು ಇನ್ನಿಂಗ್ಸ್‌ವೊಂದರಲ್ಲಿ ತಂಡವೊಂದರಿಂದ ದಾಖಲಾದ ಗರಿಷ್ಠ ರನ್ ಸಹ ಆಗಿದೆ. ಮತ್ತೊಂದೆಡೆ ಅಜೇಯ 99 ರನ್ ಗಳಿಸಿದ ಜಾರ್ಜಿಯಾ, ಕೇವಲ ಒಂದು ರನ್ ಅಂತರದಿಂದ ಶತಕ ವಂಚಿತರಾದರು.

# ರಾಮುಲು ಅವಕಾಶ ಕೇಳಿದ್ದಷ್ಟೇ ಬಂತು!

## ಬಳ್ಳಾರಿಯಲ್ಲಿ ಚರ್ಚೆಗೆ ಗ್ರಾಸವಾದ ಅಮಿತ್ ಶಾ, ರೆಡ್ಡಿ ಭೇಟಿ

**ಬಳ್ಳಾರಿ:** ಕೇಂದ್ರ ಗ್ರಹ ಸಚಿವ ಅಮಿತ್ ಶಾ ಶುಕ್ರವಾರ ಬೆಂಗಳೂರಿಗೆ ಬಂದಿದ್ದ ವೇಳೆ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಬೇಕು ಎಂದು ಬಳ್ಳಾರಿಯ ಬಿಜೆಪಿ ನಾಯಕ ಶ್ರೀರಾಮುಲು ಬಯಸಿದ್ದರು. ಆದರೆ, ಇತ್ತೀಚಿಗಷ್ಟೇ ಅವರ ವಿರುದ್ಧ ಮುನಿಸಿಕೊಂಡಿರುವ ಶಾಸಕ ಜನಾರ್ದನ ರೆಡ್ಡಿ, ಅಮಿತ್ ಶಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಮತ್ತೊಂದೆಡೆ ರಾಮುಲುಗೆ ಅಮಿತ್ ಶಾ ಭೇಟಿಯಾಗುವ ಅವಕಾಶ ಸಿಗಲಿಲ್ಲ. ಇದು ಸದ್ಯ ಬಳ್ಳಾರಿ ರಾಜಕಾರಣದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ರಾಜ್ಯ ಬಿಜೆಪಿ ನಾಯಕರ ವಿರುದ್ಧ ಮುನಿಸಿಕೊಂಡ ಬಳಿಕ ದೆಹಲಿಗೆ ತೆರಳಿ ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ಅಳಲು ತೋಡಿಕೊಳ್ಳಲು ಶ್ರೀರಾಮುಲು ಮುಂದಾಗಿದ್ದರು. ಒಂದು ಬಾರಿ ಅವರನ್ನು ದೆಹಲಿಗೆ ಬರುವಂತೆ ಹೇಳಿದ್ದ ಹೈಕಮಾಂಡ್ ನಾಯಕರು, ನಂತರ ಸದ್ಯಕ್ಕೆ ಬರುವುದು ಬೇಡ ಎಂಬ ಸಂದೇಶ ಕಳುಹಿಸಿದ್ದರು. ಇದರಿಂದಾಗಿ ಹೈಕಮಾಂಡ್ ಮುಂದೆ ಅಸಮಾಧಾನ ಹೇಳಿಕೊಳ್ಳುವ ರಾಮುಲು ಪ್ರಯತ್ನಕ್ಕೆ ತಡೆಯಾಗಿತ್ತು.



**ರಾಮುಲುಗೆ ಸಿಗದ ಅವಕಾಶ:** ಇದೀಗ ಅಮಿತ್ ಶಾ ಬೆಂಗಳೂರಿಗೆ ಬರುವುದನ್ನೇ ರಾಮಲು ಎದುರು ನೋಡುತ್ತಿದ್ದರು. ಶಾ ಅವರೊಂದಿಗಿನ ತಮ್ಮ ಹಳೆಯ ಸ್ನೇಹವನ್ನು ಬಳಸಿಕೊಂಡು, ಅವರನ್ನು ಭೇಟಿಯಾಗಿ ಮಾತುಕತೆ ನಡೆಸುವ ಉತ್ಸಾಹದಿಂದ ಇದ್ದರು. ಆದರೆ ರಾಮುಲುಗೆ ಜನಾರ್ದನ ರೆಡ್ಡಿ ಟಕ್ಕರ್ ಕೊಟ್ಟಿದ್ದಾರೆ.

**ರಾಮುಲುಗೆ ರೆಡ್ಡಿ ಟಕ್ಕರ್:** ಗಂಗಾವತಿ ಶಾಸಕರಾಗಿರುವ ಗಾಲಿ ಜನಾರ್ದನ ರೆಡ್ಡಿ ಶುಕ್ರವಾರ ಕರ್ನಾಟಕ ಬಿಜೆಪಿ ಸಹ ಉಸ್ತುವಾರಿ ಸುಧಾಕರ್ ರೆಡ್ಡಿ ಜೊತೆಗೆ ಅಮಿತ್ ಶಾ ಅವರನ್ನು ಭೇಟಿಯಾಗಿ ನಡೆಸಿದ್ದಾರೆ.

ಮತ್ತೊಂದೆಡೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ, ಕೋರ್ ಕಮಿಟಿ ಸಭೆ ಬೆಳವಣಿಗೆ, ರಾಜ್ಯಸಭಾ ಸದಸ್ಯ ಸ್ಥಾನದ ಬಗ್ಗೆ ಚರ್ಚಿಸಲು ರಾಮುಲು ಅವಕಾಶ ಕೇಳಿದ್ದರು ಎಂದು ಬಿಜೆಪಿ ಮೂಲಗಳು ತಿಳಿಸಿದ್ದವು. ಆದರೆ, ರಾಮುಲು ಅವರಿಗಿಂತ ಒಂದು ಹೆಜ್ಜೆ ಮುಂದೆ ಹೋಗಿರುವ ಜನಾರ್ದನ ರೆಡ್ಡಿ, ಕೇಂದ್ರ ಗೃಹ ಸಚಿವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಇದು ರಾಜ್ಯ ರಾಜಕಾರಣಿಗಳಲ್ಲಿ ಕುತೂಹಲಕ್ಕೆ ಕಾರಣವಾಗಿದೆ.

ಶುಕ್ರವಾರ ಬೆಂಗಳೂರಿಗೆ ಆಗಮಿಸಿದ್ದ ಅಮಿತ್ ಶಾ, ಮಾರತ್ತಹಳ್ಳಿಯಲ್ಲಿ ನಡೆಯಲಿರುವ ''ವಿಶ್ವೇಶತೀರ್ಥ ಸ್ಮಾರಕ ಆಸ್ಪತ್ರೆ'' ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ಮಾಜಿ ಸಚಿವ ಅರವಿಂದ ಲಿಂಬಾವಳಿ ಒಂದೇ ವೇದಿಕೆಯಲ್ಲಿ ಕಾಣಿಸಿಕೊಂಡಿದ್ದರು. ಅಮಿತ್ ಶಾ ಭೇಟಿ ವೇಳೆ ರಾಜ್ಯ ರಾಜಕೀಯ ನಾಯಕರ ಭೇಟಿ, ಚರ್ಚೆ ನಿಗದಿಯಾಗಿರಲಿಲ್ಲ. ಆದಾಗ್ಯೂ ರಾಮುಲು ಭೇಟಿಗೆ ಅವಕಾಶ ದೊರೆಯದೆ, ರೆಡ್ಡಿ ಜತೆ ಶಾ ಮಾತುಕತೆ ನಡೆಸಿದ್ದು ಕುತೂಹಲ ಹೆಚ್ಚಿಸಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com